ಸಂಪುಟ: 14 Volume | ಸಂಚಿಕೆ: 53 Issue | ಪುಟಗಳು 08 Pages | ಶನಿವಾರ 30 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ನನ್ನ ಅಜ್ಜ ಯಾರೆಂದು ನನಗೆ ಗೊತ್ತಿಲ್ಲ; ಆದರೆ ಆತನ ಮೊಮ್ಮಗ ಏನಾಗಬೇಕೆಂದು ನನಗೆ ಗೊತ್ತಿದೆ.

–ಅಬ್ರಹಾಂ ಲಿಂಕನ್

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ



ಕಾಂಗ್ರೆಸ್ ವರಿಷ್ಠರು, ಲೋಕಸಭೆ ವಿರೋಧ ಪಕ್ಷದ ನಾಯಕರೂ ಆದ ರಾಹುಲ್ ಗಾಂಧಿ ಅವರನ್ನು ಡಿ ಕೆ ಶಿವಕುಮಾರ್ ಅವರು ನವದೆಹಲಿಯಲ್ಲಿ ಶುಕ್ರವಾರ ಭೇಟಿ ಮಾಡಿದ್ದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೂ ಉಪಸ್ಥಿತರಿದ್ದರು. ಇದಕ್ಕೂ ಮೊದಲು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ಅವರನ್ನೂ ಡಿ ಕೆ ಶಿವಕುಮಾರ್ ಅವರು ಭೇಟಿ ಮಾಡಿದ್ದರು.

## ಆಸ್ತಿ: 6 ಜನರ ಮೇಲೆ ಗುಂಡು, ಕೊಚ್ಚಿ ಕೊಲೆ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಚಡಚಣ ಪಟ್ಟಣ ಪಂಚಾಯಿತಿಯ ಸದಸ್ಯ ಚೇತನ ನಿರಾಳೆ ಹಾಗೂ ಕುಟುಂಬ ಸದಸ್ಯರಾದ ದುಂಡಪ್ಪ ನಿರಾಳೆ, ಶಿವಪುತ್ರ ನಿರಾಳೆ ಸೇರಿ ಆರು ಜನ ಜನರ ಭೀಕರ ಹತ್ಯೆಯಾಗಿದೆ.

ವಿಜಯಪುರ ಜಿಲ್ಲೆಯ ಚಡಚಣ ತಾಲೂಕಿನ ಗೋವಿಂದಪುರ ಗ್ರಾಮದ ಹೊರವಲಯದ ಜಮೀನಿನಲ್ಲಿ ಬರ್ಬರ ಹತ್ಯೆ ಈ ಹತ್ಯೆ ನಡೆದಿದ್ದು ಜನತೆಯನ್ನು ಬೆಚ್ಚಿ ಬೀಳಿಸಿದೆ. ಮಧ್ಯಾಹ್ನ ಈ ಘಟನೆ ನಡೆದಿದ್ದು, ಅಪ್ಪುಗೌಡ ಹಾಗೂ ಆತನ ಸಹಚರರು ಸೇರಿ ಗುಂಡಿನ ದಾಳಿ ನಡೆಸಿ ಮಾರಕಾಸ್ತ್ರಗಳಿಂದ ಹತ್ಯೆ ಮಾಡಿದ್ದಾರೆ ಎನ್ನಲಾಗಿದೆ. ಅಪ್ಪುಗೌಡ ಭೀಮಾತೀರದ ಹತ್ಯಾಕಾಂಡದಲ್ಲಿ ಹತನಾಗಿರುವ ಮಾಣಕಪ್ಪಮಾಸ್ತರನ ಸಂಬಂಧಿ ಎಂಬ ಮಾಹಿತಿ ಲಭ್ಯವಿದೆ.

ಅಂದಾಜು 25 ಎಕರೆ ವಿವಾದಿತ ಜಮೀನಿಗಾಗಿ ಈ ಕೊಲೆ ನಡೆದಿದೆ ಎಂದು ವರದಿಯಾಗಿದೆ. ನಿನ್ನೆ ಜಮೀನಿನಲ್ಲಿ ಕೃಷಿ ಚಟುವಟಿಕೆಗಾಗಿ ಸ್ವಚ್ಛಗೊಳಿಸಲು ನಿರಾಳೆ ಕುಟುಂಬದವರು ಬಂದಿದ್ದರು. ಈ ವೇಳೆ ಎರಡು ಕುಟುಂಬಗಳ ಮಧ್ಯೆ ಗಲಾಟೆ ನಡೆದು ಕೊಲೆಯಲ್ಲಿ ಅಂತ್ಯವಾಗಿದೆ. ಕೂಲಿ ಕೆಲಸಕ್ಕೆ ಬಂದಿದ್ದ ಶಬ್ಬೀರ್ ನದಾಫನನ್ನು ಸಹ ಹತ್ಯೆ ಮಾಡಲಾಗಿದೆ ಎಂದು ಪೋಲಿಸರು ತಿಳಿಸಿದ್ದಾರೆ.





## ಖಂಡ್ರೆಗೆ ಡಿಸಿಎಂ ಸ್ಥಾನ ನೀಡುವಂತೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಕಾಂಗ್ರೆಸ್ ಪಕ್ಷ ಬಲಪಡಿಸಿದ ಹಿರಿಯ ನಾಯಕರು, ರಾಜ್ಯದ ಪ್ರಭಾವಿ ರಾಜಕಾಣಿ ಅಖಿಲ ಭಾರತ ವೀರಶೈವ ಲಿಂಗಾಯತ್ ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷರು, ಕಲ್ಯಾಣ ಕರ್ನಾಟಕ ಹೆಮ್ಮೆಯ ಪುತ್ರರಾದ ಈಶ್ವರ ಖಂಡ್ರೆರವರು ಹಲವು ವರ್ಷಗಳಿಂದ ಪಕ್ಷದ ಸಂಘಟನೆ ಹಾಗೂ ಜನಸೇವೆಯಲ್ಲಿ ತೊಡಗಿಸಿಕೊಂಡು ಮಹತ್ವದ ಸೇವೆ ಸಲ್ಲಿಸಿದ್ದಾರೆ. ಅವರ ರಾಜಕೀಯ ಅನುಭವ, ಆಡಳಿತ ಸಾಮರ್ಥ್ಯ ಹಾಗೂ ಪಕ್ಷದ ಇರುವ ನಿಷ್ಠೆ ರಾಜ್ಯದ ಜನರಲ್ಲಿ ಅಪಾರ ಗೌರವವನ್ನು ತಂದಿದೆ.

ರಾಜ್ಯದ ವಿವಿಧ ಭಾಗಗಳಲ್ಲಿ ಪಕ್ಷವನ್ನು ಬಲಪಡಿಸುವಲ್ಲಿ ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಅವರು ಸದಾ ಮುಂಚೂಣಿಯಲ್ಲಿದ್ದು, ಕಾರ್ಯಕರ್ತರ ವಿಶ್ವಾಸಾರ್ಹ ನಾಯಕರಾಗಿ ಗುರುತಿಸಿಕೊಂಡಿದ್ದಾರೆ. ಆದ್ದರಿಂದ,



ಕರ್ನಾಟಕ ರಾಜ್ಯದ ಉಪ ಮುಖ್ಯಮಂತ್ರಿ ಸ್ಥಾನಕ್ಕೆ ಈಶ್ವರ ಖಂಡ್ರೆ ರವರನ್ನು ನೇಮಕ ಮಾಡಿಕೊಡಬೇಕು ಎಂದು ಹೈಕಮಾಂಡ್ ಗೆ ಬರೆದ ಮನವಿ ಪತ್ರದಲ್ಲಿ ಬೀದರ ಈಶ್ವರ ಖಂಡ್ರೆಸಾಬ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ಸುಧಾಕರ ಭಾಸ್ಕರ್ ಒತ್ತಾಯಿಸಿದ್ದಾರೆ.

## ಸಾಮೂಹಿಕ ವಿವಾಹ ಯಶಸ್ವಿ



**ಗಂಗಾವತಿ:** ಸಮೀಪದ ಹೇರೂರು ಗ್ರಾಮದಲ್ಲಿ ಶ್ರೀ ಗಂಗಾಪರಮೇಶ್ವರಿ ಸೇವಾ ಸಮಿತಿ ಶ್ರೀ ಅಂಬಿಗರ ಚೌಡಯ್ಯ ಯುವಕ ಸಂಘ ಇವರ ಆಶ್ರಯದಲ್ಲಿ ಶ್ರೀ ಗಂಗಾಪರಮೇಶ್ವರಿ ದೇವಿಯ ಜಾತ್ರಾ ಮಹೋತ್ಸವ ಹಾಗೂ ಸಾಮೂಹಿಕ ವಿವಾಹಗಳು ಅದ್ದೂ-ರಿಯಾಗಿ ವೈಭವದಿಂದ ಜರುಗಿದವು ಜಾತ್ರಾ ಮಹೋತ್ಸವದ ಅಂಗವಾಗಿ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು ನಂತರ ಶ್ರೀ ಗಂಗಾಪರಮೇಶ್ವರಿ ದೇವಿಯ ಭಾವಚಿತ್ರದ ಮೆರವಣಿಗೆಯು ಕುಂಭ ಕಳಸದೊಂದಿಗೆ ಹೇರೂರು ಗ್ರಾಮದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿತು ಸಾಮೂಹಿಕ ವಿವಾಹಗಳು ಜರುಗಿದ ನಂತರ ಭಕ್ತಾದಿಗಳಿಗೆ ಮತ್ತು ಸಾರ್ವಜನಿಕರಿಗೆ ಅನ್ನ ಸಂತರ್ಪಣೆ ವ್ಯವಸ್ಥೆ ನಡೆಯಿತು ಹೇರೂರು ಗ್ರಾಮದ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾಗಿರುವ ಶಶಿಧರ್ ಗೌಡ ಮಾಲಿ ಪಾಟೀಲ್ ಮಾತನಾಡಿ ಸಾಮೂಹಿಕ ವಿವಾಹಗಳಿಂದ ದುಂದು ವೆಚ್ಚಕ್ಕೆ ಕಡಿವಾಣ ಹಾಕಲು ಅತ್ಯಂತ ಸಹಕಾರಿಯಾಗಿದೆ. ವಿಶೇಷವಾಗಿ ದೇವಿಯ ಸನ್ನಿಧಾನದಲ್ಲಿ ನೂತನ ದಾಂಪತ್ಯ ಜೀವನಕ್ಕೆ ಪಾದಾರ್ಪಣೆ ಮಾಡುತ್ತಿರುವ ವಧು–ವರರು ಸುಖ ಶಾಂತಿ ಹಾಗೂ ಸಮೃದ್ಧ ಜೀವನಕ್ಕೆ ಅಮ್ಮನವರು ಅನುಗ್ರಹ ನೀಡುವಂತಾಗಲಿ ಎಂದು ತಿಳಿಸಿದರು.

# ಸರ್ಕಾರ ರಚನೆಗೆ ಸರ್ಕಸ್

### ಗವರ್ನರ್ ಥಾವರ್ ಚಂದ್ ಗೆಹ್ಲೋತ್ ಅವರಿಂದ ಸಿಎಂ ರಾಜಿನಾಮೆ ಅಂಗೀಕಾರ | ಗರಿಗೆದರಿದ ರಾಜಕೀಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಿದ್ದರಾಮಯ್ಯನವರ ರಾಜೀನಾಮೆ ಪತ್ರವನ್ನು ಗವರ್ನರ್ ಥಾವರ್ ಚಂದ್ ಗೆಹ್ಲೋತ್, ಅಂಗೀಕರಿಸಿದ್ದಾರೆ. ಸರ್ಕಾರ ರಚನೆಗೆ ಕರ್ನಾಟಕ ಕಾಂಗ್ರೆಸ್ ಸಕಲ ಸನ್ನದ್ಧವಾಗಿದೆ. ಏತನ್ಮಧ್ಯೆ ದೆಹಲಿಗೆ ತೆರಳಿದ್ದ ಸಿದ್ದರಾಮಯ್ಯನವರ ವಿಶೇಷ ವಿಮಾನ, ಹವಾಮಾನ ವೈಪರೀತ್ಯದಿಂದಾಗಿ ಜೈಪುರದಲ್ಲಿ ಲ್ಯಾಂಡ್ ಆಗಿದ್ದು, ಸ್ವಲ್ಪ ಸಮಯದ ನಂತರ ದೆಹಲಿ ತಲುಪಿದ್ದಾರೆ. ಹೊಸ ಸರ್ಕಾರ, ಹೊಸ ಮುಖ್ಯಮಂತ್ರಿ ಬರುವುದು ಕನ್ಫರ್ಮ್ ಆದ ಬೆನ್ನಲ್ಲೇ, ಸಚಿವ ಸ್ಥಾನದ ಆಕಾಂಕ್ಷಿಗಳ ಪಟ್ಟಿ ಒಂದೇ ಸಮನೆ ಏರಲು ಆರಂಭಿಸಿದೆ.

**ಮಾರ್ಗದರ್ಶನವೇ ಭಾಗ್ಯ:** ಸಿದ್ದರಾಮಯ್ಯ ಅವರ ಆಡಳಿತದಲ್ಲಿ ನಾನು ಸಚಿವನಾಗಿ, ಉಪಮುಖ್ಯಮಂತ್ರಿಯಾಗಿ ಮಾರ್ಗದರ್ಶನ ಪಡೆದುಕೊಂಡಿದ್ದು ನನ್ನ ಭಾಗ್ಯ. ಮುಂದಿನ ದಿನಗಳಲ್ಲೂ ರಾಜ್ಯದ ಹಿತದೃಷ್ಟಿಯಿಂದ ಹಾಗೂ ನಮ ಪಕ್ಷದ ಬಲವರ್ಧನೆಗೆ ಅವರ ಮಾರ್ಗದರ್ಶನ ಕಾರಣ ಎಂದಿದ್ದಾರೆ ಡಿಕೆಶಿ.



### ಸಚಿವ ಸಂಪುಟ ರಿಸೈನ್

ಮುಖ್ಯಮಂತ್ರಿಗಳು ರಾಜೀನಾಮೆ ನೀಡುವುದೆಂದರೆ, ಇಡೀ ಸಚಿವ ಸಂಪುಟವೇ ರಾಜೀನಾಮೆ ನೀಡಿದಂತೆ. ಹೊಸದಾಗಿ ಸರ್ಕಾರ ರಚನೆಯಾಗಬೇಕಾಗಿರುವ ಹಿನ್ನಲೆಯಲ್ಲಿ, ಜಿಲ್ಲಾವಾರು ಆಕಾಂಕ್ಷಿಗಳ ಪಟ್ಟಿ ಏರಲು ಆರಂಭಿಸಿದೆ. ಈಗ ಸಚಿವರಾಗಿರುವವರು, ಸಚಿವರಾಗಲು ಬಯಸುತ್ತಿರುವವರ ಸಂಖ್ಯೆ ಹೆಚ್ಚುತ್ತಲೇ ಇದೆ. ಜೊತೆಗೆ, ತೀವ್ರ ಲಾಬಿಗಳು ಆರಂಭವಾಗಿದೆ.

### ಸಿಎಲ್ಪಿ ನಾಯಕನ ಆಯ್ಕೆ

ಶಾಸಕಾಂಗ ಪಕ್ಷದ ಸಭೆ ಶನಿವಾರ ನಡೆಯಲಿದೆ. ಸಿಎಲ್ಪಿ ನಾಯಕನಾಗಿರುವ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದಾರೆ. ಬಳಿಕ ನೂತನ ನಾಯಕನ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಡಿಕೆಶಿ ಅವರನ್ನು ಕಾಂಗ್ರೆಸ್ ಶಾಸಕರು ಸಿಎಲ್ಪಿ ನಾಯಕನನ್ನಾಗಿ ಆಯ್ಕೆ ಮಾಡಲಿದ್ದಾರೆ. ಶಾಸಕರ ವಿರೋಧ ವ್ಯಕ್ತವಾಗುತ್ತಾ ಎನ್ನುವುದು ಮಾತ್ರ ಕಾದು ನೋಡಬೇಕಿದೆ.

### ಪ್ರಮಾಣ ವಚನ ಯಾವಾಗ?

ಸದ್ಯ ಪ್ರಮಾಣ ವಚನದ ದಿನ ಕುತೂಹಲಕ್ಕೆ ಕಾರಣವಾಗಿದೆ. ಡಿಕೆ ಶಿವಕುಮಾರ್ ಅವರನ್ನು ಸಿಎಲ್ಪಿ ಸಭೆಯಲ್ಲಿ ನಾಯಕರಾಗಿ ಆಯ್ಕೆ ಮಾಡಿದ ಬಳಿಕ ಪ್ರಮಾಣ ವಚನ ದಿನಾಂಕ ನಿಗದಿಯಾಗಲಿದೆ. ಈಗಾಗಲೇ ಸಿದ್ದತೆಗಳು ನಡೆ–ಯುತ್ತಿದೆ. ಭಾನುವಾರ ಅಥವಾ ಸೋಮವಾರ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮ ನಡೆಯಲಿದೆ ಎಂಬ ಮಾಹಿತಿ ಇದೆ.

### ದೆಹಲಿಯಲ್ಲಿ ಸಿದ್ದು, ಡಿಕೆಶಿ ರೌಂಡ್ಸ್

ದೆಹಲಿಯಲ್ಲಿ ಸಿದ್ದರಾಮಯ್ಯ–ಡಿಕೆಶಿವಕುಮಾರ್ ಅವರು ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಸಿದ್ರಾಮಯ್ಯ ಅವರು ರಾಹುಲ್, ಮಲ್ಲಿಕಾರ್ಜುನ ಖರ್ಗೆ, ವೇಣುಗೋಪಾಲ್ ಅವರನ್ನು ಭೇಟಿ ಮಾಡಿದ್ದು, ಡಿಕೆಶಿ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಜೊತೆಗೆ ರಾಗಾ ಸೇರಿ ಎಲ್ಲ ವರಿಷ್ಠರನ್ನೂ ಭೇಟಿ ಮಾಡಿ ಆಶೀರ್ವಾದ ಪಡೆದಿದ್ದಾರೆ.



ಹುಣಸೂರು ನಗರದ ಮಸೀದಿಯಿಂದ ಜಮಾತ್ ಒಳಗೊಂಡು ಸೇರಿ ತಜ್ಬಿ ಹೇಳುತ್ತಾ ಈದುಲ್ ಜುಹ ನಮಾಜ್ ನೆರವೇರಿಸಲು ನಗರದ ಸಂವಿಧಾನ ವೃತ್ತ ಪಕ್ಕ ಹೃದಯ ಭಾಗದಲ್ಲಿರುವ ಈದ್ಗಾ ಮೈದಾನಕ್ಕೆ ಮುಸ್ಲಿಂ ಬಾಂಧವರು ತರುಳಿ ಈದುಲ್ ಜುಹ ನಮಾಜನ್ನು ಮಸೀದಿ ಆಲಾ ಗುರುಗಳಾದ ಖಿಯಾಮುದ್ದೀನ್ ರವರ ನೇತೃತ್ವದಲ್ಲಿ ನಡೆಯಿತು.

## ಬೀಜ ವಿತರಣೆ ವಿಳಂಬ: ಹೋರಾಟದ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

2026–27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ಹಾಗೂ ರಸಗೊಬ್ಬರ ವಿತರಣೆಯಲ್ಲಿ ಭಾಲ್ಕಿ ತಾಲೂಕಿನ ರೈತರಿಗೆ ತಾರತಮ್ಯ ಮಾಡಲಾಗುತ್ತಿದೆ ಎಂದು ಮಾಜಿ ಶಾಸಕರಾದ ಶ್ರೀ ಪ್ರಕಾಶ್ ಖಂಡ್ರೆ ಆರೋಪಿಸಿದ್ದಾರೆ.



ಬೀದರ್ ಜಿಲ್ಲೆಯ ಇತರೆ ತಾಲೂಕುಗಳಲ್ಲಿ ಈಗಾಗಲೇ ರೈತರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ವಿತರಣೆ ಪ್ರಾರಂಭವಾಗಿದ್ದರೂ, ಭಾಲ್ಕಿ ತಾಲೂಕಿನ ರೈತರಿಗೆ ಇನ್ನೂ ವಿತರಣೆ ಮಾಡದಿರುವುದು ಜಿಲ್ಲಾಡಳಿತ ಮತ್ತು ಕೃಷಿ ಇಲಾಖೆಯ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಅವರು ತಿಳಿಸಿದ್ದಾರೆ.

ಮುಂಗಾರು ಹಂಗಾಮು ಆರಂಭವಾಗಿರುವ ಹಿನ್ನೆಲೆಯಲ್ಲಿ ರೈತರು ಕೃಷಿ ಚಟುವಟಿಕೆಗಳಿಗೆ ಸಿದ್ಧರಾಗಿದ್ದು, ತಕ್ಷಣವೇ ರೈತ ಸಂಪರ್ಕ ಕೇಂದ್ರಗಳ ಮೂಲಕ ಗುಣಮಟ್ಟದ ಬೀಜ ಹಾಗೂ ಅಗತ್ಯ ರಸಗೊಬ್ಬರ ವಿತರಣೆ ಮಾಡಬೇಕು ಎಂದು ಆಗ್ರಹಿಸಿದರು.

## ಉಪಮುಖ್ಯಮಂತ್ರಿ ಸ್ಥಾನಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ರಾಜಕಾರಣದಲ್ಲಿ ಹಿರಿಯ ಅನುಭವ ಹೊಂದಿರುವ ಸಚಿವ ಈಶ್ವರ ಖಂಡ್ರೆ ಅವರು ಹಲವು ವರ್ಷಗಳಿಂದ ಪಕ್ಷ ಸಂಘಟನೆ ಹಾಗೂ ಜನಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಹಿಂದುಳಿದ ಪ್ರದೇಶಗಳ ಅಭಿವೃದ್ಧಿ, ರೈತರ ಸಮಸ್ಯೆಗಳ ಪರಿಹಾರ ಹಾಗೂ ಸಮಾಜದ ವಿವಿಧ ವರ್ಗಗಳ ಪರವಾಗಿ ಕೆಲಸ ಮಾಡಿರುವ ನಾಯಕರಿಗೆ ಸರ್ಕಾರವು ಸೂಕ್ತ ಗೌರವ ನೀಡಬೇಕು ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ. ಖಂಡ್ರೆ ರವರು ರಾಜ್ಯ ಕೆಪಿಸಿಸಿ ಕಾರ್ಯಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದಾರೆ. ಸಚಿವರಾಗಿ ಉತ್ತಮ ಕಾರ್ಯ ನಿರ್ವಹಿಸಿದ್ದಾರೆ. ಹಾಗಾಗಿ ಅವರು ಸಾಕಷ್ಟು ಅನುಭವ ಹೊಮದಿರುವುದರಿಂದ ಇವರಿಗೆ ಡಿಸಿಎಂ ಸ್ಥಾನ ನೀಡಬೇಕೆಂದು ಮಾಣಿಕರೆಡ್ಡಿ ಮನವಿ ಮಾಡಿದ್ದಾರೆ. ಡಿಸಿಎಂ ಸ್ಥಾನ ನೀಡುವುದರಿಂದ ಪ್ರದೇಶೀಯ ಸಮತೋಲನಕ್ಕೂ ಸಹಾಯವಾಗುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ನೀರಮನಳ್ಳಿಯಲ್ಲಿ ಕುಡಿವ ನೀರಿಲ್ಲ, ರಸ್ತೆ ಚರಂಡಿಗಳೇ ಇಲ್ಲ..!

• ಸತೀಶ್ ತುಪ್ಪದ ಬೀದರ್

ತುಕ್ಕು ಹಿಡಿದಿರುವ ಶುದ್ಧ ನೀರಿನ ಘಟಕ, ಹದಗೆಟ್ಟ ರಸ್ತೆ, ಇನ್ನೂ ಇಲ್ಲದಂತಿರುವ ಚರಂಡಿಗಳು, ನೀರಿನ ಸಮಸ್ಯೆ... ಇದು ಭಾಲ್ಕಿ ತಾಲುಕಿನ ಬ್ಯಾಲಹಳ್ಳಿ ಗ್ರಾ.ಪಂ. ವ್ಯಾಪ್ತಿಯ ನಿರಮನಳ್ಳಿಯ ದುಸ್ಥಿತಿ. ಗ್ರಾ.ಪಂ. ಮಾಜಿ ಉಪಾಧ್ಯಕ್ಷರ ಸ್ವಂತ ಗ್ರಾಮದಲ್ಲೇ ಇಂತಹ ಸ್ಥಿತಿ ಇರುವಾಗ ಬೇರೆ ಗ್ರಾಮಗಳ ಸ್ಥಿತಿ ಇನ್ನೇನಿರಬಹುದು ಎಂಬ ಪ್ರಶ್ನೆಗೆ ಉತ್ತರ ಭೀಕರವಾಗಿದೆ. ಗ್ರಾಮದ ರಸ್ತೆ, ಚರಂಡಿ, ಶುದ್ಧ ಕುಡಿಯುವ ನೀರು ಸೇರಿದಂತೆ ಹಲವು ಮೂಲಸೌಕರ್ಯಗಳಿಂದ ವಂಚಿತವಾಗಿದೆ. ಬಹುತೇಕ ಬಡಾವಣೆಗಳಲ್ಲಿ ಸೂಕ್ತ ಚರಂಡಿಗಳು "ಇಲ್ಲ, ರಸ್ತೆಗಳೇ ಕೊಳಚೆ ನೀರು ಹರಿಯುತ್ತಿದ್ದು ದುರ್ನಾತ ಬೀರುತ್ತಿದೆ ಸೊಳ್ಳೆಗಳ ಕಾಟವೂ ಹೆಚ್ಚಳವಾಗಿದೆ. ಚರಂಡಿಗಳಲ್ಲಿ ಹೂಳು ತುಂಬಿಕೊಂಡಿದ್ದು ರಸ್ತೆಯ ಮೇಲೆ ಕೊಳಚೆ ನೀರು ಹರಿಯುತ್ತಿರುವ ಪರಿಣಾಮ ಗ್ರಾಮಸ್ಥರಲ್ಲಿ ಸಾಂಕ್ರಮಿಕ ರೋಗದ ಭೀತಿ ಕಾಡುತ್ತಿದೆ.

**ಸ್ವಚ್ಛತೆ ಬಗ್ಗಯೇ ಮನವಿ:** ಹಲವಾರು ತಿಂಗಳಿನಿಂದ ಪಂಚಾಯಿತಿ ಅಧಿಕಾರಿಗಳಿಗೆ ಗ್ರಾಮದ ವಾಸ್ತವ ಸ್ಥಿತಿ ಪರಿಶೀಲನೆ ಮಾಡಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಚರಂಡಿಗಳ ಸ್ವಚ್ಛತೆಯ ಬಗ್ಗೆ ಮನವಿ ಮಾಡಿಕೊಳ್ಳಲಾಗಿದೆ. ಅಧಿಕಾರಿಗಳು, ಜನಪ್ರತಿನಿದಿಗಳು ಬಂದು ಸಮಸ್ಯೆ ಆಲಿಸಿ ಹೋಗುತ್ತಾರೆಯೇ ಹೊರತು ಪರಿಹಾರ ನೀಡುತ್ತಿಲ್ಲ ಎಂಬುದು ಸಾರ್ವಜನಿಕರ ಗೋಳಾಗಿದೆ.

**ಪ್ರಗತಿಯ ಹೆಸರಲ್ಲಿ ಬರುವ ಅನುದಾನ ಎಲ್ಲಿ ಖರ್ಚಾಗುತ್ತಿದೆ?**

**ಪಂಚಾಯಿತಿ ಫಜೀತಿ**







### ಶುದ್ಧ ನೀರಿಲ್ಲ, ಮಲೇರಿಯಾ ಡೆಂಗೆ ಎಲ್ಲಾ..!

ಗ್ರಾಮದಲ್ಲಿ 400ಕ್ಕೂ ಹೆಚ್ಚು ಮನೆಗಳಿದ್ದು, 1000 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿದೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಜಲ ಜೀವನ ಮಷಿನ್ ಕಾಮಗಾರಿ ಉಪಯೋಗಕ್ಕೆ ಬಾರದಂತಾಗಿದೆ. ಅನೇಕ ವರ್ಷಗಳಿಂದ ಚರಂಡಿ ಸಮಸ್ಯೆ ಕಾಡುತ್ತಿದೇ. ಚರಂಡಿಗಳ ನೀರು ಮನೆ ಮುಂದೆ ನಿಲ್ಲುತ್ತಿದೆ. ನಮ್ಮ ಮಕ್ಕಳಿಗೆ ಮಲೇರಿಯಾ, ಡೆಂಗೆಗಳಂಥ ರೋಗಗಳು ಆಗಾಗ ಕಾಡುತ್ತವೆ. ಹೀಗಾಗಿ ಸಂಬಂಧಪಟ್ಟವರು ರಸ್ತೆ ನಿರ್ಮಾಣ ಮಾಡಬೇಕು ಎಂದು ಗ್ರಾಮದ ಮಹಿಳೆಯರು ಹಾಗೂ ಸಾರ್ವಜನಿಕರು ಆಗ್ರಹಿಸಿದ್ದಾರೆ.

### ಅಧಿಕಾರಿ ಕೇಳಲ್ಲ, ಶಾಸಕರೂ ಬರಲ್ಲ..!

ಒಂದು ಬಡಾವಣೆಗೆ ನೀರು ಬಂದರೆ ಇದರ ಪಕ್ಕದ ಬಡಾವಣೆಯಲ್ಲಿ ನೀರಿಗಾಗಿ ಹಾಹಾಕಾರ ಉಂಟಾಗುತ್ತದೆ. ಸರ್ಕಾರದ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿದರೂ ಸಮರ್ಕವಾಗಿ ನೀರು ಬರುತ್ತಿಲ್ಲ. ಶಾಸಕರೂ, ಇತ್ತ ತಿರುಗಿ ನೋಡುವುದಿಲ್ಲ. ಅಧಿಕಾರಿಗಳು ಕಚೇರಿಗೆ ಮಾತ್ರ ಸೀಮಿತ. ಯಾರಿಗೆ ನಮ್ಮ ಸಮಸ್ಯೆ ಹೇಳ್ಬೇಕು ಎಂದು ಗ್ರಾಮದ ಜನರ ಆಕ್ರೋಶಕ್ಕೆ ವ್ಯಕ್ತಪಡಿಸಿದರು.

ಗ್ರಾಮದ ರಸ್ತೆಯ ಮೇಲೆ ಚರಂಡಿ ನೀರು ಹರಿಯುತ್ತಿರುವುದು ನಿಜಕ್ಕೂ ಗಂಭೀರವಾದ ಸಮಸ್ಯೆಯಾಗಿದ್ದು ನೀವು ನನ್ನ ಗಮನಕ್ಕೆ ತಂದಿದ್ದೀರಿ ಇದರ ಬಗ್ಗೆ ತಕ್ಷಣವೇ ನಮ್ಮ ಸಿಬ್ಬಂದಿಯವರನ್ನು ಸ್ಥಳಕ್ಕೆ ಕಳುಹಿಸಿ ಸರಿಪಡಿಸುವ ಕೆಲಸ ಮಾಡುತ್ತೇನೆ ಗ್ರಾಮಸ್ಥರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುತ್ತೇನೆ.

–ಪ್ರವೀಣ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಬ್ಯಾಲಹಳ್ಳಿ

### ತುಕ್ಕು ಹಿಡಿದ ಶುದ್ಧ ನೀರಿನ ಘಟಕ

ಗ್ರಾಮದಲ್ಲಿ ನಿರ್ಮಿಸಲಾದ ಶುದ್ಧ ಕುಡಿಯುವ ನೀರಿನ ಘಟಕವೂ ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಘಟಕದ ಯಂತ್ರೋಪಕರಣಗಳು ತುಕ್ಕು ಹಿಡಿದ ಸ್ಥಿತಿಯಲ್ಲಿದೆ. ಸರಿಯಾದ ನಿರ್ವಹಣೆ ಇಲ್ಲದ ಕಾರಣ ಸಾರ್ವಜನಿಕರಿಗೆ ಸಮರ್ಪಕವಾಗಿ ಶುದ್ಧ ನೀರು ದೊರೆಯುತ್ತಿಲ್ಲ.

### ಪ್ರಗತಿ ಬಿಡಿ, ಸ್ವಚ್ಛತೆ ಬಗ್ಗೆ ಮಾತಾಡ್ಬೇಡಿ..!

ಗ್ರಾಮದಲ್ಲಿ ಸ್ವಚ್ಛತೆ ಕಾಣದ ಚರಂಡಿಗಳು ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟುಮಾಡುತ್ತಿವೆ. ಚರಂಡಿಗಳಲ್ಲಿ ಕಸ, ಪ್ಲಾಸ್ಟಿಕ್ ಹಾಗೂ ನಿಂತ ನೀರು ತುಂಬಿಕೊಂಡ ಪರಿಣಾಮ ದುರ್ವಾಸನೆ ಹರಡುತ್ತಿದ್ದು, ಸೊಳ್ಳೆಗಳ ಕಾಟ ಹೆಚ್ಚಾಗಿದೆ. ಇದರಿಂದ ಗ್ರಾಮಸ್ಥರಲ್ಲಿ ಆರೋಗ್ಯದ ಆತಂಕ ಕೂಡ ಹೆಚ್ಚಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಚರಂಡಿ ಸ್ವಚ್ಛತೆಗೆ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

**ಇಡೀ ವಿಶ್ವವೇ ದೂರವಾದರೂ ಭಾರತ ನಮ್ಮ ಜೊತೆ ನಿಂತಿದೆ, 'ಭಾರತೀಯರು ಇಸ್ರೇಲ್‌ನ್ನು ಹುಚ್ಚರಂತೆ ಪ್ರೀತಿಸುತ್ತಾರೆ': ಬೆಂಜಮಿನ್ ನೆತನ್ಯಾಹು**

# ಈಶ್ವರ ಖಂಡ್ರೆ ಅಪರೂಪದ ರಾಜಕಾರಣಿ

ಇಂದಿನ ರಾಜಕಾರಣದಲ್ಲಿ ಜನಸೇವೆಗಿಂತ ಸ್ವಾರ್ಥ ರಾಜಕೀಯ ಹೆಚ್ಚಾಗುತ್ತಿರುವ ಸಂದರ್ಭದಲ್ಲಿ, ಜನರ ಸಮಸ್ಯೆಗಳಿಗೆ ಸ್ಪಂದಿಸಿ ಸರಳತೆ ಮತ್ತು ಸೌಜನ್ಯದಿಂದ ಕಾರ್ಯನಿರ್ವಹಿಸುವ ನಾಯಕರು ಅಪರೂಪವಾಗಿದ್ದಾರೆ. ಅಂತಹ ನಾಯಕರ ಸಾಲಿನಲ್ಲಿ ಸಚಿವ ಈಶ್ವರ ಖಂಡ್ರೆ ಅವರ ಹೆಸರು ವಿಶೇಷವಾಗಿ ಉಲ್ಲೇಖಿಸಬಹುದು.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ರಾಜಕೀಯ ಜೀವನದಲ್ಲಿ ದೀರ್ಘ ಅನುಭವ ಹೊಂದಿರುವ ಅವರು ಗ್ರಾಮೀಣ ಭಾಗದ ಜನರ ಸಮಸ್ಯೆಗಳನ್ನು ಸಮೀಪದಿಂದ ಅರಿತು ಕೆಲಸ ಮಾಡುವ ಗುಣವನ್ನು ಬೆಳೆಸಿಕೊಂಡಿದ್ದಾರೆ. ರೈತರು, ಕಾರ್ಮಿಕರು, ಬಡವರು ಹಾಗೂ ಸಾಮಾನ್ಯ ಜನರ ಪರವಾಗಿ ಸದಾ ಧ್ವನಿಯಾಗಿರುವುದು ಅವರ ರಾಜಕೀಯ ಜೀವನದ ಪ್ರಮುಖ



ಅಂಶವಾಗಿದೆ.ಅಧಿಕಾರದಲ್ಲಿದ್ದರೂಅಹಂಕಾರವಿಲ್ಲದೆ ಜನರೊಂದಿಗೆ ಬೆರೆತು ಕೆಲಸ ಮಾಡುವ ಸರಳ ವ್ಯಕ್ತಿತ್ವ ಅವರಿಗೆ ಅಪಾರ ಜನಪ್ರಿಯತೆ ತಂದಿದೆ.

ರಾಜಕಾರಣದಲ್ಲಿ ಮಾತಿಗಿಂತ ಕೆಲಸ ಮುಖ್ಯ ಎನ್ನುವುದನ್ನು ಈಶ್ವರ ಖಂಡ್ರೆ ಅವರು ಹಲವು ಬಾರಿ ಸಾಬೀತುಪಡಿಸಿದ್ದಾರೆ. ಅಭಿವೃದ್ಧಿ ಕಾರ್ಯಗಳು, ಮೂಲಭೂತ ಸೌಲಭ್ಯಗಳ ವಿಸ್ತರಣೆ ಹಾಗೂ ಸಾರ್ವಜನಿಕ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡುವ ಮೂಲಕ ಜನರ ವಿಶ್ವಾಸ ಗಳಿಸಿದ್ದಾರೆ. ಪಕ್ಷದ ಸಂಘಟನೆ ಬಲಪಡಿಸುವಲ್ಲಿಯೂ ಅವರು ಮಹತ್ವದ ಪಾತ್ರ ವಹಿಸಿದ್ದಾರೆ. ಇಂತಹ ಅನುಭವೀ ಹಾಗೂ ಜನಪರ ನಾಯಕರು ರಾಜಕಾರಣದಲ್ಲಿ ಹೆಚ್ಚಾಗಿ ಬೆಳೆದು ಬಂದಾಗ ಮಾತ್ರ ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತಷ್ಟು ಬಲವಾಗುತ್ತದೆ. ಜನರ ಸಂಕಷ್ಟಗಳಿಗೆ ಸ್ಪಂದಿಸುವ, ಅಭಿವೃದ್ಧಿಗೆ ಆದ್ಯತೆ ನೀಡುವ ಮತ್ತು ಸಮಾಜದ ಎಲ್ಲ ವರ್ಗಗಳನ್ನು ಒಗ್ಗೂಡಿಸಿಕೊಂಡು ಸಾಗುವ ನಾಯಕತ್ವ ಇಂದಿನ ಅಗತ್ಯವಾಗಿದೆ. ಈ ದೃಷ್ಟಿಯಿಂದ ಸಚಿವ ಈಶ್ವರ ಖಂಡ್ರೆ ಅವರು ಅಪರೂಪದ ರಾಜಕಾರಣಿ ಎನ್ನುವುದು ಅತಿಶಯೋಕ್ತಿ ಅಲ್ಲ. ಸಚಿವ ಈಶ್ವರ ಖಂಡ್ರೆ ರವರಿಗೆ ಉಪ ಮುಖ್ಯ ಮಂತ್ರಿ ಸ್ಥಾನಾ ನೀಡಬೇಕು ಎಂದು ಮಾಣಿಕ ರೆಡ್ಡಿ ಕೌಡಾಳೆ. ಕಾಂಗ್ರೆಸ್ ಪಕ್ಷದ ನಾಯಕರಿಗೆ ಮನವಿ ಮಾಡಿದ್ದಾರೆ.

# 19.23 ಲಕ್ಷ ಮೌಲ್ಯದ 38 ಕೆಜಿ ಗಾಂಜಾ ಜಪ್ತಿ



**ಬೀದರ್:** ನಗರದ ಗಾಂಧಿಗಂಜ್ ಪೊಲೀಸ್ ಠಾಣೆ ವ್ಯಾಪ್ತಿಯ ಸಂಗಮೇಶ್ವರ ಕಾಲೋನಿಯ ಮನೆಯಲ್ಲಿ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ ಸುಮಾರು 19,23,800 ಮೌಲ್ಯದ 38 ಕೆಜಿ 476 ಗ್ರಾಂ ಗಾಂಜಾವನ್ನು ಪೊಲೀಸರು ಜಪ್ತಿ ಮಾಡಿ, ಪ್ರಕರಣ ಸಂಬಂಧ ಒಬ್ಬ ಮಹಿಳೆಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಮಾಹಿತಿ ನೀಡಿದ್ದು, ಗಾಂಧಿಗಂಜ್ ಪೊಲೀಸ್ ಠಾಣೆ ವ್ಯಾಪ್ತಿಯ ಸಂಗಮೇಶ್ವರ ಕಾಲೋನಿಯ ಮನೆಯಲ್ಲಿ ಬಾಡಿಗೆಗೆ ವಾಸವಾಗಿದ್ದ ಮಹಿಳೆಯೊಬ್ಬಳು ಗಾಂಜಾವನ್ನು ಅಕ್ರಮವಾಗಿ ಸಂಗ್ರಹಿಸಿ ಮಾರಾಟ ಮಾಡುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಈ ಮಾಹಿತಿಯ ಮೇರೆಗೆ ಗಾಂಧಿಗಂಜ್ ಪೊಲೀಸ್ ಠಾಣೆಯ ಪೊಲೀಸರು ದಾಳಿ ನಡೆಸಿ ಮನೆಯನ್ನು ಶೋಧಿಸಿದಾಗ ಹಾಲ್ ರೂಮ್‌ನಲ್ಲಿ ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳಲ್ಲಿ ಖಾಕಿ ಬಣ್ಣದ ಟೇಪ್ ಸುತ್ತಿದ್ದ ಗಾಂಜಾ ಪ್ಯಾಕೆಟ್‌ಗಳು ಪತ್ತೆಯಾಗಿವೆ. ಪರಿಶೀಲನೆ ನಡೆಸಿದ ವೇಳೆ ಒಟ್ಟು 12 ಪ್ಯಾಕೆಟ್‌ಗಳಲ್ಲಿ 38.476 ಕೆಜಿ ಗಾಂಜಾ ಸಂಗ್ರಹಿಸಿಟ್ಟಿರುವುದು ಬೆಳಕಿಗೆ ಬಂದಿದೆ.

ಪೊಲೀಸರ ವಿಚಾರಣೆಯಲ್ಲಿ ಆರೋಪಿತ ಮಹಿಳೆ, ಜಂಬಗಿ ತಾಂಡಾದ ವ್ಯಕ್ತಿಯೊಬ್ಬರಿಂದ ಕಡಿಮೆ ಬೆಲೆಗೆ ಗಾಂಜಾ ಖರೀದಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಲು ಸಂಗ್ರಹಿಸಿಟ್ಟಿರುವುದಾಗಿ ತಿಳಿಸಿದ್ದಾಳೆ ಎನ್ನಲಾಗಿದೆ.

ಈ ಸಂಬಂಧ ಗಾಂಧಿಗಂಜ್ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 96/2026 ಅಡಿಯಲ್ಲಿ ಕಲಂ 20(ಬಿ)(2)(ಸಿ) ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು, ಅಕ್ರಮವಾಗಿ ಗಾಂಜಾ ಸಂಗ್ರಹಣೆ ಹಾಗೂ ಸರಬರಾಜು ಮಾಡಿದ ಇಬ್ಬರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಬಂಧಿತ ಮಹಿಳೆಯನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.

ಈ ಕಾರ್ಯಾಚರಣೆ ಪೊಲೀಸ್ ಅಧೀಕ್ಷಕರಾದ ಪ್ರದೀಪ್ ಗುಂಟಿ ಹಾಗೂ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಚಂದ್ರಕಾಂತ್ ಪೂಜಾರಿ

ಗಾಂಧಿಗಂಜ್ ಪೊಲೀಸ್ ಠಾಣೆಯ ಪಿಐ ಆನಂದರಾವ ಎಸ್. ಎನ್., ಸೆನ್ ಪೊಲೀಸ್ ಠಾಣೆಯ ಡಿಎಸ್‌ಪಿ ಎಸ್.ಎನ್. ಸನಾಧಿ, ಬೀದರ್ ಉಪ ವಿಭಾಗದ ಡಿವೈಎಸ್ಪಿ ದೂದ್ ಪೀರ್ ಹುಸೇನಸಾಬ್ ಮುಲ್ಲಾ ಅವರ ನೇತೃತ್ವದಲ್ಲಿ ತಂಡ ದಾಳಿ ನಡೆಸಿತು.

ಕಾರ್ಯಾಚರಣೆಯಲ್ಲಿ ಸಂಜುಕುಮಾರ, ಗಂಗಾಧರ, ಶಿವಲೀಲಾ ಸೇರಿದಂತೆ ಪೊಲೀಸ್ ಸಿಬ್ಬಂದಿ ಭಾಗವಹಿಸಿದ್ದರು. ಯಶಸ್ವಿ ಕಾರ್ಯಾಚರಣೆ ನಡೆಸಿದ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಶ್ಲಾಘಿಸಿದ್ದಾರೆ.

# ರಸಗೊಬ್ಬರ ಕೊರತೆ ನಿವಾರಣೆಗೆ ರೈತ ಸಂಘ ಆಗ್ರಹ





• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಜಿಲ್ಲೆಯಾದ್ಯಂತ ಉಂಟಾಗಿರುವ ರಸಗೊಬ್ಬರ ಕೊರತೆ ನಿವಾರಣೆ, ಎಫ್‌ಐಡಿ ವ್ಯವಸ್ಥೆ ರದ್ದುಪಡಿಸುವುದು ಹಾಗೂ ಕಾರಂಜಾ ಜಲಾಶಯದಿಂದ ಭೂಮಿ ಕಳೆದುಕೊಂಡ ರೈತರಿಗೆ ಸೂಕ್ತ ಪರಿಹಾರ ಒದಗಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಆಗ್ರಹಿಸಿದೆ.

ಈ ಕುರಿತು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದ ಸಂಘದ ಪದಾಧಿಕಾರಿಗಳು, ಪ್ರಸ್ತುತ ಸರ್ಕಾರ ಎಫ್‌ಐಡಿ ವ್ಯವಸ್ಥೆಯಡಿ ಕೇವಲ ಒಂದು ಚೀಲ ರಸಗೊಬ್ಬರ ಮಾತ್ರ ವಿತರಿಸಲು ಆದೇಶಿಸಿರುವುದು ರೈತರಿಗೆ ತೀವ್ರ ಅನಾನುಕೂಲ ಉಂಟುಮಾಡುತ್ತಿದೆ ಎಂದು ದೂರಿದರು. ಬೆಳೆಗಳಿಗೆ ಅಗತ್ಯವಿರುವಂತೆ ಎರಡು ರಿಂದ ಮೂರು ಕ್ವಿಂಟಾಲ್ ರಸಗೊಬ್ಬರ ವಿತರಿಸಿದಾಗ ಮಾತ್ರ ರೈತರಿಗೆ ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ಮಳೆಯ ಆರಂಭದೊಂದಿಗೆ ರಸಗೊಬ್ಬರದ ಕೊರತೆ ಎದ್ದು ಕಾಣುತ್ತಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ತಕ್ಷಣವೇ ರಸಗೊಬ್ಬರ ಮಾರಾಟಗಾರರೊಂದಿಗೆ ಸಭೆ ನಡೆಸಿ, ರೈತರಿಗೆ ಬೇಕಾದಷ್ಟು ಗೊಬ್ಬರ ವಿತರಿಸಲು ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇದಲ್ಲದೆ ಕಾರಂಜಾ ಜಲಾಶಯ ನಿರ್ಮಾಣದಿಂದ ಭೂಮಿ ಕಳೆದುಕೊಂಡ ರೈತರು ನಿರಂತರ ಹೋರಾಟ ನಡೆಸುತ್ತಿದ್ದರೂ ಸರ್ಕಾರ ಸಂಪೂರ್ಣ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಿದರು. ರೈತರ ಸಮಸ್ಯೆಗಳನ್ನು ಶೀಘ್ರದಲ್ಲೇ ಪರಿಹರಿಸದಿದ್ದರೆ ಮುಂದಿನ ದಿನಗಳಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಪ್ರವೀಣ್‌ಕುಮಾರ್ ರೇಕುಳಗಿ, ಪ್ರಧಾನ ಕಾರ್ಯದರ್ಶಿ ಬಸು ಪಾಟೀಲ್ ನೇವವಾಡ, ಬೀದರ ದಕ್ಷಿಣ ತಾಲೂಕು ಅಧ್ಯಕ್ಷ ಷಣ್ಮುಕಪ್ಪ ಶೇಖಾಪೂರ್, ಬೀದರ ನಗರ ಉಪಾಧ್ಯಕ್ಷ ಸಚಿನ್ ಕಾರಪಾಕಪಲ್ಲಿ, ದಕ್ಷಿಣ ಉಪಾಧ್ಯಕ್ಷ ಓಂಕಾರ್ ಸ್ವಾಮಿ ಬಾಪುರ್, ನೆಲವಾಡ ಗ್ರಾಮ ಅಧ್ಯಕ್ಷ ಮಹೇಶ್ ಬಿರಾದಾರ್, ಉಪಾಧ್ಯಕ್ಷ ಜ್ಞಾನೇಶ್ ಹಾಗೂ ರೈತ ಮುಖಂಡರಾದ ಶರಣಪ್ಪ ಖಾಶೆಂಪುರ, ವೀರೇಶ್ ಪಾಟೀಲ್, ಶುಭಾಷ್ ಚಿದ್ರೆ ಮತ್ತು ಚಂದು ರೆಡ್ಡಿ ಉಪಸ್ಥಿತರಿದ್ದರು.

# ಗ್ರಾಮೀಣ ಕಲೋತ್ಸವ- 2026

• **ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ**

ತಾಲೂಕಿನ ಚಿಕ್ಕಜಾಯಿಗನೂರಿನ ಗ್ರಾಮದಲ್ಲಿ ಶ್ರೀ ಗಾನಯೋಗಿ ಪಂಡಿತ್ ಪುಟ್ಟರಾಜ ಅಭಿರುಚಿ ಕಲ್ಚರ್ ಟ್ರಸ್ಟ್ ( ರಿ) ಹಾಗೂ ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ಸಂಯುಕ್ತ ಆಶ್ರಯದಲ್ಲಿ ಬುಧವಾರ ಸಂಜೆ ನಡೆದ ಗ್ರಾಮೀಣ ಕಲೋತ್ಸವ 2026 ಕಾರ್ಯಕ್ರಮ ಜರುಗಿತು.

ಕಲಾತಂಡಗಳ ಪ್ರದರ್ಶನವು ಪ್ರೇಕ್ಷಕರನ್ನು ರಂಜಿಸಿದವು ಕಲಾವಿದರು ಕಲೆಯ ಪ್ರದರ್ಶನಕ್ಕೆ ಪ್ರೇಕ್ಷಕರ ಚಪ್ಪಾಳೆ ಕೆಕೆ ಶಿಳ್ಳೆ ಹಾಕಿ ಸಂಭ್ರಮಿಸಿದ್ದು ಕಲಾತಂಡಗಳಿಗೆ ಉತ್ತೇಜನ ನೀಡಿದರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ ನಾಗರಾಜ್ ಅವರು ಮಾತನಾಡಿ ಇಲಾಖೆ ಗ್ರಾಮೀಣ ಭಾಗದಲ್ಲಿ ವಿವಿಧ ಕಲಾ ಪ್ರಕಾರಗಳನ್ನು ಪೋಷಿಸಲು ವಿವಿಧ ಯೋಜನೆಗಳನ್ನು ರೂಪಿಸಿದ್ದು ಈ ನಿಟ್ಟಿನಲ್ಲಿ ನಮ್ಮ ಕನ್ನಡ ಮತ್ತು ಸಂಸ್ಕೃತಿ ಇಲಾಖೆ



ಗ್ರಾಮೀಣ ಕಲೋತ್ಸವ 2026 ಗ್ರಾಮೀಣ ಜನರಗೆ ತಲುಪಿಸಿದೆ ಹಾಗಾಗಿ ಈ ಕಾರ್ಯಕ್ರಮವನ್ನು ಶ್ರೀ ಗಾನಯೋಗಿ ಪಂಡಿತ ಪುಟ್ಟರಾಜ ಅಭಿರುಚಿ ಕಲ್ಚರಲ್ ಟ್ರಸ್ಟ್(ರಿ) ಆಶ್ರಯದಲ್ಲಿ ಹಮ್ಮಿಕೊಂಡಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಪ್ರೇಕ್ಷಕರನ್ನು ನಮ್ಮ ಕಲೆ ಮತ್ತು ಸಂಸ್ಕೃತಿ ಉಳಿಸಲು ಇಲಾಖೆಯೊಂದಿಗೆ ಕೈ ಜೋಡಿಸಬೇಕೆಂದರು.

ಊರಿನ ಮುಖಂಡರಾದ ಅಮರೇಗೌಡ ಎಸ್ ಮರೇಗೌಡ, ಪಂಪನಗೌಡ, ಆನಂದ್ ರೆಡ್ಡಿ, ಜಡೇಶ್ ಸ್ವಾಮಿ, ರವಿಗೌಡ, ಶಂಕರಗೌಡ, ಹನುಮಪ್ಪ, ಫಕೀರಪ್ಪ ಉಪಸ್ಥಿತರಿದ್ದರು.

# ಬುದ್ಧ, ಬಸವ, ಅಂಬೇಡ್ಕರ್ ರತ್ನ ಪ್ರಶಸ್ತಿ

• **ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ**

ಸಾಹಿತ್ಯಕ್ಷೇತ್ರದಲ್ಲಿನ ಗಣನೀಯ ಸೇವೆಯನ್ನು ಪರಿಗಣಿಸಿ, ಲೇಖಕಿ ಶ್ರೀಮತಿ ಪಾರ್ವತಿ ಎಸ್. ಬೂದುರು ಅವರಿಗೆ ಶಹಾಪುರದ 'ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಸ್ವಾಭಿಮಾನಿ ಬಳಗ'ದ ವತಿಯಿಂದ ಪ್ರತಿಷ್ಠಿತ 'ಬುದ್ಧ, ಬಸವ, ಅಂಬೇಡ್ಕರ್ ರತ್ನ ಪ್ರಶಸ್ತಿ' ಘೋಷಿಸಲಾಗಿದೆ.

ಮೇ 31ರಂದು ಶಹಾಪುರದಲ್ಲಿ ಆಯೋಜಿಸಲಾಗಿರುವ ಬುದ್ಧ, ಬಸವ ಹಾಗೂ ಅಂಬೇಡ್ಕರ್ ಜಯಂತ್ಯೋತ್ಸವದ ಅಂಗವಾಗಿ, ವಿಭಾಗ ಮಟ್ಟದ ಕವಿಗೋಷ್ಠಿ ಮತ್ತು "ಕೋಲ್ಮಿಂಚಿನ ಬೆಳಕು" ಪುಸ್ತಕ ಲೋಕಾರ್ಪಣೆ ಸಮಾರಂಭದಲ್ಲಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು ಎಂದು ಸಂಘಟಕರು ತಿಳಿಸಿದ್ದಾರೆ.



# ಅನಧಿಕೃತ ಅಕ್ರಮ ಮರಳು ಸಾಗಾಟ, ಗಣಿಗಾರಿಕೆ: ಆರೋಪ

• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**

ತಾಲ್ಲೂಕಾದ್ಯಂತ ಅನಧಿಕೃತ ಮರಳು ಸಾಗಾಟ, ಅಕ್ರಮ ಗಣಿಗಾರಿಕೆ, ಪಡಿತರ ಅಕ್ಕಿ, ಮಟ್ಕಾ, ಜೂಜಾಟ ಸೇರಿದಂತೆ ಇತರೆ ಅಕ್ರಮ ಚಟುವಟಿಕೆಗಳು ರಾಜಾರೋಷವಾಗಿ ನಡೆಯುತ್ತಿದರು ಸಹ ಇಲ್ಲಿನ ತಾಲೂಕ ಆಡಳಿತ ಕಣ್ಣಿದು ಕುರುಡರಂತೆ ವರ್ತಿಸುತ್ತಿದೆ ಎಂಬ ಆರೋಪ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ. ಈ ಕುರಿತು ತಾಲೂಕ ಆಡಳಿತದ ವಿರುದ್ಧ ಕಂದಾಯ ಸಚಿವರಿಗೆ ಕೆಲವರು ಹೆಸರು ಹೇಳದೆ ಸಚಿವರಿಗೆ ದೂರನ್ನು ನೀಡಿದ್ದಾರೆ ಎಂಬ ಮಾಹಿತಿ ಪತ್ರಿಕೆಗೆ ತಿಳಿಸಿದ್ದಾರೆ. ಇದೆ ರೀತಿ ಅಕ್ರಮ ಮರಳು ಸಾಗಾಟ, ಅಕ್ರಮ, ಮಣ್ಣು, ಅಕ್ರಮ ಕಲ್ಲು ಗಣಿಗಾರಿಕೆ ಇವುಗಳಿಂದ ಸರ್ಕಾರಕ್ಕೆ ಕೋಟಿ ಗಟ್ಟಲೆ ಆದಾಯ ಹಾನಿಯಾಗುತ್ತಿದ್ದು ಹಾಗೂ ಪರಿಸರ ನಾಶವಾಗುತ್ತಿದೆ, ಈ ಬಗ್ಗೆ ಜಿಲ್ಲಾಡಳಿತ ಮಧ್ಯಸ್ಥಿಕೆ ವಹಿಸಿ ಅಕ್ರಮ ಚುಟುವಟಿಕೆಗಳು ತಡೆಯಬೇಕು ಎಂಬ ಒತ್ತಾಯ ಸಾರ್ವಜನಿಕರದಾಗಿದೆ.





**ತಿಂಗಳು ಬಂದರೆ ಸಾಕು ಪಡಿತರ ಅಕ್ಕಿ ನೀಡುವ ಅಂಗಡಿ ಅಕ್ಕ ಪಕ್ಕದಲ್ಲೇ ನಿಂತುಕೊಂಡು ಕೆಜಿ.ಗೆ 16ರೂಪಾಯಿ ದಂತೆ ಅಕ್ಕಿಯನ್ನು ಖರೀದಿ ಮಾಡಿ ಕಾಳಸಂತೆಯಲ್ಲಿ ಮಾರಾಟ ಮಾಡುವರಿಗೆ ಮಾರಾಟ ಮಾಡುತ್ತಾರೆ. ಪಡಿತರ ಅಕ್ಕಿ ನೀಡುತ್ತಿರುವ ಅಂಗಡಿವರಿಗೆ ಕೇಳಿದ್ದಾಗ, ನಾವು ಎಷ್ಟೋ ಬಾರಿ ಹೇಳಿದ್ದೇವೆ ನೀವು ಇಲ್ಲಿ ನಿಂತುಕೊಳ್ಳಬೇಡಿ ಎಂದು ಆದರೂ. ಅವರು ಕೇಳಲ್ಲ, ಏನೇ ಹೇಳಿದರೂ ಕ್ಯಾರೆ ಎನ್ನಲ್ಲ ಎನ್ನುತ್ತಾರೆ.**

# ಯುವ ಪೀಳಿಗೆಗೆ ಮಹಾರಾಣಾ ಪ್ರತಾಪ್‌ರವರ ಆದರ್ಶ ಅನಿವಾರ್ಯ

• **ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ**

ಇಂದಿನ ಯುವ ಪೀಳಿಗೆಯು ದೇಶಪ್ರೇಮ, ಧೈರ್ಯ ಮತ್ತು ಸ್ವಾಭಿಮಾನದ ಸಂಕೇತವಾಗಿರುವ ಮಹಾರಾಣಾ ಪ್ರತಾಪ್ ಅವರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ವಿಧಾನ ಪರಿಷತ್ ಶಾಸಕರಾದ ವಿಜಯಸಿಂಗ್ ತಿಳಿಸಿದರು.

ಅವರು ಗುರುವಾರ ಸಂಜೆ ಹುಮನಾಬಾದ ತಾಲ್ಲೂಕಿನ ವರವಟ್ಟಿ(ಕೆ) ಗ್ರಾಮದಲ್ಲಿ ಮಹಾರಾಣಾ ಪ್ರತಾಪ್ ಸಿಂಗ್ ರಜಪೂತ ಟ್ರಸ್ಟ್ (ರಿ) ವತಿಯಿಂದ ಆಯೋಜಿಸಿದ ವೀರ ಶಿರೋಮಣಿ ಮಹಾರಾಣಾ ಪ್ರತಾಪ ಸಿಂಹ ಅವರ 486ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಇಂದಿನ ಯುವಜನತೆ ಸಣ್ಣಪುಟ್ಟ ಕಷ್ಟಗಳಿಗೂ ಧೃತಿಗೆಡುತ್ತಿದ್ದಾರೆ. ಆದರೆ, ಅರಮನೆಯ ವೈಭೋಗವನ್ನು ತೊರೆದು ದೇಶಕ್ಕಾಗಿ ಕಾಡಿನಲ್ಲಿ ಕಷ್ಟದ ಜೀವನ ನಡೆಸಿದ ಮಹಾರಾಣಾ ಪ್ರತಾಪ್ ಅವರ ಇತಿಹಾಸವನ್ನು ಓದಿ, ಸವಾಲುಗಳನ್ನು ಧೈರ್ಯದಿಂದ ಎದುರಿಸುವುದನ್ನು ಕಲಿಯಬೇಕಿದೆ ಎಂದರು. ಹಲವು ವರ್ಷಗಳಿಂದ ವರವಟ್ಟಿ (ಕೆ) ಗ್ರಾಮದಲ್ಲಿ ಧೀರ ಪರಾಕ್ರಮಿ ಮಹಾರಾಣಾ ಪ್ರತಾಪ್ ಸಿಂಗ್ ಅವರ ಭವ್ಯ ಮೂರ್ತಿಯನ್ನು (ಪುತ್ಥಳಿ) ಬೇಡಿಕೆ ಇದ್ದು, ಶೀಘ್ರದಲ್ಲೇ ತಮ್ಮ ಸ್ವಂತ ಖರ್ಚಿನಲ್ಲಿ ಸ್ಥಾಪಿಸುವುದಾಗಿ ವಿಧಾನ ಪರಿಷತ್ ಶಾಸಕರು ಭರವಸೆ ನೀಡಿದರು.

ಶ್ರೀರಾಮ ಸೇನೆಯ ಬೀದರ ಜಿಲ್ಲಾಧ್ಯಕ್ಷರಾದ ವೀರುಸಿಂಗ್ ಠಾಕೂರ್ ಮಾತನಾಡಿ, ವರವಟ್ಟಿ ಗ್ರಾಮದಲ್ಲಿ ಮಹಾರಾಣಾ ಪ್ರತಾಪ್ ಅವರ ಜಯಂತೋತ್ಸವವನ್ನು ಇಷ್ಟು ಸಡಗರದಿಂದ ಆಚರಿಸುತ್ತಿರುವುದು ತುಂಬಾ ಸಂತಸ ತಂದಿದೆ. ಗ್ರಾಮದ ಈ ಚೌಕ್‌ನಲ್ಲಿ (ವೃತ್ತದಲ್ಲಿ) ಪ್ರತಾಪ್ ಸಿಂಗ್ ಅವರ ಮೂರ್ತಿ ಸ್ಥಾಪನೆಗಾಗಿ ಗ್ರಾಮಸ್ಥರು ಹಲವು ವರ್ಷಗಳಿಂದ ನಿರಂತರ ಹೋರಾಟ ಹಾಗೂ ಶ್ರಮ ವಹಿಸುತ್ತಿದ್ದಾರೆ. ಮುಂಬರುವ ದಿನಗಳಲ್ಲಿ ಈ ಜಾಗದಲ್ಲಿ ಮಹಾರಾಣಾ ಪ್ರತಾಪ್ ಅವರ ಭವ್ಯವಾದ ಅಶ್ವಾರೂಢ (ಕುದುರೆ ಸವಾರಿ ಶೈಲಿಯ) ಮೂರ್ತಿ ತಲೆ ಎತ್ತಬೇಕು ಎನ್ನುವುದು ನಮ್ಮೆಲ್ಲರ ಇಚ್ಛೆಯಾಗಿದ್ದು, ಇದಕ್ಕಾಗಿ ಮಾಜಿ ಎಂ.ಎಲ್.ಸಿ ವಿಜಯ ಸಿಂಗ್ ಅವರು ಈ ವೇದಿಕೆ ಮುಖಾಂತರ ಮೂರ್ತಿ ಸ್ಥಾಪಿಸುವುದಾಗಿ ಭರವಸೆ ನೀಡಿದ್ದಾರೆ ಇದಕ್ಕೆ ನಮ್ಮೆಲ್ಲರ ಸಂಪೂರ್ಣ ಬೆಂಬಲ ಹಾಗೂ ಸಹಕಾರ ಸದಾ ಇರಲಿದೆ ಎಂದು ಹೇಳಿದರು.

ಆದರಂತೆ ಬೀದರ ಜಿಲ್ಲಾ ಮಟ್ಟದಲ್ಲಿ ಜೂನ್ 17 ರಂದು ತಿಥಿಯ ಪ್ರಕಾರ ವೀರ ಶಿರೋಮಣಿ ಮಹಾರಾಣಾ ಪ್ರತಾಪ್ ಅವರ ಜಿಲ್ಲಾ ಮಟ್ಟದ ಜಯಂತೋತ್ಸವವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಬೀದರ ಜಿಲ್ಲೆಯ ಎಲ್ಲಾ ಸಮಾಜದ ಬಂಧುಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಯಂತಿಯ ಶೋಭೆಯನ್ನು ಹೆಚ್ಚಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಮಾಜದ ಹಿರಿಯ ಮುಖಂಡರಾದ ಈಶ್ವರ್ ಸಿಂಗ್ ಠಾಕೂರ್, ವರವಟ್ಟಿ ಗ್ರಾಮದ ರಜಪೂತ ಸಮಾಜದ ಅಧ್ಯಕ್ಷ ಮಹದೇವ್ ಸಿಂಗ್, ಉಪಾಧ್ಯಕ್ಷ ಅಮರ ಸಿಂಗ್, ಪ್ರಧಾನ ಕಾರ್ಯದರ್ಶಿ ಪ್ರಶಾಂತ್ ಸಿಂಗ್ ಠಾಕೂರ್, ಬೀದರನ ಯುವ ಮುಖಂಡರಾದ ಜಗಮೋಹನ್ ಸಿಂಗ್ ರಜಪೂತ, ಅಶೀಷ್ ಹಜಾರೆ, ಹುಮನಾಬಾದ ತಾಲೂಕು ರಜಪೂತ ಮಹಿಳಾ ಘಟಕದ ಅಧ್ಯಕ್ಷ ಕಲಾವತಿ ಠಾಕೂರ್, ಕಲಬುರಗಿಯ ಪ್ರಮುಖರಾದ ಮಹಾದೇವ ಪ್ರಸಾದ್ ತಿವಾರಿ ಸೇರಿದಂತೆ ಸಮಾಜದ ಮಹಿಳೆಯರು, ಸಾರ್ವಜನಿಕರು ಸೇರಿದಂತೆ ಹಲವರು ಭಾಗವಹಿಸಿದರು.



**ಹುಮನಾಬಾದ ಶಾಸಕ ಡಾ.ಸಿದ್ಧಲಿಂಗಪ್ಪ (ಸಿದ್ದು) ಪಾಟೀಲ್ ಭಾರತದ ಇತಿಹಾಸದಲ್ಲಿ ಶೌರ್ಯ, ಸ್ವಾಭಿಮಾನ ಮತ್ತು ಅಚಲ ದೇಶಭಕ್ತಿಯ ಪ್ರತೀಕವಾಗಿ ಅಮರರಾದ ಮಹಾರಾಣ ಪ್ರತಾಪ್ ಸಿಂಹ ಅವರು ಅನ್ಯಾಯದ ವಿರುದ್ಧ ಹೋರಾಡಿದ ಮಹಾನ್ ವೀರ ಯೋಧರು. ಹಲ್ದಿಘಾಟಿ ಯುದ್ಧದಲ್ಲಿ ತೋರಿದ ಅವರ ಸಾಹಸ, ಸ್ವಾತಂತ್ರ್ಯದ ಮೇಲಿನ ಅಪಾರ ಪ್ರೀತಿ ಮತ್ತು ಆತ್ಮಗೌರವದ ಬದುಕು ಇತಿಹಾಸದ ಚಿನ್ನದ ಅಕ್ಷರಗಳಲ್ಲಿ ಬರೆಯಲ್ಪಟ್ಟಿದೆ. ಜೀವನದಲ್ಲಿ ಎಷ್ಟೇ ಕಷ್ಟ ಬಂದರೂ ಸ್ವಾಭಿಮಾನವನ್ನು ಎಂದಿಗೂ ಕಳೆದುಕೊಳ್ಳಬಾರದು ಎಂಬ ಸಂದೇಶವನ್ನು ಮಹಾರಾಣ ಪ್ರತಾಪ್ ಸಿಂಹ ಅವರ ಸಾರಿದ್ದು ಇಂದಿಗೂ ಜಗತ್ತಿನಲ್ಲಿ ಅವಿಸ್ಮರಣೀಯವಾಗಿದೆ. ಕ್ಷೇತ್ರದ ಶಾಸಕನಾದ ಮೇಲೆ ಗ್ರಾಮದ ರೈತರ ಮತ್ತು ಸಾರ್ವಜನಿಕರ ಬಹುದಿನಗಳ ಬೇಡಿಕೆಯಾಗಿದ್ದ ವರವಟ್ಟಿ ಗ್ರಾಮದಿಂದ ಓತಗಿ ಗ್ರಾಮಕ್ಕೆ ಸಂಪರ್ಕಿಸುವ ರಸ್ತೆ ಮತ್ತು ಸೇತುವೆ ನಿರ್ಮಾಣಕ್ಕಾಗಿ ಸರಿ ಸುಮಾರು 1 ಕೋಟಿ 50 ಲಕ್ಷ ರೂಪಾಯಿ ಅನುದಾನವನ್ನ ನೀಡಲಾಗಿದ್ದು, ಕೆಲವೆ ದಿನಗಳಲ್ಲಿ ಕಾಮಗಾರಿಗೆ ಚಾಲನೆ ನೀಡಲಾಗುವುದು. ಹಾಗೆ ಪ್ರಸ್ತುತ ಸಾಲಿನಲ್ಲಿ ಗ್ರಾಮಕ್ಕೆ 45 ಲಕ್ಷ ರೂಪಾಯಿಗಳಲ್ಲಿ ಸಾರ್ವಜನಿಕ ಅನುಕೂಲಕ್ಕಾಗಿ ಸಮುದಾಯ ಭವನ ಮತ್ತು ಸಿ.ಸಿ.ರಸ್ತೆಗೆ ಅನುದಾನವನ್ನು ಒದಗಿಸಲಾಗಿದ್ದು, ಹಂತ ಹಂತವಾಗಿ ಗ್ರಾಮದ ಸಾರ್ವಗೀಣ ಅಭಿವೃದ್ಧಿಗಾಗಿ ನನ್ನ ಸಹಕಾರ ನೀಡುವುದಾಗಿ ತಿಳಿಸಿದರು. ಆದರಂತೆ ಇದೇ ವೇಳೆ ವರವಟ್ಟಿ (ಕೆ) ಗ್ರಾಮದಲ್ಲಿ ಸುಸಜ್ಜಿತ ರಜಪೂತ ಭವನ ಸ್ಥಾಪಿಸುವುದಾಗಿಯೂ ಶಾಸಕರು ಭರವಸೆ ನೀಡಿದರು.**

**–ಡಾ.ಸಿದ್ಧಲಿಂಗಪ್ಪ (ಸಿದ್ದು) ಪಾಟೀಲ್, ಶಾಸಕರು ಹುಮನಾಬಾದ ಮತಕ್ಷೇತ್ರ**

# ಮನೆ ನಿರ್ಮಾಣ ಕಾಮಗಾರಿ ವಿಳಂಬ:ಆದಿವಾಸಿಗಳ ಪ್ರತಿಭಟನೆ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ





ಆದಿವಾಸಿಗಳಿಗೆ ಮನೆ ನಿರ್ಮಾಣದ ಕಾಮಗಾರಿ 4 ವರ್ಷದಗಳ ವಿಳಂಬದಿಂದ ಕಚ್ಚಾ ಸಾಮಗ್ರಿಗಳ ದರ ಹೆಚ್ಚಳ ವಾಗಿದ್ದು ಗುತ್ತಿಗೆದಾರ ಹಿಂದೇಟು ಹಾಕಿರುವುದರಿಂದ ನಾವು ಬೀದಿ ಪಾಲಾಗುತ್ತಿದ್ದೇವೆ ಎಂದು ಕ ಗ್ರಾ ಮೂ ಸೌ ಅ ನಿ ನಿ ಹುಣಸೂರು ಕಚೇರಿ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸುವುದಾಗಿ ಫಲಾನುಭವಿಗಳು ಎಚ್ಚರಿಕೆ ನೀಡಿದ್ದಾರೆ.

ತಾಲೂಕಿನ ಉತ್ತೇನಹಳ್ಳಿ ಕಾಲೋನಿ. ಅಬ್ಬಳತಿ ಎ ಕಾಲೋನಿ. ರಾಣಿ ಗೇಟ್. ಲಿಂಗಪುರ ಗೌಡನಕಟ್ಟೆ ಸೇರಿದಂತೆ ನಾಲ್ಕು ಹಾಡಿಗಳಲ್ಲಿಆದಿವಾಸಿಗಳಜೇನುಕುರುಬರಗಾಗಿ 20 ವಸತಿ ಯೋಜನೆ ಅಡಿಯಲ್ಲಿ 2021–22 ನೇ ಸಾಲಿನಲ್ಲಿ ಫಲಾನುಭವಗಳನ್ನು ಗುರುತಿಸಿ ತಲ 5 ಲಕ್ಷ ರೂ ವೆಚ್ಚದಂತೆ ಮನೆ ನಿರ್ಮಾಣ ಮಾಡಿಕೊಡಲು ಜಿಲ್ಲಾ ಆಡಳಿತವು ನಿರ್ಧರಿಸಿತ್ತು.

ಅದರಂತೆ ಸಂಬಂಧಿಸಿದ ಆಯಾಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ದಾಖಲಾತಿಗಳನ್ನುನೀಡಿ ಮನೆ ನಿರ್ಮಾಣಕ್ಕೆ ಕಾಮಗಾರಿಗಳನ್ನು ಆರಂಭಿಸಲಾಯಿತು ಎಂದು ಫಲಾನುಭವಿ ಈರಮ್ಮ ತಿಳಿಸಿದ್ದಾರೆ.

ಮನೆನಿರ್ಮಾಣ ಮಾಡುತ್ತಿದ್ದ ಕೆಲಸಗಾರರು ಯಾವುದೇ ರೀತಿ ಗುಣಮಟ್ಟವನ್ನು ಕಾಯ್ದುಕೊಳ್ಳದೆ ಕಳಪೆ ಕಾಮಗಾರಿಗಳನ್ನು ಅಡಿಪಾಯದಿಂದಲೇ ಮಾಡಲಾಗಿದ್ದು ಈಗ ಅರ್ಧದಲ್ಲೇ ಬಿಟ್ಟು ಹೋಗಿ ವರ್ಷಗಳೇ ಕಳಿದಿದ್ದೇವೆ ಎಂದು ತಮ್ಮ ಅಸಹಾಯಕತೆ ವ್ಯಕ್ತಪಡಿಸುತ್ತಿದ್ದಾರೆ.

ಈ ಬಗ್ಗೆ ಜಿಲ್ಲಾ ಗಿರಿಜನ ಅಭಿವೃದ್ಧಿ ಸಮನ್ವಯ ಅಧಿಕಾರಿ ಮಲ್ಲೇಶ್ ಮತ್ತು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿ ಹುಣಸೂರು ವಿಭಾಗದ ಇಂಜಿನಿಯರ್ ವಿಜಯ್ ರವರು ಗಳನ್ನು ಭೇಟಿ ಮಾಡಿ ಹಾಗೂ ವಿವಿಧ ಜಾಗೃತಿ ಸಭೆಗಳಲ್ಲೂ ಪ್ರಸ್ತಾಪಿಸಿದ್ದರೂ ಸಹ ಯಾವುದೇ ಪ್ರಯೋಜನವಾಗಿಲ್ಲ ಎಂದು ತಾಲೂಕು ಆದಿವಾಸಿಗಳ ಕೃಷಿಕರ ಸಂಘದ ಅಧ್ಯಕ್ಷ ಜೆಡಿ ಜಯಪ್ಪ ದೂರಿದ್ದಾರೆ.

ಅಲ್ಲದೆ ಆದಿವಾಸಿಗಳಿಗಾಗಿ ಬಂದ ಯಾವುದೇ ಕಾಮಗಾರಿಗಳನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿ ರವರಿಗೆ ಯಾವುದೇ ಕಾರಣಕ್ಕೂ ನೀಡಬಾರದು ಎಂದು ಜಿಲ್ಲಾ ಆಡಳಿತವನ್ನು ಅವರು ಒತ್ತಾಯಿಸಿದ್ದಾರೆ.

ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರಾದ ಸಚಿವ ಕೆ ವೆಂಕಟೇಶ್ ರವರು ಭೇಟಿ ನೀಡುತ್ತಿದ್ದಾರೆ ಎಂಬ ವಿಷಯ ತಿಳಿದು ಪ್ರವಾಸದಸಂದರ್ಭದಲ್ಲಿಯಂತ್ರೋಪಕರಣಗಳನ್ನು ತಂದು ಮೇಲ್ಛಾವಣಿಯ ಕಬ್ಬಿಣದ ಕೆಲಸ ಸ್ವಲ್ಪಮಟ್ಟಿಗೆ ಮಾಡಿದರೆ ವಿನಃ ಈಗ ನಾಪತ್ತೆಯಾಗಿದ್ದಾರೆ ಎಂದು ಆದಿವಾಸಿಗಳ ಮುಖಂಡ ಮುತ್ತು ಆರೋಪಿಸಿದ್ದಾರೆ.

ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳ ಗಮನಕ್ಕೆ ತರಲಾಗಿದ್ದರೂ ಯಾವುದೇ ಪ್ರಯೋಜನವಾಗುತ್ತಿಲ್ಲದ ಪರಿಣಾಮ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿ ಹುಣಸೂರು ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸುವುದಾಗಿ ಆದಿವಾಸಿಗಳಾದ ಮಾಯಮ್ಮ. ಪುಟ್ಟಮ್ಮ. ಅಪ್ಪಣ್ಣ.ಭೋಜೆಯ. ರಾಜು.ಕಾಳಿಂಗಯ್ಯ. ಮಂಜು.ಶಿವಣ್ಣ.ವಿನು.ಗೌರಮ್ಮ.ದೇವಕಿ.ಸುಂದರ್ ರಾಣಿಗೇಟ್ ಸೇರಿದಂತೆ ಐವತ್ತಕ್ಕೂ ಹೆಚ್ಚು ಮಂದಿ ಎಚ್ಚರಿಕೆ ನೀಡಿದ್ದಾರೆ.

ಸ್ಪಷ್ಟನೆ : ನಿರ್ಧಾರದಂತೆ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿ ಹುಣಸೂರು ವಿಭಾಗವ ಮನೆಗಳ ನಿರ್ಮಾಣದ ಜವಾಬ್ದಾರಿ ವಹಿಸಿಕೊಂಡು ಉಪ ಗುತ್ತಿಗೆದಾರನಾಗಿ ಹಿಂದಿನ ಶಾಸಕ ಕೆ ಮಹದೇವ್ ರವರ ಅಧಿಕಾರ ಅವಧಿಯಲ್ಲಿ ಕೊಡಗು ಜಿಲ್ಲೆಯ ಕುಶಾಲನಗರ ಮೂಲದ ಗುತ್ತಿಗೆದಾರ ಅಂಟೋನಿ ಎಂಬುವರಿಗೆ ನೀಡಿದ್ದು ಆತನು ತಳಪಾಯದಿಂದ ಗೋಡೆಗಳನ್ನು ಪೂರ್ಣಗೊಳಿಸಿದ ನಂತರ ತಲ ಮನೆಗೆ ಬರಬೇಕಾದ ಎರಡುವರೆ ಲಕ್ಷ ರೂ ಪಾವತಿ ಮಾಡುವುದು ವಿಳಂಬವಾಯಿತು ನೆಪ ಹೇಳಿ ಕೆಲಸವನ್ನು ಸ್ಥಗಿತಗೊಳಿಸಲಾಯಿತು.

20 ಮಂದಿ ಫಲಾನುಭವಿಗಳ ಪೈಕಿ ಒಬ್ಬರು ವೈಯಕ್ತಿಕವಾಗಿ ಮನೆ ಮಾಡಿಕೊಳ್ಳಲು ನಿರ್ಧರಿಸಿದ್ದು ಮುಗಿಯುವ ಹಂತದಲ್ಲಿದೆ ಮತ್ತೊಬ್ಬ ಫಲಾನುಭವಿಯನ್ನು ಅರ್ಹತೆಯ ಆಧಾರದಲ್ಲಿ ಬದಲಾವಣೆ ಮಾಡಬೇಕಾಗಿರುವುದರಿಂದ ಬಾಕಿ ಉಳಿದಿದ್ದು ಉಳಿದ 18 ಮಂದಿ ಫಲಾನುಭವಿಗಳಿಗೆ ಕಾಮಗಾರಿ ಪೂರ್ಣಗೊಳಿಸಲು ಗುತ್ತಿಗೆದಾರ ಪೂರ್ಣ ಹಣ ಇದ್ದರೂ ಸಹ ಬಾರದ ಕಾರಣ ಆತನನ್ನು ನಿಯಮದ ಪ್ರಕಾರ ಹೊರಹಾಕಲು ತಾಂತ್ರಿಕ ತೊಂದರೆಯಿಂದ ವಿಳಂಬವಾದ ಪರಿಣಾಮ ಎಲ್ಲಾ ಕಚ್ಚಾ ವಸ್ತುಗಳ ಬೆಲೆ ಶೇ 30ರಷ್ಟು ಏರಿಕೆಯಾಗಿರುವುದರಿಂದ ನಷ್ಟದ ಲೆಕ್ಕಾಚಾರ ಹಾಕಿ ಯಾರು ಕೆಲಸ ಮಾಡಲು ಬಾರದ ಕಾರಣ ಸ್ವತಃ ಜವಾಬ್ದಾರಿ ವಹಿಸಿ ಕಾಮಗಾರಿಗಳನ್ನು 20 ದಿನಗಳಲ್ಲಿ ಪೂರ್ಣಗೊಳಿಸುವುದಾಗಿ ಕ ಗ್ರಾ ಮೂ ಸೌ ಅ ನಿ ನಿ ಹುಣಸೂರು ವಿಭಾಗದ ಇಂಜಿನಿಯರ್ ವಿಜಯ್ ಸ್ಪಷ್ಟಪಡಿಸಿದ್ದಾರೆ.

ಪತ್ರ ವ್ಯವಹಾರ ಮಾಡಲಾಗಿದೆ :

ಪೂರ್ಣ 5 ಲಕ್ಷ ರೂ ಬಿಡುಗಡೆ ಮಾಡಿ ಒಂದುವರೆ ವರ್ಷವೇ ಕಳೆದಿದ್ದು ಸುಮಾರು 20 ಕ್ಕೂ ಹೆಚ್ಚು ಪತ್ರ ವ್ಯವಹಾರ ನಡೆಸಿ ಆದಿವಾಸಿಗಳ ವಸತಿ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ತಿಳಿಸಿದ್ದರೂ ಸಹ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿ ಯಾವುದೇ ರೀತಿ ಗಮನವಹಿಸಲಿ ವಿಳಂಬ ಮಾಡುತ್ತಿರುವ ಬಗ್ಗೆ ಜಿಲ್ಲಾ ಆಡಳಿತಕ್ಕೂ ದೂರು ನೀಡಲಾಗಿದೆ ಎಂದು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಎನ್ ಬಿ ಚಂದ್ರಶೇಖರ್ ವಿವರಿಸಿದ್ದಾರೆ.

## ಇಂದು ಭಟ್ಕಳದ ನೊಂದ ಕುಟುಂಬಸ್ಥರನ್ನು ಭೇಟಿಯಾಗಲಿರುವ ಪ್ರಣವಾನಂದ ಸ್ವಾಮೀಜಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಭಟ್ಕಳದ ಶಿರಾಲಿಯ ಅಳ್ವೇಕೊಡಿ ಬಳಿಯ ತಟ್ಟಿಹಕ್ಕಲು ನದಿಯಲ್ಲಿ ಚಿಪ್ಪೆಕಲ್ಲು ಆರಿಸಲು ಹೋಗಿ ಮೃತಪಟ್ಟ 11 ಜನರ ಮನೆಗೆ ಇಂದು ಮೇ 30 ರಂದು ಬೆಳಿಗ್ಗೆ 10 ಗಂಟೆಗೆ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಶ್ರೀ ನಾರಾಯಣಗುರು ಶಕ್ತಿಪೀಠದ ಶ್ರೀ ಪ್ರಣವಾನಂದ ಸ್ವಾಮೀಜಿಯವರು ಆಗಮಿಸಲಿದ್ದಾರೆ.ಈ ದುರಂತದಲ್ಲಿ ಮೃತಪಟ್ಟ ಕುಟುಂಬಗಳಿಗೆ ಸೂಕ್ತ ಪರಿಹಾರಕ್ಕಾಗಿ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಉತ್ತರ ಕನ್ನಡ ಜಿಲ್ಲಾ ಘಟಕ ಹಾಗೂ ತಾಲೂಕು ಘಟಕದವರು ಸರಕಾರಕ್ಕೆ ಆಗ್ರಹಿಸಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ 5 ಲಕ್ಷ ರೂ. ಘಟನೆಯ ದಿನದಂದೇ ಘೋಷಣೆ ಮಾಡಿದ್ದರು. ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಅವರು ಮೀನುಗಾರರಿಗೆ ಇಲಾಖೆ ನೀಡುವ ಪರಿಹಾರದಂತೆ ಇವರಿಗೂ ಕೂಡ 10 ಲಕ್ಷದ ನೆರವು ಸೇರಿ ಒಟ್ಟು 15 ಲಕ್ಷರೂ. ತಲಾ ಪರಿಹಾರದ ಚೆಕ್‌ನ್ನು ಶುಕ್ರವಾರ ನೀಡುವುದಾಗಿ ತಿಳಿಸಿದರು. ಈ ಹಿನ್ನೆಲೆಯಲ್ಲಿ ಉಸ್ತುವಾರಿ ಮಂತ್ರಿ ಮಂಕಾಳ ವೈದ್ಯ ಜಿಲ್ಲಾ ಆಡಳಿತಕ್ಕೆ ಅಭಿನಂದನೆ ಸಲ್ಲಿಸಲಾಗುವುದು ಎಂದು ಶ್ರೀಗಳು ತಿಳಿಸಿದ್ದಾರೆ. ರಾಷ್ಟ್ರೀಯ ಈಡಿಗ ಮಹಾಮಂಡಳಿಯ ವಿವಿಧ ತಾಲೂಕಿನ ಪದಾಧಿಕಾರಿಗಳು, ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ರಾಷ್ಟ್ರೀಯ ಈಡಿಗ ನಾಮಧಾರಿ ಬಿಲ್ಲವ ದೇವರು ಮಹಾಮಂಡಳಿಯ ಜಿಲ್ಲಾಧ್ಯಕ್ಷ ದೇವರಾಜ ಡಿ. ನಾಯ್ಕ ತಿಳಿಸಿದ್ದಾರೆ.

## ಲಿಂಗಾಯತರಿಗೆ ಬಸವನಬಾಗೇವಾಡಿ ಪವಿತ್ರ ಭೂಮಿ: ಬಸವ ಬೆಳವಿಯ ಶ್ರೀ ಬಸವ ದೇವರು

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ



ಮುಂಬರುವ ಪವಿತ್ರ ಶ್ರಾವಣ ಮಾಸದ ಅಂಗವಾಗಿ ಬಸವೇಶ್ವರರ ಜನ್ಮಸ್ಥಳ ಪಟ್ಟಣದಲ್ಲಿ ಆಯೋಜಿಸಲಾಗುತ್ತಿರುವ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮಕ್ಕೆ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಬಸವ ಬೆಳವಿಯ ಚರಂತೇಶ್ವರ ಮಠದ ಪೂಜ್ಯ ಶ್ರೀ ಬಸವ ದೇವರು ಅವರನ್ನು ಪಟ್ಟಣದ ಶ್ರೀ ಬಸವೇಶ್ವರ ಸೇವಾ ಸಮಿತಿ ಭಕ್ತಿಪೂರ್ವಕವಾಗಿ ಆಮಂತ್ರಿಸಿ ಆಹ್ವಾನಿಸಲಾಯಿತು.ಸಮಿತಿಯ ಪದಾಧಿಕಾರಿಗಳು ಪೂಜ್ಯರ ಸನ್ನಿಧಿಗೆ ತೆರಳಿ, ಸನ್ಮಾನಿಸಿ ಶ್ರಾವಣ ಮಾಸದಲ್ಲಿ ಪ್ರವಚನ ನಡೆಸಿಕೊಡಬೇಕೆಂದು ವಿನಂತಿಸಿಕೊಂಡರು.ಈ ಸಂದರ್ಭದಲ್ಲಿ ಸಮಿತಿಯ ಅಧ್ಯಕ್ಷರಾದ ಈರಣ್ಣ. ಚ.ಪಟ್ಟಣಶೆಟ್ಟಿ ಮಾತನಾಡಿ, ವಿಶ್ವಗುರು ಬಸವಣ್ಣನವರು ಜನಿಸಿದ ಬಸವನಬಾಗೇವಾಡಿಯಲ್ಲಿ ನಿರಂತರವಾಗಿ ಬಸವ ತತ್ವಾಧಾರಿತ ಪ್ರವಚನಗಳು ಯಶಸ್ವಿಯಾಗಿ ನಡೆಯುತ್ತಿವೆ. ನಾಡಿನ ಹೆಸರಾಂತ ಪ್ರವಚನಕಾರರು ಆಗಮಿಸಿ ಜ್ಞಾನದಾಸೋಹ ಉಣಬಡಿಸಿದ್ದಾರೆ.ಈ ಬಾರಿ ಶ್ರಾವಣ ಮಾಸದಲ್ಲಿ ತಾವುಗಳು ಆಗಮಿಸಿ ಸದ್ಭಕ್ತರನ್ನು ಹರಸಬೇಕು ಎಂದು ವಿನಂತಿಸಿಕೊಂಡರು.ಆಹ್ವಾನವನ್ನು ಸ್ವೀಕರಿಸಿದ ಪೂಜ್ಯ ಶ್ರೀ ಬಸವ ದೇವರು ಮಾತನಾಡಿ, ಜಗದ್ಗುರು ಬಸವೇಶ್ವರರ ಜನ್ಮಸ್ಥಳದಲ್ಲಿ ಪ್ರವಚನ ನೀಡುವುದು ನನ್ನ ಪೂರ್ವಜನ್ಮದ ಪುಣ್ಯ. ಲಿಂಗಾಯತರಿಗೆ ಬಸವನಬಾಗೇವಾಡಿ ಅತ್ಯಂತ ಪವಿತ್ರ ಭೂಮಿ ಎಂದು ಹರ್ಷ ವ್ಯಕ್ತಪಡಿಸಿ ಖಂಡಿತವಾಗಿಆಗಮಿಸುವುದಾಗಿ ತಿಳಿಸಿದರು.ಈ ಸಂದರ್ಭದಲ್ಲಿ ಸಮಿತಿಯ ಉಪಾಧ್ಯಕ್ಷ ಬಸವರಾಜ ಹಾರಿವಾಳ, ಬಸವರಾಜ ಹಾರಿವಾಳ, ಶಂಕರಗೌಡ ಬಿರಾದಾರ, ಎಂ.ಜಿ.ಆದಿಗೊಂಡ, ಶೇಖರ ಗೊಳಸಂಗಿ, ಉಮೇಶ ಹಾರಿವಾಳ, ಸುರೇಶಗೌಡ ಪಾಟೀಲ, ಬಸವರಾಜ ಕೋಟಿ, ಸಂಕನಗೌಡ ಪಾಟೀಲ, ಚಂದ್ರಶೇಖರಗೌಡಪಾಟೀಲ, ರವಿ. ಎಮ್ ರಾಠೋಡ, ರಮೇಶ ಯಳಮೇಲಿ, ರವಿಗೌಡ ಚಿಕ್ಕೊಂಡ, ಬಸನಗೌಡ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಬಸವನಬಾಗೇವಾಡಿಯಲ್ಲಿ ನಿರಂತರವಾಗಿ ಬಸವತತ್ವಾಧಾರಿತಪ್ರವಚನಗಳುಯಶಸ್ವಿಯಾಗಿ ನಡೆಯುತ್ತಿವೆ. ನಾಡಿನ ಹೆಸರಾಂತ ಪ್ರವಚನಕಾರರು ಆಗಮಿಸಿ ಜ್ಞಾನದಾಸೋಹ ಉಣಬಡಿಸಿದ್ದಾರೆ.
> ಈರಣ್ಣ ಪಟ್ಟಣಶೆಟ್ಟಿ, ಅಧ್ಯಕ್ಷರು, ಶ್ರೀ ಬಸವೇಶ್ವರ ಸೇವಾ ಸಮಿತಿ

## ಸಹಕಾರಿ ಸಂಸ್ಥೆ ಉಳಿಸಿ ಬೆಳೆಸಿಕೊಳ್ಳಬೇಕಾದ ಜವಾಬ್ದಾರಿ ಎಲ್ಲರ ಮೇಲಿದೆ : ಕೆ.ವಿ.ನಾಯಕ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಬದುಕಿನಲ್ಲಿ ಯಶಸ್ವಿಯಾಗಬೇಕಾದರೆ ಆರ್ಥಿಕ ಶಿಸ್ತು ಅವಶ್ಯ. ನಾವು ಉಳಿತಾಯ ಮಾಡುವ ಪ್ರತಿಯೊಂದು ರೂಪಾಯಿ ನಾವು ಗಳಿಸಿದ ಹಣಕ್ಕೆ ಸಮ. ಆರ್ಥಿಕ ಸಂಸ್ಥೆಗಳು ಠೇವಣಿದಾರರ ಅಭ್ಯುದಯವನ್ನೇ ಗುರಿಯಾಗಿಸಿಕೊಂಡರೆ ಯಶಸ್ವಿಯಾಗುತ್ತವೆ ಎಂದು ಹಿರಿಯ ಸಹಕಾರಿ ಧುರೀಣ ಪ್ರೊ. ಕೆ.ವಿ.ನಾಯಕ ಹೇಳಿದರು.


ಪಟ್ಟಣದ ವಂದಿಗೆಯಲ್ಲಿ ನೂತನವಾಗಿ ಪ್ರಾರಂಭವಾದ ಶ್ರೀ ಲಕ್ಷ್ಮೀ ನಾರಾಯಣ ಪತ್ತಿನ ಸಹಕಾರಿ ಸಂಘವನ್ನು ಅಂಬೇಡ್ಕರ ಭವನದಲ್ಲಿ ಉದ್ಘಾಟಿಸಿ ಅವರು ಮಾತನಾಡಿದರು. ಸಾಕಷ್ಟು ಸಹಕಾರಿ ಸಂಘಗಳು ಅಂಕೋಲಾದಲ್ಲಿವೆ. ಆದರೆ ತೀರಾ ಹಿಂದುಳಿದ ಸಮಾಜದ ಅಭ್ಯುಧ್ಯಯಕ್ಕಾಗಿ ಈ ಸಹಕಾರಿ ಸಂಘವನ್ನು ಹುಟ್ಟುಹಾಕಿದ್ದೀರಿ. ಇದನ್ನು ಬೆಳೆಸಿ ಉಳಿಸಿಕೊಂಡು ಹೋಗಬೇಕಾದ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದರು.

ಪ್ರಾಚಾರ್ಯೆ ಸರೋಜಿನಿ ಹಾರವಾಡೇಕರ ಮಾತನಾಡಿ, ಸಹಕಾರಿ ಸಂಸ್ಥೆಗಳು ಯಶಸ್ವಿಯಾಗಬೇಕಾದರೆ ಸಂಸ್ಥೆಯ ಸಿಬ್ಬಂದಿ ವರ್ಗ, ಠೇವಣಿದಾರರ ಸಹಕಾರ ಅವಶ್ಯ ಎಂದರು. ಮನೋಹರ ಅರ್ಗೇಕರ ಮಾತನಾಡಿ, ನಮ್ಮ ಸಮಾಜದ ಆರ್ಥಿಕ ಉನ್ನತಿಗಾಗಿ ಸಹಕಾರಿ ಸಂಘ ಶ್ರಮಿಸಲಿ ಎಂದರು.

ಅಧ್ಯಕ್ಷತೆ ವಹಿಸಿದ ಸಂಘದ ಅಧ್ಯಕ್ಷ ಡಾ. ರಾಮಕೃಷ್ಣ ಗುಂದಿ ಮಾತನಾಡಿ, ಶ್ರೀ ಲಕ್ಷ್ಮೀ ನಾರಾಯಣ ಪತ್ತಿನ ಸಹಕಾರಿ ಸಂಘ ನಮ್ಮ ಆಗೇರ ಸಮಾಜದ ಉನ್ನತಿಗಾಗಿ ಸ್ಥಾಪಿಸಿದ ಸಂಸ್ಥೆಯಾದರೂ ಉಳಿದ ಸಮಾಜದವರು ಪ್ರಯೋಜನ ಪಡೆಯಬಹುದು. ಮುಂದಿನ ದಿನಗಳಲ್ಲಿ ಗ್ರಾಹಕರಿಗೆ ಸಾಲ ಸೌಲಭ್ಯ, ಮುದ್ದತ್ತು ಠೇವಣಿ, ಕ್ಯಾಶ ಸರ್ಟಿಫೀಕೇಟ್, ಪಿಗ್ಮಿ ಠೇವಣಿ ಒದಗಿಸಲಾಗುವುದು ಎಂದರು.

ನಿವೃತ್ತ ಶಿಕ್ಷಕ ಮಹಾದೇವ ಆಗೇರ, ಅರುಣ ಎಸ್. ಶೇಡಗೇರಿ, ವಾಮನ ಆಗೇರ, ಮೀನಾಕ್ಷಿ ಮಾಸ್ತಿಮನೆ ಮಾತನಾಡಿದರು. ಸುಷ್ಮಾ ಆಗೇರ ಪ್ರಾರ್ಥಿಸಿದರು. ಜಗದೀಶ ಶಿರೊಡ್ಕರ ಸ್ವಾಗತಿಸಿದರು. ರಾಮದಾಸ ಆಗೇರ ನಿರೂಪಿಸಿದರು.

## ಸಂಭ್ರಮದಿಂದ ಬಕ್ರೀದ್ ಹಬ್ಬದ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಪಟ್ಟಣ ಸೇರಿದಂತೆ ತಾಲ್ಲೂಕಿನ ವಿವಿಧೆಡೆ ಗುರುವಾರ ತ್ಯಾಗ ಮತ್ತು ಬಲಿದಾನದ ಸಂಕೇತವಾದ ಪವಿತ್ರ ಬಕ್ರೀದ್‌ಹಬ್ಬವನ್ನು ಮುಸ್ಲಿಂ ಬಾಂಧವರು ಅತ್ಯಂತ ಸಡಗರ, ಸಂಭ್ರಮ ಮತ್ತು ಭಕ್ತಿಯಿಂದ ಆಚರಿಸಿದರು.ಬೆಳಿಗ್ಗೆ ಹೊಸ ಬಟ್ಟೆಗಳನ್ನು ಧರಿಸಿ, ಮಸೀದಿ, ಈದ್ಗಾ ಮೈದಾನಗಳಲ್ಲಿ ಎಲ್ಲರೂ ಒಂದೆಡೆ ಸೇರಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ವಿಶೇಷ ಪ್ರಾರ್ಥನೆ ಸಲ್ಲಿಸಿದ ಬಳಿಕ ಎಲ್ಲರೂ ಪರಸ್ಪರ ಆಲಿಂಗಿಸಿಕೊಂಡು 'ಈದ್ ಮುಬಾರಕ್' ಎಂದು ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು.

## ಸಮಾಜ ಸೇವೆ ಮಾಡುವದರಿಂದ ತೃಪ್ತಿ ಸಿಗುತ್ತದೆ: ಕಳಕಪ್ಪ ಕಂಬಳಿ



• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ಸಮಾಜದಲ್ಲಿರುವ ಬಡವರ ಒಳಿತಿಗಾಗಿ ಅವರ ಕಷ್ಟ ಸುಖಗಳಲ್ಲಿ ಸದಾ ಭಾಗಿಯಾಗುವೆಈರೀತಿ ಸಮಾಜ ಸೇವೆ ಮಾಡುವುದರಿಂದ ನನಗೆ ತೃಪ್ತಿ ಸಿಗುತ್ತದೆ ಎಂದು ಸಮಾಜ ಸೇವಕ ,ತಾಲೂಕು ಪಂಚಾಯತಿ ಮಾಜಿ ಉಪಾಧ್ಯಕ್ಷ ಕಳಕಪ್ಪ ಕಂಬಳಿ ಅವರು ಯಲಬುರ್ಗಾ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮೇ 29 ರಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಸಾರ್ವಜನಿಕರು ಕುಂದು ಕೊರತೆಗಳನ್ನು ಆಲಿಸುವುದಕ್ಕೆ ಕುಕನೂರ ಪಟ್ಟಣದಲ್ಲಿ ಶ್ರೀ ಸತ್ಯನಾರಾಯಣ ಪೂಜಾದೊಂದಿಗೆ ಶರಣು ಕಾರ್ಯಾಲಯ ಪ್ರಾರಂಭಿಸಿ, ಕೊಪ್ಪಳ ,ಗದಗ , ಕಾಗಿನೇಲೆ, ಚಿತ್ರದುರ್ಗಾ,ಶಿವಮೊಗ್ಗ, ಕೂಡಲ ಸಂಗಮ ಸೇರಿದಂತೆ ಜಿಲ್ಲೆಯ ಸುತ್ತಮುತ್ತಲಿನ ಸ್ವಾಮೀಜಿಯವರನ್ನು ಬರಮಾಡಿಕೊಂಡು ಬಡವರಿಗಾಗಿ ಸಮಾಜ ಸೇವೆ ಮಾಡುವುದಕ್ಕೆ ಶರಣು ಕಾರ್ಯಾಲಯ ತೆರೆಯಲಾಗುತ್ತಿದೆ, ಇದರಲ್ಲಿ ಪಕ್ಷ ಬೇಧ ಮರೆತು ಎಲ್ಲರೂ ಶುಭ ಕೋರಬೇಕೆಂದು ಹೇಳಿದರು. ಈ ವೇಳೆ ಮಾಜಿ ಜಿ.ಪಂ.ಸದಸ್ಯ ಈರಪ್ಪ ಕುಡಗುಂಟಿ, ಮುಖಂಡರಾದ ಫಕೀರಪ್ಪ ತಳವಾರ, ಅಂದಪ್ಪ ಹಾಲಕೇರಿ, ಷಣ್ಮುಖಪ್ಪ ರಾಂಪೂರ,ಸುರೇಶ ಮ್ಯಾಗೇರಿ, ಇಮಾಮಸಾಬ ಮಂಡಲಗೇರಿ ನಿಂಗನಗೌಡ ಪಾಟೀಲ್ ಸೇರಿಮತೆ ಇತರರು ಇದ್ದರು.

## ಲ್ಯಾಪ್‌ಟಾಪ್ ಖರೀದಿಗಾಗಿ ಸಹಾಯಧನಕ್ಕಾಗಿ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.29–ಕಲಬುರಗಿಮಹಾನಗರಪಾಲಿಕೆ2023–24ನೇ ಸಾಲಿನ ಎಸ್.ಎಫ್.ಸಿ ನಿಧಿ ಶೇ 7.25ರಯೋಜನೆಯಡಿ 2025–26ನೇ ಸಾಲಿಗಾಗಿ ಶೇ 7.25ರ ಕ್ರಿಯಾ ಯೋಜನೆಯಡಿ ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗದ ಉನ್ನತ ವ್ಯಾಸಂಗಕ್ಕಾಗಿ ಉನ್ನತಎಂ.ಬಿ.ಬಿ.ಎಸ್./ಬಿಇಪ್ರತಿಭಾನ್ವತ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಗಾಗಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಿ, ಅರ್ಹ ಹಾಗೂ ಅನರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಕಲಬುರಗಿ ಮಹಾನಗರ ಪಾಲಿಕೆಯ ನೋಟಿಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ.

## ಶಾಸಕ ಭೀಮಣ್ಣ ನಾಯ್ಕ ಅವರಿಗೆ ಸಚಿವ ಸ್ಥಾನಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ನೂತನ ಮಂತ್ರಿ ಮಂಡಳದಲ್ಲಿ ಶಿರಸಿ–ಸಿದ್ದಾಪುರ ಕ್ಷೇತ್ರದ ಕ್ರಿಯಾಶೀಲ ಶಾಸಕ ಭೀಮಣ್ಣ ನಾಯ್ಕ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಅಂಕೋಲಾ ತಾಲೂಕು ಘಟಕದವರು ಆಗ್ರಹಿಸಿದ್ದಾರೆ.

ದಶಕಗಳ ಕಾಲ ಕಾಂಗ್ರೆಸ್ ಉತ್ತರ ಕನ್ನಡ ಜಿಲ್ಲಾಧ್ಯಕ್ಷರಾಗಿ ಪಕ್ಷವನ್ನು ಬಲಪಡಿಸಿದವರು. ಜಿಲ್ಲೆಯಾದ್ಯಂತ ಸಂಚರಿಸಿ ಕಾರ್ಯಕರ್ತರಿಗೆ ಹುರಿದುಂಬಿಸಿದವರು. ಹಾಗೇ ಉತ್ತರ ಕನ್ನಡ ಜಿಲ್ಲೆಯಲ್ಲಿ ನಾಮಧಾರಿಗಳು ಅತಿಹೆಚ್ಚಿನ ಸಂಖ್ಯೆಯಲ್ಲಿ ಇರುವುದರಿಂದ ಹಾಗೂ ಕ್ರಿಯಾಶೀಲ ವ್ಯಕ್ತಿತ್ವದವರಾಗಿರುವ ಭೀಮಣ್ಣ ನಾಯ್ಕ ಅವರಿಗೆ ಸಚಿವ ಸ್ಥಾನ ನೀಡಿದರೆ ಜಿಲ್ಲೆಯ ಅಭಿವೃದ್ಧಿಗೆ ಇನ್ನಷ್ಟು ವೇಗ ಬರಲಿದೆ. ಪಕ್ಷದ ಹೈಕಮಾಂಡ್ ಮತ್ತು ಕೆಪಿಸಿಸಿ ಅಧ್ಯಕ್ಷರು ಹಾಗೂ ಬಾವಿ ಮುಖ್ಯಮಂತ್ರಿ ಎಂದು ಗುರುತಿಸಿಕೊಂಡಿರುವ ಡಿ.ಕೆ.ಶಿವಕುಮಾರ ಅವರಿಗೆ ಒತ್ತಾಯಿಸಿ ಮನವಿ ಹಾಗೂ ಇ–ಮೇಲ್ ಮಾಡಿ ಒತ್ತಾಯಿಸಲಾಗಿದೆ ಎಂದು ರಾಷ್ಟ್ರೀಯ ಈಡಿಗ ಮಹಾಮಂಡಳಿಯ ತಾಲೂಕು ಅಧ್ಯಕ್ಷ ದಾಮೋದರ ಜಿ. ನಾಯ್ಕ, ಪ್ರಧಾನ ಕಾರ್ಯದರ್ಶಿ ನಾಗರಾಜ ಮಂಜಗುಣಿ, ಉಪಾಧ್ಯಕ್ಷರಾದ ರಮೇಶ ಎಸ್. ನಾಯ್ಕ, ರಮೇಶ ಎನ್. ನಾಯ್ಕ, ಸಂಜಯ ಆರ್. ನಾಯ್ಕ, ಮಂಜುನಾಥ ಕೆ. ನಾಯ್ಕ, ವಸಂತ ನಾಯ್ಕ ಇತರರು ಆಗ್ರಹಿಸಿದ್ದಾರೆ.

> ಉತ್ತರ ಕನ್ನಡ ಜಿಲ್ಲೆಯ ಶಾಸಕರಾಗಿ ಭೀಮಣ್ಣ ನಾಯ್ಕ ಅವರು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಹಲವು ವರ್ಷ ರಾಜಕೀಯದಲ್ಲಿ ಪಳಗಿ ಸೋಲಿನ ರುಚಿಯನ್ನು ಸವಿದು ಎಲ್ಲ ಕಷ್ಟ ಸುಖಗಳನ್ನು ಅರಿತು 2023 ರಲ್ಲಿ ನಡೆದ ಚುನಾವಣೆಯಲ್ಲಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಕ್ಷೇತ್ರದಲ್ಲಿ ವಾಸ್ತವ್ಯ ಮಾಡಿ ಕಾರ್ಯಕರ್ತರಿಗೆ ಸ್ಪಂದಿಸುವುದರ ಜೊತೆಗೆ ಕ್ಷೇತ್ರಕ್ಕೆ ಹೆಚ್ಚಿನ ಅನುದಾನವನ್ನು ತಂದು ಅಭಿವೃದ್ಧಿ ಮಾಡುತ್ತಿದ್ದಾರೆ. ಇವರ ಸೇವೆ ಇತರೆ ಕ್ಷೇತ್ರಕ್ಕೂ ಸಿಗಬೇಕಾದರೆ ಇವರಿಗೆ ಸಚಿವ ಸ್ಥಾನ ನೀಡಬೇಕು.
>
> **–ದಾಮೋದರ ಜಿ. ನಾಯ್ಕ**
> **ಅಧ್ಯಕ್ಷರು, ರಾಷ್ಟ್ರೀಯ ಈಡಿಗ ಮಹಾಮಂಡಳಿ ಅಂಕೋಲಾ**

## ಅನಧಿಕೃತ ಪತ್ರಕರ್ತರನ್ನು ನಿಯಂತ್ರಿಸಿ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಮೇ.29:ತಾಲೂಕು ಸರಕಾರಿ ನೌಕರರ ಸಂಘದ ವತಿಯಿಂದ ನೂತನವಾಗಿ ಡಿವೈಎಸ್ಪಿ ಆಗಿ ಅಧಿಕಾರ ವಹಿಸಿಕೊಂಡ ಬಲ್ಲಪ್ಪ ನಂದಗಾವಿ ಅವರನ್ನು ಗುರುವಾರ ಸನ್ಮಾನಿಸಲಾಯಿತು.ನಗರದ ಡಿವೈಎಸ್ಪಿ ಕಚೇರಿಯಲ್ಲಿ ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ನೇತೃತ್ವದಲ್ಲಿ ನೂತನ ಡಿವೈಎಸ್ಪಿ ಅವರನ್ನು ಸನ್ಮಾನಿಸಿ, ತಾಲೂಕಿನಲ್ಲಿ ಯೂಟ್ಯೂಬ್ ಚಾನಲ್ ಮತ್ತು ಅನಧಿಕೃತ ಪತ್ರಕರ್ತರ ಹಾವಳಿ ಹೆಚ್ಚಾಗಿದೆ.ವಿಶೇಷವಾಗಿ ಗ್ರಾಮ ಪಂಚಾಯತಿ ಅಧಿಕಾರಿಗಳು, ಸಿಬ್ಬಂದಿ, ಶಾಲಾ ಶಿಕ್ಷಕರಿಗೆ ವಿನಾಕಾರಣ ಕಿರುಕುಳ ನೀಡಲಾಗುತ್ತಿದೆ. ಇವುಗಳಿಂದ ಸುಗಮ ಕೆಲಸ ಕಾರ್ಯಕ್ಕೆ ತೊಂದರೆ ಆಗುತ್ತಿದೆ. ಹಾಗಾಗಿ ಅನಧಿಕೃತ ಪತ್ರಕರ್ತರನ್ನು ನಿಯಂತ್ರಿಸಿ ಸರಕಾರಿ ನೌಕರರ ಹಿತಕಾಪಾಡಬೇಕು. ಅಲ್ಲದೇ ತಾಲೂಕಿನ ಅಲ್ಲಲ್ಲಿ ಶಾಲಾ ಅವರಣಗಳಲ್ಲಿ ಅನೈತಿಕ ಚಟುಚಟಿಕೆಗಳು ನಡೆಯುತ್ತಿವೆ. ಶಾಲಾ ಅಡುಗೆ ಕೋಣೆಗಳ ಬೀಗ ಮುರಿದು ಆಹಾರಧಾನ್ಯಗಳನ್ನು ಕಳ್ಳತನ ಮಾಡಲಾಗುತ್ತಿದೆ. ಇವುಗಳನ್ನು ಕೂಡ ನಿಯಂತ್ರಿಸಲು ಅಗತ್ಯಕ್ರಮ ಅನುಸರಿಸಬೇಕು ಎಂದು ಡಿವೈಎಸ್ಪಿ ಅವರಿಗೆ ಮನವರಿಕೆ ಮಾಡಿಕೊಡಲಾಯಿತು. ಈ ಸಂದರ್ಭದಲ್ಲಿ ತಾಲೂಕು ನೌಕರರ ಸಂಘದ ಕಾರ್ಯದರ್ಶಿ ರಾಜಪ್ಪ ಪಾಟೀಲ್, ಖಜಾಂಚಿ ಸುನೀಲ ಬಿರಾದಾರ, ತಾಲೂಕು ಕಸಾಪ ಅಧ್ಯಕ್ಷ ನಾಗಭೂಷಣ ಮಾಮಡಿ, ತಾಲೂಕು ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷ ಸೂರ್ಯಕಾಂತ ಸುಂಟೆ, ಪ್ರಮುಖರಾದ ಸಂತೋಷ ವಾಡೆ, ಪ್ರಭು ಡಿಗ್ಗೆ, ಆನಂದ ಹಳೆಂಬರ, ಚಂದ್ರಕಾಂತ ತಳವಾಡೆ ಸೇರಿದಂತೆ ಹಲವರು ಇದ್ದರು.

## ಖಂಡ್ರೆಗೆ ಡಿಸಿಎಂ ಸ್ಥಾನ ನೀಡಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ರಾಜ್ಯದಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬರಲಿರುವ ಕಾಂಗ್ರೆಸ್ ಸರಕಾರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ವೀರಶೈವ ಲಿಂಗಾಯತ ಸಮುದಾಯದ ಮುಖಂಡ ಜೈರಾಜ ಪಾತ್ರೆ ಒತ್ತಾಯಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ನೇತೃತ್ವದ ಸರಕಾರದಲ್ಲಿ ಕಳೆದ ಮೂರು ವರ್ಷಗಳಿಂದ ಅರಣ್ಯ ಇಲಾಖೆ ಸಚಿವರಾಗಿ ಮತ್ತು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾಗಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ.

ರಾಜ್ಯದಲ್ಲಿ ಅರಣ್ಯ ಇಲಾಖೆಯ ಸಚಿವರಾದ ಮೇಲೆ ಹಲವು ಬದಲಾವಣೆಗಳನ್ನು ತಂದು ಈ ಇಲಾಖೆಗೆ ಹೊಸ ಆಯಾಮ ನೀಡಿದ್ದಾರೆ. ಜತೆಗೆ ಗಡಿ ಜಿಲ್ಲೆ ಬೀದರ್ ನಲ್ಲಿ ಅಭಿವೃದ್ಧಿ ಪರ್ವ ನಡೆದಿದೆ.

ಅದಲ್ಲದೇ ಅಖಿಲ ಭಾರತ ವೀರಶೈವ ಲಿಂಗಾಯತ ಸಮುದಾಯದ ರಾಷ್ಟ್ರೀಯ ಅಧ್ಯಕ್ಷರಾಗಿ ಸಮುದಾಯವನ್ನು ದೊಡ್ಡ ಸಮುದಾಯವನ್ನು ಯಶಸ್ವಿಯಾಗಿ ಮುನ್ನಡೆಸುತ್ತಿದ್ದಾರೆ.

ಹಾಗಾಗಿ ಅವರ ರಾಜಕೀಯ ಅನುಭವ ಮತ್ತು ಹಿರಿತನ ಪರಿಗಣಿಸಿ ಖಂಡ್ರೆ ಅವರಿಗೆ ಹೊಸ ಸರಕಾರದಲ್ಲಿ ಅತ್ಯುತ್ತಮ ಖಾತೆ ನೀಡುವುದರ ಜತೆಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಿ ವೀರಶೈವ ಲಿಂಗಾಯತ ಸಮುದಾಯಕ್ಕೆ ಪ್ರಾತಿನಿಧ್ಯ ನೀಡಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧಿಕಾರಿಗಳು ಸಮನ್ವಯದೊಂದಿಗೆ ಜನರಿಗೆ ಉತ್ತಮ ಆಡಳಿತ ನೀಡಿ: ಉಪ ಲೋಕಾಯುಕ್ತ ಕೆ.ಎನ್.ಫಣೀಂದ್ರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಪ್ರತಿಯೊಬ್ಬರೂ ಗೌರವಯುತ ಜೀವನ ಹಾಗೂ ಆರೋಗ್ಯಕರ ರೀತಿಯಲ್ಲಿ ಬದುಕಲು ಸಂವಿಧಾನದಲ್ಲಿ ಅನುಕೂಲ ಮಾಡಿಕೊಳ್ಳಲಾಗಿದ್ದು,ಜಿಲ್ಲೆಯ ಅಧಿಕಾರಿಗಳು ಸಮನ್ವಯದೊಂದಿಗೆ ಕೆಲಸ ಮಾಡುವ ಮೂಲಕ ಜನರಿಗೆ ಉತ್ತಮ ಆಡಳಿತ ನೀಡಬೇಕೆಂದು ಕರ್ನಾಟಕದ ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಶ್ರೀ ಕೆ.ಎನ್. ಫಣೀಂದ್ರ ಅವರು ಹೇಳಿದರು.

ಮೇ.29ರ ಶುಕ್ರವಾರ ದಂದು ಯಾದಗಿರಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲನಲ್ಲಿ ಸಾರ್ವಜನಿಕ ದೂರ ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿ ಸಭೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರವು ಅನೇಕ ಯೋಜನೆಗಳು, ಕಾರ್ಯಕ್ರಮಗಳನ್ನು ಜಾರಿಗೆ ತಂದಿವೆ. ಅವುಗಳನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿಸಲು ಆಡಳಿತ ವರ್ಗವು ಪ್ರಮುಖ ಪಾತ್ರ ವಹಿಸುತ್ತದೆ. ಹಾಗಾಗಿ ಜಿಲ್ಲೆಯ ಸಮಸ್ತ ಅಧಿಕಾರಿಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು. ಸರ್ಕಾರಿ ಕೆಲಸ ಕೇವಲ ಸಂಬಳಕ್ಕೆ ಕೆಲಸ ಮಾಡದೆ. ಇದು ನಮ್ಮ ಊರು ಎಂಬ ಮನೋಭಾವದಿಂದ ಕೆಲಸ ಮಾಡಿದಲ್ಲಿ ಗ್ರಾಮ, ಪಟ್ಟಣ ಹಾಗೂ ನಗರವು ಅಭಿವೃದ್ಧಿಯಾಗಲು ಸಹಾಯಕವಾಗುತ್ತದೆ ಎಂದರು.

ಕಾನೂನು ಪ್ರಕಾರ ಎಲ್ಲರೂ ಕೆಲಸ ಮಾಡಬೇಕು. ಯಾವುದೇ ಜಾತಿಯ ವ್ಯಾಮೋಹ ಬಿಡಬೇಕು. ಹೆಣ್ಣು ಮಕ್ಕಳನ್ನು ಗೌರವಯುತವಾಗಿ ನಡೆಸಿಕೊಳ್ಳಬೇಕು. ಹಿರಿಯರಿಗೆ ಸರಿಯಾಗಿ ಮಾಸಾಶನವನ್ನು ಸಮಯಕ್ಕೆ ಸರಿಯಾಗಿ ನೀಡಬೇಕು. ಭಾರತ ಸಂವಿಧಾನಕ್ಕೆ ನಾವು ಎಲ್ಲರೂ ಭದ್ರತ್ಯ ತೋರಿಸಬೇಕು. ಅಧಿಕಾರವನ್ನು ದುರ್ಬಳಕೆ ಮಾಡಿಕೊಳ್ಳಬಾರದು. ರೈತರಿಗೆ ಸಮಯಕ್ಕೆ ಸರಿಯಾಗಿ ಬಿತ್ತನೆ ಬೀಜ, ರಸಗೊಬ್ಬರಗಳನ್ನು ವಿತರಣೆ ಮಾಡಬೇಕು. ಕಂದಾಯ ಇಲಾಖೆಯಲ್ಲಿ ರೈತರ ಕೆಲಸ ಕಾರ್ಯಗಳನ್ನು ನಿಗದಿತ ಸಮಯದಲ್ಲಿ ಮಾಡಬೇಕು ಎಂದರು.

ಮಾಡಬೇಕಾದ ಕೆಲಸವನ್ನು ಸಮಯಕ್ಕೆ ಸರಿಯಾಗಿ ಮಾಡಬೇಕು. ಯಾವುದೇ ಒತ್ತಡಕ್ಕೆ ಒಳಗಾಗದೆ ಸ್ವತಂತ್ರವಾಗಿ ಕೆಲಸ ಮಾಡಬೇಕು. ದೇಶದಲ್ಲಿ ಕರ್ನಾಟಕ ರಾಜ್ಯವು ಭ್ರಷ್ಟಾಚಾರದಲ್ಲಿ ಐದನೆಯ ಸ್ಥಾನದಲ್ಲಿದೆ. ನಮ್ಮ ನಡತೆಯನ್ನು ಕಾಪಾಡುವ ಮೂಲಕ ನಾವು ಉತ್ತಮ ಜೀವನ ನಡೆಸಬೇಕು. ಭ್ರಷ್ಟಾಚಾರ ನಿರ್ಮೂಲನೆ ಮಾಡಿದಲ್ಲಿ ದೇಶ, ರಾಜ್ಯ ಸಾಕಷ್ಟು ಅಭಿವೃದ್ಧಿಯಾಗುತ್ತದೆ ಹಾಗೂ ಸಂವಿಧಾನದ ಆಶೋತ್ತರಗಳನ್ನು ನಾವೆಲ್ಲರೂ ಪಾಲಿಸಬೇಕು ಎಂದರು.

ಲೋಕಾಯುಕ್ತರ ಕಚೇರಿಗೆ ಬಡವರು, ದೀನ ದಲಿತರು, ಸಿದ್ಧಾಂತಗಳನ್ನು ಪಾಲಿಸುವವರ ಪ್ರಕರಣಗಳು ಬರುತ್ತವೆ. ಉದ್ದೇಶ ಪೂರ್ವಕವಾಗಿ ಸರ್ಕಾರಿ ಅಧಿಕಾರಿಗಳ ಮೇಲೆ ಪ್ರಕರಣ ದಾಖಲು ಮಾಡಿ, ಹಣ ವಸೂಲಿ ಮಾಡುವ ಕೆಲವು ವ್ಯಕ್ತಿಗಳು ಇದ್ದಾರೆ. ಇಂತಹ ವ್ಯಕ್ತಿಗಳಿಂದ ಅಧಿಕಾರಿಗಳು ಎಚ್ಚರ ವಹಿಸಬೇಕು. ಲೋಕಾಯುಕ್ತ ಕಾಯ್ದೆಯನ್ನು ಸರಿಯಾಗಿ ತಿಳಿದುಕೊಳ್ಳಬೇಕು. ಸಾರ್ವಜನಿಕರು, ಹಾಗೂ ಅಧಿಕಾರಿಗಳು ನಮ್ಮ ಇಲಾಖೆಯ ಬಗ್ಗೆ ಸರಿಯಾಗಿ ತಿಳಿದುಕೊಂಡಾಗ ತಮ್ಮನ್ನು ತಾವು ರಕ್ಷಣೆ ಮಾಡಿಕೊಳ್ಳಬಹುದಾಗಿದೆ ಎಂದರು.

ಕರ್ನಾಟಕ ಲೋಕಾಯುಕ್ತರ ವ್ಯಾಪ್ತಿಗೆ ಬರುವ ಪ್ರಕರಣಗಳನ್ನು ಮಾತ್ರ ವಿಚಾರಣೆ ಮಾಡಲಾಗುತ್ತದೆ. ಸಾರ್ವಜನಿಕರು ಶಾಂತ ಚಿಂತದಿಂದ ವರ್ತಿಸಬೇಕು. ಎಲ್ಲರೂ ಸಹ ಎರು ಧ್ವನಿಯಲ್ಲಿ ಮಾತನಾಡದೆ ಒಬ್ಬೊಬ್ಬರಾಗಿ ತಮ್ಮ ಪ್ರಕರಣಗಳ ಮಾಹಿತಿ ನೀಡಿ. ಜಿಲ್ಲಾಡಳಿತದಿಂದ ನಮಗೆ ಸಹಕಾರ ನೀಡಿದ್ದಾರೆ. ಜಿಲ್ಲಾಡಳಿತವು ಜಿಲ್ಲೆಯ ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ಸೇವೆ ನೀಡುವ ಮೂಲಕ ಅವರಿಗೆ ನೆರವು ಆಗಬೇಕೆಂದರು.

ದೂರುಗಳು ಹೆಚ್ಚಿನ ರೀತಿಯಲ್ಲಿ ನಮಗೆ ಸಂದಾಯ ಆಗಿವೆ. ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಂಡು ಪರಿಹಾರವನ್ನು ನೀಡುವುದಕ್ಕೆ ಪ್ರಯತ್ನ ಮಾಡಲಾಗುತ್ತದೆ. ಭಾರತ ಸಂವಿಧಾನದಲ್ಲಿ ಅನುಚ್ಛೇದ 21ರ ಪ್ರಕಾರ ಎಲ್ಲರಿಗೂ ಸಮಪಾಲು, ಎಲ್ಲರಿಗೂ ಸಮಬಾಳು ನೀಡಿದೆ. ಎಲ್ಲರೂ ಗೌರವಯುತವಾದ, ಆರೋಗ್ಯಕರ ರೀತಿಯಲ್ಲಿ ಮತ್ತು ನಮ್ಮ ಇಚ್ಛೆಯಂತೆ ಜೀವನವನ್ನು ನಡೆಸಲು ಅವಕಾಶ ನೀಡಿದೆ. 14ವರ್ಷದೊಗಿನ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯವಾಗಿ ಶಿಕ್ಷಣ ನೀಡುವದಾಗಿದೆ ಎಂದರು.

ಮೂರು ವರ್ಷಗಳ ಹಿಂದೆ ಯಾದಗಿರಿ ಜಿಲ್ಲೆಗೆ ಬಂದಾಗ ಮೂರು ದಿನಗಳ ಕಾರ್ಯಕ್ರಮ ಮಾಡಲಾಗಿತ್ತು. ಮೊದಲ ದಿನ ಸಾರ್ವಜನಿಕ ಅರ್ಜಿ ಸ್ವೀಕಾರ. ಎರಡನೆಯ ದಿನ ಅರ್ಜಿಗಳ ವಿಲೇವಾರಿ ಮತ್ತು ಮೂರನೆ ದಿನ ಸಮಸ್ಯೆಗಳಿಗೆ ಪರಿಹಾರ ನೀಡಲಾಗಿತ್ತು. ಈ ಸಲ ಎರಡು ದಿನಗಳ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈಗಾಗಲೇ ಒಂದು ತಿಂಗಳ ಮುಂಚೆ ಎಲ್ಲಾ ಕೇಸುಗಳ ಮಾಹಿತಿಯನ್ನು ತಮಗೆ ನೀಡಲಾಗಿದ್ದು ಸಮಸ್ಯೆಗಳಿಗೆ ಪರಿಹಾರ ಮಾಡಬೇಕೆಂದು ಹೇಳಿದರು.

ಸಾರ್ವಜನಿಕರು ಹಾಗೂ ಸರಕಾರಿ ನೌಕರರನ್ನು ಒಬ್ಬೊಬ್ಬರನ್ನಾಗಿ ಸರತಿ ಸಾಲಿನಲ್ಲಿ ಕರೆಸಿ ದೂರುದಾರು ಹಾಗೂ ಎದುರುದಾರರ ಪ್ರಕರಣಗಳ ವಿಚಾರಣೆ ನಡೆಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೇಶ್ ಒರಡಿಯಾ, ಆಪ್ತ ಕಾರ್ಯದರ್ಶಿ ಕಿರಣ ಪಿ.ಎಮ್.ಪಾಟೀಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಲೋಕಾಯುಕ್ತ ಪೊಲೀಸ್ ಜಿಲ್ಲಾ ವರಿಷ್ಠಾಧಿಕಾರಿ ಸಿದ್ದರಾಜು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮರಿಯಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಯಾದಗಿರಿ ಸಿಟಿ ಮತ್ತು ಹೊರ ವಲಯದಲ್ಲಿ ಉಪ ಲೋಕಾಯುಕ್ತರಿಂದ ಬಿರುಸಿನ ಸಂಚಾರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



:ಕರ್ನಾಟಕದ ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಶ್ರೀ ಕೆ.ಎನ್. ಫಣೀಂದ್ರ ಅವರು ಪೂರ್ವ ನಿಗದಿಯಂತೆ ಮೇ.29ರಂದು ಯಾದಗಿರಿ ಜಿಲ್ಲೆಗೆ ಭೇಟಿ ನೀಡಿ ಬೆಳಗ್ಗೆಯಿಂದಲೇ ಅನಿರೀಕ್ಷಿತ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ರಾಜಧಾನಿ ಬೆಂಗಳೂರಿನಿಂದ ಉದ್ಯಾನ ಎಕ್ಸಪ್ರೆಸ್ ರೈಲು ಮೂಲಕ ,ಶುಕ್ರವಾರ ಬೆಳಗ್ಗೆ ಯಾದಗಿರಿ ನಗರಕ್ಕೆ ಆಗಮಿಸಿದ ಲೋಕಾಯುಕ್ತರು, ನಗರದ ಸರ್ಕಾರಿ ಅತಿಥಿ ಗೃಹಕ್ಕೆ ಆಗಮಿಸಿ ಉಪಹಾರ ಸೇವಿಸಿದ ನಂತರ ಬೆಂಗಳೂರಿನ ಲೋಕಾಯುಕ್ತ ಕಚೇರಿಯ ಅಧಿಕಾರಿಗಳು, ಯಾದಗಿರಿ ಲೋಕಾಯುಕ್ತರು ಮತ್ತು ಇನ್ನಿತರ ಅಧಿಕಾರಿಗಳೊಂದಿಗೆ ಅನಿರೀಕ್ಷಿತ ಭೇಟಿ ನೀಡಿದ

ಯಾದಗಿರಿಯ ಹಳೆಯ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ, ಅಲ್ಲಿನ ಸ್ವಚ್ಛತೆ. ಸಾರ್ವಜನಿಕ ಶೌಚಾಲಯದ ಪರಿಶೀಲನೆ ಮಾಡಿ, ಸಾರ್ವಜನಿಕರಿಂದ ನಿಗದಿತ ದರದಲ್ಲಿ ಮಾತ್ರ ಹಣ ಸ್ವೀಕರಿಸಬೇಕು. 3 ರೂ. ದರ ನಿಗದಿಪಡಿಸಿ 10 ರೂ ಯಾಕೆ ತೆಗೆದುಕೊಳ್ಳುತ್ತಿದಿರಾ. ಹೆಚ್ಚಿನ ದರ ವಸೂಲಿ ಮಾಡಿದಲ್ಲಿ ಸೂಕ್ತ ಕ್ರಮ ಕೈಗಳ್ಳಲಾಗುತ್ತದೆ ಎಂದರು.

ಹೆಚ್ಚಿನ ದರ ವಸೂಲಿ ಮಾಡಿದಲ್ಲಿ ಸಾರ್ವಜನಿಕರು ಸಂಬಂಧಿಸಿದ ಅಧಿಕಾರಿಗಳಿಗೆ ದೂರ ನೀಡಬೇಕು. ಅಲ್ಲದೆ ಸಂಬಂಧಿಸಿದ ಅಧಿಕಾರಿಗಳು ಕಾಲಕಾಲಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ಮಾಡಬೇಕು. ಹೆಚ್ಚಿನ ದರ ವಸೂಲಿ ಕುರಿತು ಗಮನಹರಿಸಬೇಕು. ಸಾರ್ವಜನಿಕರು ಎಲ್ಲಂದರಲ್ಲಿ ಮೂತ್ರ ವಿಸರ್ಜನೆ ಮಾಡದಂತೆ ಜಾಗೃತಿ ಮೂಡಿಸಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಉಪ ಲೋಕಾಯುಕ್ತರು ಸೂಚಿಸಿದರು.

ಬಸ್ ನಿಲ್ದಾಣದ ಶೌಚಾಲಯದಲ್ಲಿ ಬೀಡಿ, ಸಿಗರೇಟ್ ಬೆಂಕಿ ಪಟ್ಟಣ ಇಡದಂತೆ ಅಲ್ಲಿನ ಸಿಬ್ಬಂದಿಗಳಿಗೆ ತಾಕೀತು ಮಾಡಿದರು. ಅಲ್ಲದೆ ಸಂಬಂಧಿಸಿದ ಅಧಿಕಾರಿಗಳು ದಿನಕ್ಕೆ ಅರ್ಧಗಂಟೆಯ ಕಾಲ ಇಂತಹ ಸಮಸ್ಯೆಗಳ ಕುರಿತು ಗಮನಹರಿಸಿ, ಪರಿಶೀಲನೆ ಮಾಡಬೇಕು.ಇದನ್ನು ಪಾಲಿಸದ ಶೌಚಾಲಯದ ಸಿಬ್ಬಂದಿಗಳ ವಿರುದ್ಧ ಪ್ರಕರಣ ದಾಖಲಿಸುವಂತೆ ಉಪ ಲೋಕಾಯುಕ್ತರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಸಾರ್ವಜನಿಕರೊಂದಿಗೆ ಮಾತನಾಡಿದ ಲೋಕಾಯುಕ್ತರು, ಬಸ್ ನಿಲ್ದಾಣ ಸ್ವಚ್ಛತೆ, ಕುಡಿಯುವ ನೀರು, ಶೌಚಾಲಯ ಕುರಿತು ಸಾರ್ವಜನಿಕರ ಅಭಿಪ್ರಾಯ ಕೇಳಿದರು. ನಂತರ ಸ್ಥಳೀಯ ಪೊಲೀಸರು 15 ದಿನಕೊಮ್ಮೆ ಬಸ್ ನಿಲ್ದಾಣಕ್ಕೆ ಭೇಟಿ ನೀಡುವಂತೆ ಸೂಚಿಸಿ, ಸಾರ್ವಜನಿಕರ ಕುಂದುಕೊರತೆಗಳನ್ನು ನಿವಾರಿಸಲು ನಿಮಗೆ ಸರ್ಕಾರಿ ನೌಕರಿ ನೀಡಲಾಗಿದೆ. ಅಧಿಕಾರವನ್ನು ಸರಿಯಾಗಿ ಬಳಸಿಕೊಳ್ಳಬೇಕು.ನಿಗದಿತ ಸಮಯಕ್ಕೆ ಬಸ್ ಸಂಚಾರವನ್ನು ಸಾರ್ವಜನಿಕರ ಅನುಕೂಲಕ್ಕೆ ಒದಗಿಸಬೇಕೆಂದು ಸಂಬಂಧಿಸಿದ ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.ನಂತರ ಬಸ್ ನಿಲ್ದಾಣದ ಹೊರಗಡೆಯ ಆವರಣವನ್ನು ಪರಿಶೀಲಿಸಿದರು. ಬಸ್ ನಿಲ್ದಾಣದ ಸುತ್ತಲೂ ಸ್ವಚ್ಛತೆ ಕಾಪಾಡಿಕೊಳ್ಳುವಂತೆ ನಗರ ಸಭೆಯ ಪೌರಾಯುಕ್ತರಾದ ಉಮೇಶ್ ಚೌವ್ಹಾಣ್ ಅವರಿಗೆ ಉಪ ಲೋಕಾಯುಕ್ತರು ಸೂಚಿಸಿದರು.

ನಂತರ ಉಪಲೋಕಾಯುಕ್ತರು ಡಾನಭಾಸ್ಕೋ ಹತ್ತಿರದ ಹಳ್ಳಕ್ಕೆ ಬೇಡಿ ನೀಡಿ ಕಲುಷಿತ ನೀರು ಹಳ್ಳಕ್ಕೆ ಬಿಡಬಾರದು ಅದನ್ನು ಸಂಸ್ಕರಿಸುವ ಪ್ರಕ್ರೀಯೆ ಹೇಗೆ ಮಾಡಬೇಕು ಎಂಬುದನ್ನು ತಿಳಿಯಲು ಒಂದು ಸಲ ಮೈಸೂರಿಗೆ ಹೋಗಿ ನೋಡಿ ಬನ್ನಿ ಅಲ್ಲಿ ಹೇಗೆ ಮಾಡುತ್ತಾರೆ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೇಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮರಿಯಪ್ಪ,

ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಸಿದ್ದರಾಜು, ಡಿವೈಎಸ್ಪಿ ಹೆಚ್.ಇನಾಂದಾರ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಜ್ಯಮಟ್ಟದ ಪೋಷಕತ್ವ ಪಾಲುದಾರರ ಸಭೆ ಯಶಸ್ವಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ನಗರದ ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರದಲ್ಲಿ ರಾಜ್ಯಮಟ್ಟದ ಪೋಷಕತ್ವ ಪಾಲುದಾರರ ಸಭೆ ಯಶಸ್ವಿಯಾಗಿ ನಡೆಯಿತು. ಕಾರ್ಯಕ್ರಮದಲ್ಲಿ ಮಕ್ಕಳ ಪೋಷಕತ್ವ ಯೋಜನೆ, ಮಕ್ಕಳ ಹಕ್ಕುಗಳ ರಕ್ಷಣೆ ಹಾಗೂ ಕುಟುಂಬ ಆಧಾರಿತ ಪಾಲನೆ ಕುರಿತು ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮವನ್ನು ಡಾನ್ ಬೋಸ್ಕೋ ಬೆಂಗಳೂರು ಕಾರ್ಯಕಾರಿ ನಿರ್ದೇಶಕರಾದ ಫಾದರ್ ಪಲ್ಲಿಪುರಂ ಉದ್ಘಾಟಿಸಿ ಮಾತನಾಡಿ, ದತ್ತು ನಿಯಮಗಳ ಬಗ್ಗೆ ಸಮಾಜದಲ್ಲಿ ಅರಿವು ಇದ್ದರೂ, ಪೋಷಕತ್ವ ಯೋಜನೆ ಕುರಿತು ಹೆಚ್ಚಿನ ಜಾಗೃತಿ ಅಗತ್ಯವಿದೆ. ಆರು ವರ್ಷ ಮೇಲ್ಪಟ್ಟ ಮಕ್ಕಳಿಗೆ ಪ್ರೀತಿ, ಪಾಲನೆ ಮತ್ತು ರಕ್ಷಣೆ ನೀಡುವ ಉದ್ದೇಶದಿಂದ ಈ ಯೋಜನೆ ಜಾರಿಯಲ್ಲಿದ್ದು, ಮಕ್ಕಳ ಕಲ್ಯಾಣ ಸಮಿತಿಯ ಆದೇಶದ ಮೇರೆಗೆ ಅರ್ಹ ಕುಟುಂಬಗಳಿಗೆ ಗರಿಷ್ಠ ಎರಡು ವರ್ಷಗಳವರೆಗೆ ಮಕ್ಕಳನ್ನು ತಾತ್ಕಾಲಿಕವಾಗಿ ನೀಡಲಾಗುತ್ತದೆ ಎಂದು ತಿಳಿಸಿದರು. ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರ ಯಾದಗಿರಿಯ ನಿರ್ದೇಶಕರಾದ ಫಾದರ್ ಶಾಬು ಮಾತನಾಡಿ, ಪ್ರತಿ ಮಗುವಿಗೂ ಪ್ರೀತಿ ಮತ್ತು ಕುಟುಂಬದ ವಾತಾವರಣ ಅಗತ್ಯ. ಕುಟುಂಬದಿಂದ ವಂಚಿತರಾದ ಮಕ್ಕಳಿಗೆ ಅರ್ಹ ಕುಟುಂಬಗಳ ಮೂಲಕ ಉತ್ತಮ ಭವಿಷ್ಯ ನಿರ್ಮಾಣ ಸಾಧ್ಯ ಎಂದರು. ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ದಿನೇಶ್ ಕುಮಾರ ಅವರು, ಪೋಷಕತ್ವ ಯೋಜನೆಯ ಮೂಲಕ ಮಕ್ಕಳಿಗೆ ಉತ್ತಮ ಕುಟುಂಬ ವಾತಾವರಣ ದೊರೆಯುತ್ತದೆ. ಈ ಕುರಿತು ಜಾಗೃತಿ ಮೂಡಿಸುವಲ್ಲಿ ಡಾನ್ ಬೋಸ್ಕೋ ಸಂಸ್ಥೆ ಉತ್ತಮ ಕಾರ್ಯ ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಡಾ. ಚಂದಪ್ಪ ಕಂಬಾರ ಅವರು, ಪೋಷಕತ್ವ ಯೋಜನೆಯ ಉದ್ದೇಶ ಮಕ್ಕಳಿಗೆ ತಾತ್ಕಾಲಿಕವಾಗಿ ಪ್ರೀತಿ ಮತ್ತು ವಾತ್ಸಲ್ಯ ಒದಗಿಸುವುದು. ಈ ಯೋಜನೆ ಕುರಿತು ಸಮಾಜದಲ್ಲಿ ಹೆಚ್ಚಿನ ಅರಿವು ಮೂಡಬೇಕು ಎಂದು ಹೇಳಿದರು. ಪಿ.ಒ., ಎನ್.ಐ.ಸಿ ವಿಭಾಗದ ದಶರಥ ನಾಯಕ ಅವರು ಮಾತನಾಡಿ, ಪೋಷಕತ್ವ ಯೋಜನೆಗೆ ಬಂದ ಅರ್ಜಿಗಳನ್ನು ಪರಿಶೀಲಿಸಿ, ಗೃಹ ತನಿಖೆ ಹಾಗೂ ವರದಿಗಳ ಆಧಾರದ ಮೇಲೆ ಅರ್ಹ ಕುಟುಂಬಗಳಿಗೆ ಮಕ್ಕಳನ್ನು ತಾತ್ಕಾಲಿಕವಾಗಿ ಒಪ್ಪಿಸಲಾಗುತ್ತದೆ ಎಂದು ತಿಳಿಸಿದರು. ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರ ಕಲಬುರಗಿಯ ನಿರ್ದೇಶಕರಾದ ಫಾದರ್ ಕುರಿಯಾಕೋಸ್ ಅವರು, ಮಕ್ಕಳನ್ನು ಪಾಲನಾ ಸಂಸ್ಥೆಗಳಲ್ಲಿ ಬೆಳೆಸುವುದಕ್ಕಿಂತ ಕುಟುಂಬಗಳಲ್ಲಿ ಬೆಳೆಸುವುದು ಉತ್ತಮ. ಇದರಿಂದ ಮಕ್ಕಳಿಗೆ ಪ್ರೀತಿ ಮತ್ತು ಭದ್ರತೆ ದೊರೆಯುತ್ತದೆ ಎಂದರು. ಮಹಿಳಾ ಪೊಲೀಸ್ ಠಾಣೆ ಸಾಬ್ ಇನ್ಸ್ಪೆಕ್ಟರ್ ರಾದ ನರಸಿಂಹ ಕಾರ್ಯಕ್ರಮದಲ್ಲಿ ರಾಜ್ಯ ಸಂಯೋಜಕರಾದ ಶಿವಮಲ್ಲು ಸ್ವಾಗತಿಸಿದರು. ಶರಣಪ್ಪ ಅಮರಪುರ ಕಾರ್ಯಕ್ರಮ ನಿರೂಪಿಸಿದರು. ಫಾದರ್ ಸಜ್ಜಿ ಜಾರ್ಜ್, ನಂದಿನಿ, ನಾಗಪ್ಪ ಗಮಗ, ನಾಗರಾಜ ಮನಸಗಲ್, ಅರ್ಚನಾ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಸಭೆಯಲ್ಲಿ ದೇವದುರ್ಗ, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಸ್ವಸಹಾಯ ಸಂಘಗಳ ಮಹಿಳೆಯರು, ಪ್ರಾಥಮಿಕ ಶಾಲಾ ಶಿಕ್ಷಕರು ಹಾಗೂ ಪದವಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 52 ಮಂದಿ ಭಾಗವಹಿಸಿದ್ದರು.

# ಮೇ 31 ವಡಗೇರಾ ಡಿಡಿಯು ಶಿಕ್ಷಣ ಸಂಸ್ಥೆಯಲ್ಲಿ ಉಚಿತ ಆರೋಗ್ಯ ಶಿಬಿರ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 31ರಂದು ವಡಗೇರಾ ಪಟ್ಟಣದಲ್ಲಿ ಉಚಿತ ಆರೋಗ್ಯತಪಾಸಣೆ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಡಿಡಿಯು ಸಮೂಹ ಶಿಕ್ಷಣ ಸಂಸ್ಥೆಯ ಶಶಾಂಕ.ಬಿ.ಮೇಟಿ ತಿಳಿಸಿದರು.ಪಟ್ಟಣದ ಡಿಡಿಯ ಸಂಸ್ಥೆಯ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.ಪಟ್ಟಣದ ಡಿಡಿಯು ಶಿಕ್ಷಣ ಸಂಸ್ಥೆಯ ಸಿಬಿಎಸ್ ಸಿ ಶಾಲಾ ಆವರಣದಲ್ಲಿ ಮೇ 31ರಂದು ಬೆಳಗ್ಗೆ 9:00 ಯಿಂದ ಮಧ್ಯಾಹ್ನ 1:00 ವರೆಗೆ ಡಿಡಿಯು ಸಮೂಹ ಸಂಸ್ಥೆ, ಬೆಂಗಳೂರಿನ ಸಪ್ತಗಿರಿ ಆಸ್ಪತ್ರೆ, ಮತ್ತು ಸ್ವರಾಧ್ಯ ಎಲುಬು ಮತ್ತು ಕೀಲು ಆಸ್ಪತ್ರೆ, ಬೆಂಗಳೂರಿನ ಶಂಕರ್ ಕಣ್ಣಿನ ಆಸ್ಪತ್ರೆ, ಭೀಮಣ್ಣ ಮೇಟಿ ಫೌಂಡೇಶನ್, ವಿ. ಎಂ .ಎಂ ಟ್ರಸ್ಟ್ ಜಿಲ್ಲಾ ಅಂದತ್ವ ನಿವಾರಣ ಸಂಸ್ಥೆ, ವೈದ್ಯಧಿಕಾರಿಗಳು ಮತ್ತು ನೇತ್ರಾಧಿಕಾರಿಗಳ ಸಂಯುಕ್ತಶ್ರಯದಲ್ಲಿ ಉಚಿತ ಆರೋಗ್ಯ ಶಿಬಿರ ಹಮ್ಮಿಕೊಂಡಿದ್ದು.ಪಟ್ಟಣ ಹಾಗೂ ತಾಲೂಕಿನ ಜನತೆ ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದ್ದಾರೆ.ಆರೋಗ್ಯ ಶಿಬಿರದಲ್ಲಿ ಹೃದಯ ರೋಗ, ಎಲುಬು ಕೀಲುಗಳ ತಪಾಸಣೆ, ಸಕ್ಕರೆ ರೋಗ, ಕ್ಯಾನ್ಸರ್ ತಪಾಸಣೆ ಮೂತ್ರಪಿಂಡಗಳ ತಪಾಸಣೆ, ಹಾಗೂ ಇನ್ನಿತರ ರೋಗಗಳಿಗೆ ನುರಿತ ವೈದ್ಯರಿಂದ ಚಿಕಿತ್ಸೆ ಕೊಡಿಸಲಾಗುವುದು. ಶಿಬಿರಾರ್ಥಿಗಳು ಬರುವಾಗ ತಮ್ಮ ಎರಡು ಪಾಸ್ಪೋರ್ಟ್ ಸೈಜ್ ಭಾವಚಿತ್ರ ಆಧಾರ ಕಾರ್ಡ್, ರೇಷನ್ ಕಾರ್ಡ್, ತರುವಂತೆ ತಿಳಿಸಿದ್ದಾರೆ ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಹೊನ್ನಯ್ಯ ಕೊಂಕಲ್, ಮುಖ್ಯ ಶಿಕ್ಷಕ ಜಸ್ಟಿನ್ ಕೆ. ಎಸ್,ಖಂಡಪ್ಪ ವರಿಕೇರಿ, ಯೋಗೇಶ್ ರೆಡ್ಡಿ ಉಪಸ್ಥಿತರಿದ್ದರು.

# ಚನ್ನಾರೆಡ್ಡಿ ಪಾಟೀಲ್ ತುನ್ನೂರಗೆ ಸಚಿವ ಸ್ಥಾನ ನೀಡುವಂತೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ






ಮುಂಬರುವ ಸಂಪುಟ ಪುನರಚನೆಯಲ್ಲಿ ಯಾದಗಿರಿಯ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಚನ್ನಾರೆಡ್ಡಿ ಪಾಟೀಲ್ ತುನ್ನೂರ ರವರಿಗೆ ಸಚಿವ ಸ್ಥಾನ ನೀಡುವಂತೆ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಹಾಗೂ ಕಾಂಗ್ರೆಸ್ ಯುವ ಮುಖಂಡರಾದ ಹಣಮಂತರಾಯಗೌಡ ಮಾಲಿ ಪಾಟೀಲ್ ತೇಕರಾಳ ಕಾಂಗ್ರೆಸ್ ಪಕ್ಷದ ವರಿಷ್ಠರಲ್ಲಿ ಒತ್ತಾಯಿಸಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಮೊದಲಿನಿಂದಲೂ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ರವರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಾ ಬಂದಿದ್ದಾರೆ.ಕಾಂಗ್ರೆಸ್ ಪಕ್ಷದ ಏಳಿಗೆಗಾಗಿ ಹಗಲು ಇರುಳು ಎನ್ನದೆ ಶ್ರಮಿಸುತ್ತಿದ್ದಾರೆ.ಅವರು ಎಪಿಎಂಸಿಯ ನಿರ್ದೇಶಕರಾಗಿ ಜಿಲ್ಲಾ ಪಂಚಾಯತಿಯ ಸದಸ್ಯರಾಗಿ ,ವಿಧಾನ ಪರಿಷತ್ತಿನ ಸದಸ್ಯರಾಗಿ, ಇನ್ನಿತರ ಹಲವು ಹುದ್ದೆಗಳಲ್ಲಿ ಅತ್ಯುತ್ತಮವಾಗಿ ಸೇವೆ ಸಲ್ಲಿಸಿದ ಅನುಭವವನ್ನು ಹೊಂದಿದ್ದಾರೆ.ಕಾಂಗ್ರೆಸ್ ಪಕ್ಷದ ಸಕ್ರಿಯ ನಾಯಕರಾಗಿ ಪಕ್ಷಕ್ಕಾಗಿ ದುಡಿದಿದ್ದಾರೆ. ಇಲ್ಲಿಯವರೆಗೆ ಯಾವುದೇ ಉನ್ನತ ಹುದ್ದೆಯನ್ನು ಪಡೆಯದೆ ಒಬ್ಬ ಸಾಮಾನ್ಯ ಕಾರ್ಯಕರ್ತರಾಗಿ ಕೆಲಸ ಮಾಡಿದ್ದಾರೆ.ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರ ಅತ್ಯಂತ ಆಪ್ತ ಬಳಗದಲ್ಲಿ ಇವರು ಪ್ರಮುಖರಾಗಿದ್ದು ಸರಳ ಸಜ್ಜನಿಕೆಯ ವ್ಯಕ್ತಿ ಎಂದರೆ ತಪ್ಪಾಗಲಾರದು ಯಾದಗಿರಿ ಮತಕ್ಷೇತ್ರ ಮತ್ತು ವಡಗೇರಾ ತಾಲೂಕಿನ ಅಭಿವೃದ್ಧಿಗೆ ಹೆಚ್ಚಿನ ಶ್ರಮವಹಿಸುತ್ತಿದ್ದಾರೆ.ಅವರ ಹಿರಿತನವನ್ನು ಆಧರಿಸಿ ಅವರಿಗೆ ಮುಂದಿನ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡುವಂತೆ ಮಾಜಿ ಗ್ರಾಮ ಪಂಚಾಯತಿ ಸದಸ್ಯರು ಹಾಗೂ ಕಾಂಗ್ರೆಸ್ ಯುವ ಮುಖಂಡರಾದ ಹಣಮಂತರಾಯಗೌಡ ಮಾಲಿ ಪಾಟೀಲ್ ತೇಕರಾಳ ಕಾಂಗ್ರೆಸ್ ಪಕ್ಷದ ವರಿಷ್ಠರಲ್ಲಿ ಮನವಿ ಮಾಡಿಕೊಂಡಿದ್ದಾರೆ.

# ಖಾಸಗಿ ಶಿಕ್ಷಣ ಸಂಸ್ಥೆಗಳ ಅಕ್ರಮದ ವಿರುದ್ಧ ಕ್ರಮ ಕೈಗೊಳ್ಳಲು ಜಿಲ್ಲಾಡಳಿತಕ್ಕೆ ಭೀಮುನಾಯಕ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಜಿಲ್ಲೆಯಾದ್ಯಂತ ವಿಶೇಷವಾಗಿ ನಗರದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳು ಶಿಕ್ಷಣದ ಹೆಸರಿನಲ್ಲಿ ವಸೂಲಿ ಧಂದೆ ನಡೆಸಿದ್ದು ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಎಚ್ಚೆತ್ತು ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಟಿ.ಎನ್. ಭೀಮುನಾಯಕ ಆಗ್ರಹಿಸಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಅವರು, ಶಿಕ್ಷಣ ನೀಡಬೇಕಾದ ಸಂಸ್ಥೆಗಳ ಶಾಲಾ ಕಾಲೇಜುಗಳು ಹಣ ವಸೂಲಿ ಧಂದೆ ನಡೆಸುತ್ತಿದ್ದು, ವರ್ಷಪೂರ್ತಿ ಪುಸ್ತಕ, ಡ್ರೆಸ್, ಸಾಮಗ್ರಿಗಳ ಹೆಸರಿನಲ್ಲಿ ಕೇವಲ ವಸೂಲಿ ಮಾಡುವ ಕೆಲಸಕ್ಕಿಳಿದಿದ್ದಾರೆ.ಆದರೆ ಮೂಲಸೌಕರ್ಯಗಳು ಮಾತ್ರ ಮರಿಚಿಕೆಯಾಗಿದ್ದು, ಸರ್ಕಾರದ ನಿಯಮಾವಳಿಗಳ ಪ್ರಕಾರ ಯಾವುದೇ ಸೌಕರ್ಯವನ್ನು ನೀಡದೇ ಕೇವಲ ಡೋನೆಷನ್ ಸೇರಿದಂತೆ ಇನ್ನಿತರ ಬಾಬ್ತುಗಳ ಹೆಸರಿನಲ್ಲಿ ಬರಿ ವಸೂಲಿ ಧಂದೆಯಲ್ಲಿ ನಿರತರಾಗಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಡೋನೇಶನ್ ಹಾವಳಿಯಿಂದಾಗಿ ಬಡ ಹಿಂದುಳಿದವರ ಮಕ್ಕಳು ಉತ್ತಮ ಗಣುಮಟ್ಟದ ಶಿಕ್ಷಣ ಕನಸಿನ ಮಾತಾಗಿದ್ದು, ಅವರ ಮಕ್ಕಳು ಶಾಲೆ ಬಿಟ್ಟು ಮನೆಯುಲ್ಲಿ ಕೂಡ್ರುವಂತಾಗಿದೆ.

ಇದಲ್ಲದೇ ಬಹುತೇಕ ಸಂಸ್ಥೆಗಳ ಶಾಲಾ ಕಾಲೇಜುಗಳು ಮನೆಯಲ್ಲಿ ಇಲ್ಲವೇ ರೂಮುಗಳಲ್ಲಿ ನಡೆಸುತ್ತಿದ್ದು, ಅನುಮತಿ ಪಡೆಯುವಾಗ ತೋರಿಸಿದ ಮಾಹಿತಿಗೂ ವಾಸ್ತವದ ಮಾಹಿತಿಗೂ ಅಜಗಜಾಂತರ ವ್ಯತ್ಯಾಸವಿದ್ದು, ಇವರು ಕೇವಲ ಶಿಕ್ಷಣ ಸಂಸ್ಥೆಯ ಹೆಸರಿನಲ್ಲಿ ವ್ಯಾಪಾರದಲ್ಲಿ ತೊಡಗಿಕೊಂಡಿದ್ದಾರೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೆಲ ಸಂಸ್ಥೆಗಳು ಅನಧಿಕೃತವಾಗಿ ನಡೆಯುತ್ತಿದ್ದು, ಇನ್ನು ಕೆಲ ಸಂಸ್ಥೆಗಳು ಅರೆಬರೆ ಮೂಲಸೌಕರ್ಯ ಹೊಂದಿದ್ದು ಅರೆ ಅನಧಿಕೃತವಾಗಿ ನಡೆಯುತ್ತಿವೆ ಎಂದು ಅವರು ದೂರಿದ್ದಾರೆ. ಇನ್ನು ಹಲವು ಶಿಕ್ಷಣ ಸಂಸ್ಥೆಗಳಲ್ಲಿ ಅನಧಿಕೃತವಾಗಿ ಕೋಚಿಂಗ್ ಸೆಂಟರ್ ಗಳು ಬೇಸಿಗೆ ಶಿಬಿರಗಳ ಹೆಸರಿನಲ್ಲಿ ಮತ್ತದೆ ವಸೂಲಿ ಧಂದೆಯಲ್ಲಿ ತೊಡಗಿಸಿಕೊಂಡಿರುತ್ತಾರೆ. ಯಾದಗಿರಿ ಜಿಲ್ಲೆ ಶಿಕ್ಷಣದಲ್ಲಿ ಹಿಂದುಳಿದಿದೆ ಎಂಬ ಕಾರಣಕ್ಕೆ ಶಿಕ್ಷಣ ಸಂಸ್ಥೆಗಳಿಗೆ ಪ್ರೋತ್ಸಾಹ ನೀಡಿದ್ದರೂ ಸಹ ಗುಣಮಟ್ಟದ ಶಿಕ್ಷಣದ ಕಡೆ ಗಮನ ಹರಿಸುವುದರ ಬದಲಿಗೆ ಕೇವಲ ವ್ಯಾಪಾರಿ ಮನೋವೃತ್ತಿಯನ್ನು ಪ್ರದರ್ಶಿಸಿರುವುದು ನಡೆಯುತ್ತಿದೆ ಎಂದು ಆರೋಪಿಸಿದ ಅವರು ಇನ್ನು ಮುಂದೆ ಕರವೇ ಇಂತಹ ಅಕ್ರಮಗಳಿಗೆ ಅವಕಾಶ ಕೊಡದೇ ಅಧಿಕಾರಿಗಳೇ ಅಕ್ರಮದಲ್ಲಿ ಪಾಲ್ಗೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ. ಈ ನಿಟ್ಟಿನಲ್ಲಿ ಶಾಲಾ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿಗಳು ಎಚ್ಚೆತ್ತು ಇಂತಹ ಅಕ್ರಮಗಳನ್ನು ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಇಲ್ಲವಾದಲ್ಲಿ ಕರವೇ ಉಗ್ರ ಹೋರಾಟ ರೂಪಿಸಲಿದೆ ಎಂದು ಮಲ್ಲುಮಾಳಕೇರಿ, ಸಿದ್ದು ನಾಯಕ ಹತ್ತಿಕುಣಿ, ಅಂಬೇಷ್ ಹತ್ತಿಮನಿ, ಸಂತೋಷ ನಿರ್ಮಲಕರ್, ವಿಶ್ವಾರಾಜ ಪಾಟೀಲ್, ಭೀಮಾಶಂಕರ ಹತ್ತಿಕುಣಿ, ನಿಂಗಪ್ಪ ಗುಡಗುಡಿ, ಅಬ್ದುಲ್ ಚಿಗಾನೂರ, ವೆಂಕಟೇಶ ನಾಯಕ ಬೈರಿಮಡ್ಡಿ, ಶರಣಬಸಪ್ಪ ಯಲ್ಹೇರಿ, ಬಸವರಾಜ ಚೆನ್ನೂರ, ಅಂಬ್ರೇಷ್ ಕಟ್ಟಿಮನಿ, ರವಿ ನಾಯಕ, ಕಾಶಿನಾಥ ನಾನೇಕ, ಮರೆಪ್ಪ ಕಡ್ಡಿ, ರಮೇಶ ಡಿ. ನಾಯಕ ಎಚ್ಚರಿಸಿದ್ದಾರೆ.

# ಜೂ. 6 ರವರೆಗೆ ಮಾಜಿ ಸೈನಿಕರನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.29–ರಾಜ್ಯದ ವಿವಿಧ ಕಾರಾಗೃಹಗಳಲ್ಲಿ ಮಾಜಿ ಸೈನಿಕರನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಕಾರಾಗೃಹ ಮತ್ತು ಸುಧಾರಣಾ ಸೇವಾ ಇಲಾಖೆಯಿಂದ 2026ರ ಮೇ 29 ರಿಂದ ಜೂನ್ 6 ರವರೆಗೆ ಪ್ರತಿದಿನ ಬೆಳಿಗ್ಗೆ 10 ರಿಂದ ಸಂಜೆ 5ರವರೆಗೆ (Walk-in-Interview) ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದ್ದು, ಸಂದರ್ಶನದಲ್ಲಿ ಭಾಗವಹಿಸಲು ಆಸಕ್ತಿಯುಳ್ಳ ಮಾಜಿ ಸೈನಿಕರು ತಮ್ಮ ಮಾಜಿ ಸೈನಿಕರ ಗುರುತಿನ ಚೀಟಿ ಮತ್ತು ಸೇನಾ ಸೇವಾ ಪುಸ್ತಕಗಳೊಂದಿಗೆ ಹಾಜರಾಗಬೇಕು.

ಈ ಸಂದರ್ಶನವು ಉಪ ನಿರ್ದೇಶಕರು ಹಾಗೂ ಬಂದೀಖಾನೆಗಳ ಮುಖ್ಯ ಅಧೀಕ್ಷಕರು, ಕರ್ನಾಟಕ ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಅಕಾಡೆಮಿ, ಕಾಳಿದಾಸ ರಸ್ತೆ, ಗಾಂಧಿನಗರ, ಮಹಾಬೋಧಿ ಸೊಸೈಟಿಯ ಪಕ್ಕ ಫ್ರೀಡಂ ಪಾರ್ಕ್ ಬೆಂಗಳೂರು ಇಲ್ಲಿ ನಡೆಯಲಿದೆ.

# ಜಿ.ಪಂ ವತಿಯಿಂದ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.29 : ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ 13 ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳಿಗೆ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಈ ಹುದ್ದೆಗೆ ಸ್ಥಳೀಯ ಗ್ರಾಮ ಪಂಚಾಯತಿಯ ಸಂಬಂಧಿಸಿದ ಮೀಸಲಾತಿ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಜಿಲ್ಲಾ ಪಂಚಾಯತಿ ರಾಯಚೂರು ವೆಬ್‌ಸೈಟ್ ವಿಳಾಸ: zpraichur.kar.nic.in ನಲ್ಲಿ ಸಲ್ಲಿಸಬಹುದಾಗಿದೆ.

ಸೂಚನೆಗಳನ್ನು ಹಾಗೂ ನೇಮಕಾತಿ ಅಧಿಸೂಚನೆಯನ್ನು ಡೌನ್‌ಲೋಡ್ ಮಾಡಿಕೊಂಡು ಕೂಲಂಕುಷವಾಗಿ ಓದಿ ಅರ್ಥೈಸಿಕೊಂಡು ಅದರಂತೆ ಸೂಕ್ತ ಸಿದ್ಧತೆಯೊಂದಿಗೆ ಜೂನ್ 10ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಶೈಕ್ಷಣಿಕ ಅರ್ಹತೆ: ದ್ವಿತೀಯ ಪದವಿ ಪೂರ್ವ ಪರೀಕ್ಷೆ(ಪಿಯುಸಿ)ಯಲ್ಲಿ ಉತ್ತೀರ್ಣವಾಗಿರತಕ್ಕದ್ದು, ಮತ್ತು ಸರ್ಟಿಫಿಕೇಶನ್ ಕೋರ್ಸ್ ಇನ್ ಲೈಬ್ರರಿಸೈನ್ಸ್ ನಲ್ಲಿ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಠ ಮೂರು ತಿಂಗಳ ಕಂಪ್ಯೂಟರ್ ಕೋರ್ಸ್‌ನಲ್ಲಿ ಉತ್ತೀರ್ಣವಾಗಿರಬೇಕು.

ಆಯ್ಕೆವಿಧಾನ: ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಗರಿಷ್ಠ ಅಂಕಗಳು/ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ ಎಂದು ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಆಗಿರುವ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾರಾಣಾ ಪ್ರತಾಪಸಿಂಗ್ ಜಯಂತಿ ಅದ್ದೂರಿಯಾಗಿ ಆಚರಿಸೋಣ: ಡಾ.ಸಂಜೀವಸಿಂಗ್ ರಾಯಚೂರಕರ್

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಜೂನ್.14 ರಂದು ಮಹಾರಾಣಾ ಪ್ರತಾಪಸಿಂಗ್ ಜಯಂತಿಯನ್ನು ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಬೇಕೆಂದು ಡಾ.ಸಂಜೀವಸಿಂಗ್ ರಾಯಚೂರಕರ ತಿಳಿಸಿದರು. ಅವರು ಗುರುವಾರ ಗುರುಮಠಕಲ್ ಪಟ್ಟಣದ ಗಡಿಮೊಹಲ್ಲಾದಲ್ಲಿ ಜೂನ್.14 ರಂದು ಯಾದಗಿರಿ ನಗರದಲ್ಲಿ ನಡೆಯಲ್ಲಿರುವ ಜಿಲ್ಲಾ ಮಟ್ಟದ ಮಹಾರಾಣಾ ಪ್ರತಾಪಸಿಂಗ್ ಜಯಂತಿ ಆಚರಣೆ ಸಂಬಂಧ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಯಾದಗಿರಿ ಜಿಲ್ಲಾ ರಜಪೂತ ಸಮಾಜದ ವತಿಯಿಂದ ಯಾದಗಿರಿ ನಗರದಲ್ಲಿ ಅಂದು ನಡೆಯಲಿರುವ ಮಹಾರಾಣಾ ಪ್ರತಾಪ್ ಸಿಂಗ್ ಜಯಂತಿ ಮಹೋತ್ಸವದಲ್ಲಿ ಸಮಾಜದ ಎಲ್ಲ ಬಂಧು- ಬಾಂಧವರು ಸಕ್ರಿಯವಾಗಿ ಭಾಗವಹಿಸಬೇಕೆಂದು ಕರೆ ನೀಡಿದರು.

ಅಂದು ನಡೆಯಲಿರುವ ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ಸಮಾಜದ ಸಾಧಕರು ಹಾಗೂ ಎಸ್.ಎಸ್.ಎಲ್.ಸಿ. ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರೋತ್ಸಾಹಿಸಲಾಗುವುದು. ಹಾಗೂ ಸಮಾಜದ ಸಾಧಕರನ್ನು ಮತ್ತು ಹಿರಿಯರನ್ನು ಸನ್ಮಾನಿಸಿ ಗೌರವಿಸಲಾಗುವುದು. ಕಾರ್ಯಕ್ರಮದಲ್ಲಿ ರಜಪೂತ ಸಂಸ್ಕೃತಿಯನ್ನು ಬಿಂಬಿಸುವ ಸಾಂಸ್ಕೃತಿಕ ನೃತ್ಯಗಳು ಹಾಗೂ ದೇಶಭಕ್ತಿ ಗೀತೆಗಳ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಇದೇ ಸಂದರ್ಭದಲ್ಲಿ ತಿರ್ಮಾನಿಸಲಾಯಿತು.

ಈ ಸಭೆಯಲ್ಲಿ ಗುರುಮಠಕಲ್ ತಾಲೂಕು ರಜಪೂತ ಸಮಾಜದ ಅಧ್ಯಕ್ಷರಾದ ಉದಯ್ ಸಿಂಗ್, ಜಿಲ್ಲಾ ಕಾರ್ಯದರ್ಶಿಗಳಾದ ಸತ್ಯನಾರಾಯಣ ಪ್ರಸಾದ ತಿವಾರಿ, ಸತೀಶ ಪ್ರಸಾದ ತಿವಾರಿ, ಹರಿ ಪ್ರಸಾದ್ ಹಜಾರೆ, ವಿಕ್ರಮಸಿಂಗ್ ಠಾಕೂರ್, ಆನಂದ ಹಜಾರೆ, ಸುನೀಲ ಶುಕ್ಲಾ, ಸಂದೀಪ್ ಹಜಾರೆ, ಸ್ವರ್ಣ ಸಿಂಗ್, ರಾಹುಲ್ ಹಜಾರೆ, ಮೋಹನ್ ರಜಪೂತ, ದೀಪಕ್ ಹಜಾರೆ, ರವಿಕಿರಣ್ ಹಜಾರೆ, ಭೈರವ್ ಸಿಂಗ್ ರಾಯಚೂರುಕರ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ನಿವೃತ್ತಿ ಸೈನಿಕರಿಂದ ಜೂ .6ರವರೆಗೆ ನೇರ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ 29: ರಾಜ್ಯದ ವಿವಿಧ ಕಾರಾಗೃಹಗಳಲ್ಲಿ ಮಾಜಿ ಸೈನಿಕರನ್ನು ಗುತ್ತಿಗೆ ಆಧಾರದ ಮೇಲೆ ಕಾರಾಗೃಹ ಮತ್ತು ಸುಧಾರಣಾ ಸೇವಾ ಇಲಾಖೆಗೆ ಸಂದರ್ಶನ ಮೂಲಕ ನೇಮಕಾತಿ ನಡೆಸುತ್ತಿದ್ದು, ಆಸಕ್ತರು ದಿನಾಂಕ: 29-05-2026 ರಿಂದ 6-06-2026ರವರೆಗೆ ಬೆಳಿಗ್ಗೆ 10 ರಿಂದ ಸಂಜೆ 5ರವರೆಗೆ ಸಂದರ್ಶನ ಭಾಗವಹಿಸಬಹುದಾಗಿದೆ.

ಈ ಸಂದರ್ಶನದಲ್ಲಿ ಭಾಗವಹಿಸಲು ಆಸಕ್ತಿಯುಳ್ಳ ಮಾಜಿ ಸೈನಿಕರು ತಮ್ಮ ಗುರುತಿನ ಚೀಟಿ ಮತ್ತು ಸೇನಾ ಸೇವಾ ಪುಸ್ತಕಗಳೊಂದಿಗೆ ಸಂದರ್ಶನದಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪಿ.ಎಸ್.ರಮೇಶ, ಉಪ ನಿರ್ದೇಶಕರು ಹಾಗೂ ಬಂದೀಖಾನೆಗಳ ಮುಖ್ಯ ಅಧಿಕ್ಷಕರು ಕರ್ನಾಟಕ ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಅಕಾಡೆಮಿ, ಕಾಳಿದಾಸ ರಸ್ತೆ, ಗಾಂಧಿನಗರ, ಮಹಾಬೋಧಿ ಸೊಸೈಟಿಯ ಪಕ್ಕ ಫ್ರೀಡಂ ಪಾರ್ಕ್ ಬೆಂಗಳೂರು ಮೊಬೈಲ್ ಸಂಖ್ಯೆ: 9632496560 ಅಥವಾ 9480806400 ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಲಬುರ್ಗಿಯ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಶಾಕ್‌ಗೆ ಬಲಿಯಾದ ಮಹದೇವಪ್ಪ ಕುಟುಂಬಕ್ಕೆ ಪರಿಹಾರ ನೀಡುವಂತೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ವಿದ್ಯುತ್ ಶಾಕ್‌ಗೆ ಸಿಲುಕಿ ಮೃತಪಟ್ಟ ತಾಲೂಕಿನ ಕೊಂಕಲ್ ಗ್ರಾಮದ ಮಹದೇವಪ್ಪ ತಂದೆ ಮಾಳಪ್ಪ ಪೂಜಾರಿ ಅವರ ಕುಟುಂಬಕ್ಕೆ ತಕ್ಷಣ ಪರಿಹಾರ ಧನ ಹಾಗೂ ತುರ್ತು ನೆರವು ನೀಡಬೇಕೆಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ವತಿಯಿಂದ ಜೆಸ್ಕಾಂ ಇಲಾಖೆಗೆ ಮನವಿ ಮಾಡಿದ್ದಾರೆ. ಕುಟುಂಬದ ಆಧಾರವಾಗಿದ್ದ ಮಹದೇವಪ್ಪ ಅವರ ಅಕಾಲಿಕ ಮರಣದಿಂದ ಕುಟುಂಬವು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಮೃತರಿಗೆ ನಾಲ್ವರು ಮಕ್ಕಳು ಇದ್ದು ಅವರ ಭವಿಷ್ಯ ಆತಂಕಕ್ಕೆ ಒಳಗಾಗಿದೆ, ಮಕ್ಕಳ ಶಿಕ್ಷಣ, ಕುಟುಂಬದ ಜೀವನ ನಿರ್ವಹಣೆ ಹಾಗೂ ಭದ್ರತೆ ಸಮಸ್ಯೆಯಾಗಿರುವುದರಿಂದ ಸರ್ಕಾರದ ನಿಯಮಾನುಸಾರ ನ್ಯಾಯಸಮ್ಮತ ಪರಿಹಾರ ಧನ ಹಾಗೂ ಅಗತ್ಯ ಸರ್ಕಾರಿ ಸೌಲಭ್ಯಗಳನ್ನು ತಕ್ಷಣ ಒದಗಿಸಬೇಕೆಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಗುರುಮಠಕಲ್ ತಾಲೂಕು ಘಟಕದ ಮುಖಂಡ ರಂಗಸ್ವಾಮಿ ಕೊಂಕಲ್ ಒತ್ತಾಯಿಸಿದ್ದಾರೆ.



ಈ ಕುರಿತು ಮಾನವೀಯ ದೃಷ್ಟಿಯಿಂದ ಸಂಬಂಧ ಪಟ್ಟ ಅಧಿಕಾರಿಗಳು, ಜನ ಪ್ರತಿನಿಧಿಗಳು, ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಮೃತ ಮಹಾದೇವಪ್ಪ ಕುಟುಂಬಕ್ಕೆ ಪರಿಹಾರ ಒದಗಿಸಲು ಮನವಿ ಮಾಡಿದ್ದಾರೆ.

# ಶಾಸಕ ಆರ.ಬಸನಗೌಡರಿಗೆ ಸಚಿವ ಸ್ಥಾನ, ಮಲ್ಲಿಕಾರ್ಜುನ ಪಾಟೀಲ್‌ರಿಗೆ ನಿಗಮ ಹುದ್ದೆ ನೀಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆಮುದಗಲ್



ಜಿಲ್ಲೆಯ ಟ್ರಬಲ್ ಶೂಟರ್ ಶ್ರೀ ಮಲ್ಲಿಕಾರ್ಜುನಪಾಟೀಲ್ ಯದ್ದಲದಿನ್ನಿ ಅವರಿಗೆ ಈ ಬಾರಿ ಕರ್ನಾಟಕ ವಿಧಾನ ಪರಿಷತ್ ಸದಸ್ಯ ಸ್ಥಾನ, ಇಲ್ಲವಾದರೆ ರಾಜ್ಯಮಟ್ಟದ ಕ್ಯಾಬಿನೆಟ್ ದರ್ಜೆಯ ನಿಗಮ ಮಂಡಳಿಯ ಅಧ್ಯಕ್ಷ ಸ್ಥಾನ ನೀಡಬೇಕು, ಮಸ್ಕಿ ಶಾಸಕ ಆರ್.ಬಸನಗೌಡತುರ್ವಿಹಾಳರಿಗೆಮಂತ್ರಿ ಸ್ಥಾನನೀಡಬೇಕೆಂದು ಕೆಡಿಪಿ ಸದಸ್ಯ ದೇವಪ್ಪರಾಠೋಡ ಆಗ್ರಹಿಸಿದ್ದಾರೆ. ರಾಜ್ಯದಲ್ಲಿ ಎರಡನೇ ಅವಧಿಗೆ ನಡೆಯುವ ಮಂತ್ರಿಮಂಡಲ ಪುನರ್ ರಚನೆ ಸಂದರ್ಭದಲ್ಲಿ ಪಕ್ಷದ ಹೈಕಮಾಂಡ್ ಮಸ್ಕಿಕ್ಷೇತ್ರವನ್ನು ಪರಿಗಣಿಸಬೇಕು. ಆಗಿನ ಮಸ್ಕಿ ಶಾಸಕ ಪ್ರತಾಪಗೌಡ ಪಾಟೀಲ್ ಪಕ್ಷತೊರೆದು ಬಿಜೆಪಿ ಸೇರಿಕೊಂಡ ಬಳಿಕ ಕಾಂಗ್ರೆಸ್ ಪಕ್ಷ ಕಷ್ಟದಲ್ಲಿದ್ದಾಗ ರಾಜ್ಯದ ಗಮನಸೆಳೆದ ಮಸ್ಕಿಕ್ಷೇತ್ರದ ಉಪಚುನಾವಣೆಯಲ್ಲಿ ಬಿಜೆಪಿ ಸರಕಾರದ ಎದುರಿಗೆ ಆರ್.ಬಸನಗೌಡ ತುರ್ವಿಹಾಳರನ್ನು ಗೆದ್ದು ಶಾಸಕರನ್ನಾಗಿ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ ಮಸ್ಕಿ ಬ್ಲಾಕ್ ಅಧ್ಯಕ್ಷ ಮಲ್ಲಿಕಾರ್ಜುನಪಾಟೀಲ್ ಕ್ಷೇತ್ರದಲ್ಲಿ ತಳಮಟ್ಟದಿಂದ ಪಕ್ಷ ಕಟ್ಟಿ ಬೆಳೆಸಿದ ಜನನಾಯಕರು, ರಾಯಚೂರು ಜಿಲ್ಲೆಯ ಯುವಕಾಂಗ್ರೆಸ್ ಅಧ್ಯಕ್ಷರಾಗಿ ಕೆಲಸ ಮಾಡಿದ ಅನುಭವ, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷರಾಗಿ ಕೆಲಸ ಮಾಡುವ ಪ್ರಬುದ್ಧ ಸಂಘಟನೆ ಚತುರ, ಕೆಪಿಸಿಸಿ ಅಧ್ಯಕ್ಷ ಶ್ರೀ ಡಿ.ಕೆ.ಶಿವಕುಮಾರ್ ಅವರ ಆಪ್ತರಾಗಿ ಇರುವ ಶ್ರೀ ಮಲ್ಲಿಕಾರ್ಜುನ ಪಾಟೀಲ್ ಯದ್ದಲದಿನ್ನಿ ಈ ಬಾರಿ ವಿಧಾನ ಪರಿಷತ್ತಿನ ಸದಸ್ಯ ಸ್ಥಾನವಗಲಿ ಮತ್ತು ರಾಜ್ಯ ಮಟ್ಟದ ಕ್ಯಾಬಿನೆಟ್ ದರ್ಜೆಯ ನಿಗಮ ಮಂಡಳಿ ಅಧ್ಯಕ್ಷ ಸ್ಥಳ ನೀಡಬೇಕೆಂದರ ಜೊತೆಗೆ ಸತತ ಎರಡು ಬಾರಿ ಶಾಸಕರಾಗಿ ಆಯ್ಕೆಯಾದ ಆರ್.ಬಸನಗೌಡ ತುರ್ವಿಹಾಳರಿಗೆ ಮಂತ್ರಿಸ್ಥಾನ ನೀಡಬೇಕೆಂದು ಅವರು ಪಕ್ಷದ ಹೈಕಮಾಂಡ್‌ಗೆ ಆಗ್ರಹಿಸಿದ್ದಾರೆ.

# ಮೂರು ದಶಕಗಳಿಂದ ಮನೆಗಾಗಿ ಅಲೆದಾಡುತ್ತಿರುವ ಬುಡಗ ಜಂಗಮ ಕುಟುಂಬಗಳು

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಪಟ್ಟಣದಲ್ಲಿ ಕಳೆದ ಮೂವತ್ತು ವರ್ಷಗಳಿಂದಲೂ ತಲೆಮೇಲೆ ಸೂರು ಇಲ್ಲದೆ ಬುಡಗ ಜಂಗಮ ಸಮುದಾಯಕ್ಕೆ ಸೇರಿದ 20ಕ್ಕೂ ಹೆಚ್ಚು ಕುಟುಂಬಗಳು ಸಂಕಷ್ಟ ಜೀವನ ಸಾಗಿಸುತ್ತಿವೆ. ಆಶ್ರಯ ಯೋಜನೆಯಡಿ ಮನೆ ನೀಡುವಂತೆ ಅನೇಕ ಬಾರಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಮೊರೆ ಹೋದರೂ ಇಂದಿಗೂ ಶಾಶ್ವತ ಪರಿಹಾರ ಸಿಕ್ಕಿಲ್ಲ ಎಂದು ಆಶಮ್ಮ ಅಳಲು ತೋಡಿಕೊಂಡಿದ್ದಾರೆ.ಪಟ್ಟಣದ ಇಂದ್ರನಗರ, ಲಕ್ಷ್ಮೀನಗರ, ಪುರಸಭೆ ಮುಂಭಾಗ ಸೇರಿದಂತೆ ವಿವಿಧ ಕಡೆಗಳಲ್ಲಿ ತಾತ್ಕಾಲಿಕವಾಗಿ ವಾಸವಿದ್ದು, ಇದೀಗ ಪಟ್ಟಣದ ಹೊರವಲಯದಲ್ಲಿ ಗುಡಿಸಲು ನಿರ್ಮಿಸಿಕೊಂಡು ಜೀವನ ನಡೆಸುತ್ತಿದ್ದಾರೆ. ಮಳೆ, ಗಾಳಿ, ವಿಷಜಂತುಗಳ ಭಯದ ನಡುವೆ ದಿನನಿತ್ಯ ಬದುಕು ನಡೆಸುವುದು ಕಷ್ಟಕರವಾಗಿದೆ ಎಂದು ಅವರು ಹೇಳುತ್ತಿದ್ದಾರೆ."ಮಳೆ ಬಂದರೆ ಗುಡಿಸಲು ಒಳಗೆ ನೀರು ಬರುತ್ತದೆ. ಮಕ್ಕಳೊಂದಿಗೆ ರಾತ್ರಿ ಜಾಗರಣೆ ಮಾಡಬೇಕಾಗುತ್ತದೆ. ಹಲವು ವರ್ಷಗಳಿಂದ ಮನೆಗಾಗಿ ಕಾಯುತ್ತಿದ್ದೇವೆ. ಆದರೆ ಪ್ರತೀ ಚುನಾವಣೆಯಲ್ಲೂ ಆಶ್ವಾಸನೆ ಮಾತ್ರ ಸಿಗುತ್ತಿದೆ" ಎಂದು ಮೊಗಲಮ್ಮ ಬೇಸರ ವ್ಯಕ್ತಪಡಿಸಿದರು.ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಸ್ಪಂದಿಸಿ ಆಶ್ರಯ ಯೋಜನೆಯಡಿ ಮನೆ ಮಂಜೂರು ಮಾಡಬೇಕು. ಸಮಾಜದ ಅತೀ ಹಿಂದುಳಿದ ಕುಟುಂಬಗಳ ಬದುಕಿಗೆ ಭದ್ರತೆ ಒದಗಿಸಬೇಕು ಎಂದು ಬುಡಗ ಜಂಗಮ ಕುಟುಂಬದ ಕ್ರೀಷ್ಣಯ್ಯ , ಲಾಲಪ್ಪ , ಹುಸೇನಪ್ಪ, ಒತ್ತಾಯಿಸಿದ್ದಾರೆ.

# ದಾನಗಳಲ್ಲೇ ರಕ್ತದಾನ ಶ್ರೇಷ್ಠ



• ಮಲ್ಲಮ್ಮ ನುಡಿ ವಾರ್ತೆಮುದಗಲ್


ದಾನಗಳಲ್ಲೇ ರಕ್ತದಾನ ಶ್ರೇಷ್ಠವಾಗಿದೆ ಎಂದು ಡಾ. ಅನಂತಕುಮಾರ ನಾಗಲೀಕರ ಹೇಳಿದರು.

ಪಟ್ಟಣದ ಸರಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನಷನ್ ಸೊಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ರಿಮ್ಸ್ ಬೋಧಕ ಆಸ್ಪತ್ರೆ ರಾಯಚೂರು ಸಹಯೋಗದಲ್ಲಿ ಆಯೋಜಿಸಿದ್ದ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ದಾನಗಳಲ್ಲೇ ರಕ್ತದಾನ ಶ್ರೇಷ್ಠವಾಗಿದೆ. ತುರ್ತು ಪರಿಸ್ಥಿತಿಯಲ್ಲಿರುವ ರೋಗಿಗಳಿಗೆ ರಕ್ತದಾನ ಮಾಡುವುದರಿಂದ ಮರುಜೀವ ನೀಡಿದಂತೆ ಆಗುತ್ತದೆ.

ರಕ್ತದಾನದಿಂದ ಒಬ್ಬರ ಜೀವ ಉಳಿಸಬಹುದು. ದೇಹದಲ್ಲಿ ಹೊಸ ರಕ್ತಕಣಗಳು ಉತ್ಪಾದನೆ ಆಗುತ್ತದೆ. ಹೃದಯ ಆರೋಗ್ಯ ಸುಧಾರಿಸುತ್ತದೆ. ರಕ್ತದಾನ ಮಾಡಲು ಪ್ರತಿಯೊಬ್ಬರು ಮುಂದೆ ಬರಬೇಕು. ಸಮುದಾಯ ಇಂತಹ ಅವಕಾಶವನ್ನು ಕಳೆದುಕೊಳ್ಳಬಾರದು ಎಂದು ಹೇಳಿದರು.

ಕಾರ್ಯಕ್ರಮವನ್ನು ಸಮುದಾಯ ಆರೋಗ್ಯ ಕೇಂದ್ರದ ಆಡಳಿತಾಧಿಕಾರಿ ಡಾ. ಚಂದ್ರಕಾಂತ ಉದ್ಘಾಟಿಸಿದರು. ಶಿಬಿರಕ್ಕೆ ಲಿಂಗಸುಗೂರು ತಾಲೂಕು ಆರೋಗ್ಯಾಧಿಕಾರಿ ಡಾ. ಅಮರೇಶ ಪಾಟೀಲ್ ಭೇಟಿ ನೀಡಿ ಪರಿಶೀಲಿಸಿದರು.ಡಾ. ಗೀತಾಂಜಲಿ, ಡಾ. ವಿನೋದಕುಮಾರ, ಬ್ಲಡ್ ಬ್ಯಾಂಕ್ ಅಧಿಕಾರಿ ನಿಖಿತಾ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶಾರದಾ, ತಾಲೂಕ ಆರೋಗ್ಯ ಕಛೇರಿ ಅಧೀಕ್ಷಕ ಅರ್ಜುನ್ ಹಾಗೂ ಸಿಬ್ಬಂದಿಗಳು ಇದ್ದರು.

# ಗುರುಮಠಕಲ್‌ನಲ್ಲಿ ವೀರ ಸಾವರ್ಕರ್ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪಟ್ಟಣದ ತಿಮ್ಮಣ್ಣದೇವಸ್ಥಾನದ ಯುವಕರ ಬಳಗದ ವತಿಯಿಂದ ವೀರ ಸಾವರ್ಕರ್ ಜಯಂತಿಯನ್ನು ಗುರುವಾರ ಭಕ್ತಿಭಾವದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ವೀರ ಸಾವರ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ ವೆಂಕಟೇಶ್ ಮುದಿರಾಜ್ ಅವರು, "ವೀರ ಸಾವರ್ಕರ್ ಒಬ್ಬ ಅಪ್ಪಟ ದೇಶಭಕ್ತರಾಗಿದ್ದು, ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಅವರ ಕೊಡುಗೆ ಅಪಾರವಾಗಿದೆ. ಅವರ ದೇಶಪ್ರೇಮ, ತ್ಯಾಗ ಮತ್ತು ವಿಚಾರಧಾರೆಗಳು ಇಂದಿನ ಯುವಕರಿಗೆ ಆದರ್ಶವಾಗಿವೆ" ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಯುವಕರು ಹಾಗೂ ಸಾರ್ವಜನಿಕರು ಭಾಗವಹಿಸಿ ಸಾವರ್ಕರ್ ಅವರ ಜೀವನ ಸಾಧನೆಗಳನ್ನು ಸ್ಮರಿಸಿದರು.

# ಸಾರ್ವಜನಿಕರು ನಾಲ್ಕು ವಿಧದ ಕಸವನ್ನು ಮೂಲದಲ್ಲೇ ಕಡ್ಡಾಯವಾಗಿ ಪ್ರತ್ಯೇಕಿಸಿ ನೀಡಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.29:ಪರಿಸರ ಸಂರಕ್ಷಣೆ ಮತ್ತು ಸ್ವಚ್ಛತೆಯ ಹಿತದೃಷ್ಟಿಯಿಂದ ಹಾಗೂ ಘನತ್ಯಾಜ್ಯ ನಿರ್ವಹಣೆ ನಿಯಮಗಳ ಪ್ರಕಾರ ಕಲಬುರಗಿ ಮಹಾನಗರಪಾಲಿಕೆ ವ್ಯಾಪ್ತಿಯ ಎಲ್ಲಾ ಸಾರ್ವಜನಿಕರು ಕಡ್ಡಾಯವಾಗಿ ತಮ್ಮ ಮನೆಯ ಕಸವನ್ನು ಕೆಳಗಿನಂತೆ 4 ಪ್ರತ್ಯೇಕ ವಿಭಾಗಗಳಾಗಿ ವಿಂಗಡಿಸಿ ಪಾಲಿಕೆಯ ಕಸದ ವಾಹನಗಳಿಗೆ ನೀಡಬೇಕು. ನಾಲ್ಕು ಭಾಗಗಳಾಗಿ ಪ್ರತ್ಯೇಕಿಸದ ಮಿಶ್ರ ಕಸವನ್ನು ಪಾಲಿಕೆಯ ವಾಹನಗಳು ಯಾವುದೇ ಕಾರಣಕ್ಕೂ ಸ್ವೀಕರಿಸುವುದಿಲ್ಲ. ನಿಯಮ ಉಲ್ಲಂಘಿಸುವವರ ವಿರುದ್ಧ ದಂಡ ವಿಧಿಸಲಾಗುತ್ತದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ. ಹಸಿ ಕಸ (Wet Waste ºÀ¹gÀÄ §PÉmï): ನೈಸರ್ಗಿಕವಾಗಿ ಕೊಳೆಯುವ ಮತ್ತು ಗೊಬ್ಬರ ಮಾಡಬಹುದಾದ ಅಡುಗೆಮನೆ ಹಾಗೂ ತೋಟದ ಕಸ. ಒಳಗೊಂಡಿರುವ ವಸುಗಳು-ಅಡುಗೆ ಮನೆಯ ತ್ಯಾಜ್ಯ, ತರಕಾರಿ, ಹಣ್ಣುಗಳ ಸಿಪ್ಪೆಗಳು, ಉಳಿದ ಆಹಾರ ಮತ್ತು ಟೀ/ಕಾಫಿ ಪುಡಿ (ಬಳಸಿದ ನಂತರದ್ದು). ಒಣ ಕಸ (Dry Waste – ನೀಲಿ ಬಕೆಟ್): ಕೊಳೆಯದ ಆದರೆ ಮರುಬಳಕೆ (Recycle) ಮಾಡಬಹುದಾದ ಸ್ವಚ್ಛವಾದ ವಸ್ತುಗಳು. ಒಳಗೊಂಡಿರುವ ವಸ್ತುಗಳು- ಪ್ಲಾಸ್ಟಿಕ್ ವಸ್ತುಗಳು, ಕಾಗದ, ರಟ್ಟಿನ ಬಾಕ್ಸ್‌ಗಳು, ಲೋಹದ ವಸ್ತುಗಳು, ಗಾಜಿನ ಬಾಟಲಿಗಳು, ಬಟ್ಟೆ ಮತ್ತು ರಬ್ಬರ್. ನೈರ್ಮಲ್ಯ ಕಸ (SanitaryWaste-ಕೆಂಪು ಬಕೆಟ್/ಪೇಪರ್‌ನಲ್ಲಿ ಸುತ್ತಿರುವುದು): ಆರೋಗ್ಯದ ದೃಷ್ಟಿಯಿಂದ ಅತ್ಯಂತ ಜಾಗರೂಕತೆಯಿಂದ ವಿಲೇವಾರಿ ಮಾಡಬೇಕಾದ ವೈಯಕ್ತಿಕ ತ್ಯಾಜ್ಯ. ಇವುಗಳನ್ನು ಕಡ್ಡಾಯವಾಗಿ ಪತ್ರಿಕೆಯಲ್ಲಿ (News paper) ಸುತ್ತಿ, ಕೆಂಪು ಬಣ್ಣದ ಗುರುತು ಮಾಡಿ ನೀಡಬೇಕು. ಒಳಗೊಂಡಿರುವ ವಸ್ತುಗಳು-ಬಳಸಿದ ಡೈಪರ್‌ಗಳು, ಸ್ಯಾನಿಟರಿ ಟವಲ್‌ಗಳು ಅಥವಾ ನ್ಯಾಪಕಿನ್‌ಗಳು, ಟ್ಯಾಂಪೂನ್‌ಗಳು. ವಿಶೇಷ ಕಾಳಜಿ ಕಸ (Special Waste ಕಪ್ಪು ಬಕೆಟ್): ರಾಸಾಯನಿಕ ಅಥವಾ ತಾಂತ್ರಿಕ ಕಾರಣಗಳಿಂದ ಪರಿಸರಕ್ಕೆ ಹಾನಿ ಉಂಟುಮಾಡುವ ತ್ಯಾಜ್ಯಗಳು. ಒಳಗೊಂಡಿರುವ ವಸ್ತುಗಳು-ಬಣ್ಣದ ಡಬ್ಬಗಳು, ಕೀಟನಾಶಕಗಳ ಬಾಟಲಿಗಳು, ಸಿ.ಎಫ್.ಎಲ್ ಬಲ್ಬ್‌ಗಳು, ಟ್ಯೂಬ್‌ಲೈಟ್‌ಗಳು, ವೈದ್ಯಕೀಯ ತ್ಯಾಜ್ಯ ಮತ್ತು ಹಳೆಯ ಬ್ಯಾಟರಿಗಳು.

# ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಸಮುದಾಯ ಆರೋಗ್ಯ ಕೇಂದ್ರ ಕುಕನೂರ ವತಿಯಿಂದ ಪಟ್ಟಣದ ಅಂಗನವಾಡಿ ಕೇಂದ್ರ 3 ರಲ್ಲಿ ವಿಶ್ವ ಋತು ಚಕ್ರ ನೈರ್ಮಲ್ಯ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಹದಿಹರೆಯದವರ ಆಪ್ತ ಸಮಾಲೋಚಕ ಕಳಕಪ್ಪ ಬಂಡಿ ಮಾತನಾಡಿ ಋತು ಚಕ್ರ ಸಮಯದಲ್ಲಿ ವೈಯಕ್ತಿಕ ಸ್ವಚ್ಛತೆ ಮತ್ತು ಪೌಷ್ಟಿಕ ಆಹಾರ ಸೇವನೆ ಮಾಡಬೇಕು ಜೊತೆಗೆ ಕಬ್ಬಿಣಾಂಶ ಇರುವಂತಹ ಪದಾರ್ಥಗಳ ಸೇವನೆ ವಿಪ್ಸ ಮಾತ್ರೆಗಳ ಕುರಿತು ಮಾಹಿತಿ ನೀಡಲಾಯಿತು.ನಂತರ ಸಮುದಾಯ ಆರೋಗ್ಯ ಅಧಿಕಾರಿ ಶಿಲ್ಪಾ ಮಾತನಾಡಿ ಪ್ಯಾಡ್ ಗಳ ಬಳಕೆ ಮತ್ತು ವಿಲೇವಾರಿ ಜೊತೆಗೆ ಋತುಚಕ್ರ ಸಮಯದಲ್ಲಿ ಹೊಟ್ಟೆನೋವು ಬಂದಾಗ ಬಾಟಲಿನಲ್ಲಿ ಬಿಸಿ ನೀರಿನ ಹಾಕಿಕೊಂಡು ಹೊಟ್ಟೆ ಮೇಲೆ ನಿಧಾನವಾಗಿ ಮೇಲಿಂದ ಕೆಳಗೆ ,ಮೇಲೆಗೆ ಮಾಡಬೇಕು ಜೊತೆಗೆ ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳಿ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಕಾಳಪ್ಪ ಕುಂಬಾರ, ಅಂಗನವಾಡಿ ಕಾರ್ಯಕರ್ತೆ ಚನ್ನಮ್ಮನಾಗಣ್ಣನವರ್,ಆಶಾ ಕಾರ್ಯಕರ್ತೆಯರಾದ ಮತಿ ಅಲಿಮಾ ನೂರಭಾಷ, ಗೀತಾ ಅಕ್ಕಿ, ಲಕ್ಷ್ಮಿ ಮುದ್ದು ಕಿಶೋರಿಯರು ಹಾಜರಿದ್ದರು.

# ತ್ಯಾಗ-ಬಲಿದಾನದ ಬಕ್ರೀದ್ ಆಚರಣೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಪಟ್ಟಣದ ಎರಡು ಈದ್ಗಾ ಮೈದಾನದಲ್ಲಿ ತ್ಯಾಗ-ಬಲಿದಾನ ಸಂಕೇತವಾದ ಬಕ್ರೀದ್ ಹಬ್ಬವನ್ನು ಮುಸ್ಲಿಂ ಸಮುದಾಯವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಗುರುವಾರ ಸಂಭ್ರಮದಿಂದ ಆಚರಿಸಿದರು.ಕೋಟೆ ಮುಂಭಾಗದ ಈದ್ಗಾ ಮೈದಾನದಲ್ಲಿ ಜಮೀರ ಅಹ್ಮದ್ ಖಾಜೀ, ಬಾಗಲಕೋಟೆ ರಸ್ತೆಯ ಹೊರವಲಯದಲ್ಲಿರುವ ಈದ್ಗಾ ಮೈದಾನದಲ್ಲಿ ಶಾಮೀದ್ ಮೌಲಾನ ನೇತೃತ್ವದಲ್ಲಿ ಮುಸ್ಲಿಂ ಸಮಾಜ ಭಾಂದವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಬಕ್ರೀದ್ ಹಬ್ಬ ವಿಶೇಷತೆ ಮತ್ತು ಖುರಾನ್ ಬಗ್ಗೆ ಭೋದನೆ ಮಾಡಲಾಯಿತು.ಪಟ್ಟಣದ ವಿವಿಧ ಮಜೀದ್ ಗಳಲ್ಲಿ ಹಬ್ಬದ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ವಿವಿಧ ಧರ್ಮದ ಮುಖಂಡರು ಈದ್ಯಾ ಮೈದಾನಗಳಿಗೆ ತೆರಳಿ ಮುಸ್ಲಿಂ ಸಮಾಜದವರಿಗೆ ಪರಸ್ಪರ ಆಲಂಗಿಸಿ ಹಬ್ಬದ ಶುಭಾಶಯ ತಿಳಿಸಿದರು.ಎರಡು ಈದ್ಗಾ ಮೈದಾನಗಳಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ಮುಸ್ಲಿಂ ಸಮಾಜದವರು ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು.

# ಎಲ್ಲಾ ಕಛೇರಿಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮದ ನಾಮಫಲಕ ಅಳವಡಿಸಿ: ಸಿದ್ರಾಮೇಶ್ವರ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ಜಿಲ್ಲೆಯ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮ-2005ರ ನಾಮಫಲಕವನ್ನು ಅಳವಡಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದ ವಿವಿಧ ಕಛೇರಿಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮ-2005ರ ನಾಮಫಲಕವನ್ನು ಅಳವಡಿಸಿರುವುದಿಲ್ಲ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ದೂರುಗಳು ಸ್ವೀಕೃತವಾಗಿದ್ದು, ಜಿಲ್ಲಾಡಳಿತ ಭವನದಲ್ಲಿರುವ ಎಲ್ಲಾ ಕಛೇರಿಗಳು ಹಾಗೂ ತಮ್ಮ ಅಧೀನದಲ್ಲಿ ಬರುವ ಎಲ್ಲಾ ತಾಲ್ಲೂಕು ಕಛೇರಿಗಳಲ್ಲಿ ಕಡ್ಡಾಯವಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಮಾಹಿತಿಯುಳ್ಳ ನಾಮಫಲಕವನ್ನು ಅಳವಡಿಸುವಂತೆ ಪ್ರಕಟಣೆ ತಿಳಿಸಿದೆ.

## ಶಾಸಕ ತುನ್ನೂರಗೆ ಸಚಿವ ಸ್ಥಾನ ನೀಡಿ: ಕೃಷ್ಣ ದಾಸನಕೇರಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ನೂತನ ಸಿಎಂ ಡಿ.ಕೆ.ಶಿವಕುಮಾರ ಅವರ ಸಂಪುಟದಲ್ಲಿ ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತನ್ನೂರ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಪಕ್ಷದ ಯುವ ಮುಖಂಡ ಕೃಷ್ಣ ದಾಸನಕೇರಿ ಅವರು ಕಾಂಗ್ರೆಸ್ ಪಕ್ಷದ ಹೈಕಮಾಂಡ್ ನಾಯಕರನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು,ಕಳೆದ ಐವತ್ತು ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠೆಯಿಂದ ಇದ್ದು, ಎಂಎಲ್ ಸಿಯಾಗಿ ಮತ್ತು ಈಗ ಕಳೆದ ಮೂರು ವರ್ಷಗಳಿಂದ ಶಾಸಕರಾಗಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದಾರೆಂದು ಅವರು ವಿವರಿಸಿದ್ದಾರೆ.

ಹಿರಿಯರು, ಅನುಭವಿಗಳು ಆಗಿರುವ ತುನ್ನೂರ ಅವರನ್ನು ಸಚಿವರನ್ನಾಗಿ ಮಾಡಿದರೇ ಇನ್ನಷ್ಟು ಅಭಿವೃದ್ಧಿ ಕೆಲಸಗಳು ಮಾಡಲು ಅನುಕೂಲವಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

## ರುದ್ರಪ್ಪ ಲಮಾಣಿ ಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಿ: ಲಮಾಣಿ ಸಮಾಜದ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರು, ಹಾಲಿ ಶಾಸಕ ಹಾಗೂ ಮಾಜಿ ಉಪ ಸಭಾಪತಿ ರುದ್ರಪ್ಪ ಲಮಾಣಿ ಅವರಿಗೆ ರಾಜ್ಯ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿ (DCM) ಸ್ಥಾನ ನೀಡಬೇಕು ಅಖಿಲ ಭಾರತ ಬಂಜಾರಾ ಸೇವಾ ಸಂಘ ಹಾಗೂ ಜಿಲ್ಲಾ ಅಧ್ಯಕ್ಷರು ಹಾಗೂ ಕಾಂಗ್ರೆಸ ಯುವ ಮುಖಂಡರಾದ ಆಕಾಶ ಪವಾರ ಒತ್ತಾಯಿಸಿದೆ.

ಸಮಾಜದ ಹಿರಿಯ ನಾಯಕ ಮತ್ತು ಅನುಭವಿ ರಾಜಕಾರಣಿ ಆದ ?ರುದ್ರಪ್ಪ ಲಮಾಣಿ ಅವರು ಲಮಾಣಿ ಸಮಾಜದ ಅತ್ಯಂತ ಹಿರಿಯ ಮತ್ತು ಗೌರವಾನ್ವಿತ ನಾಯಕರಾಗಿದ್ದಾರೆ. ಈ ಹಿಂದೆ ವಿಧಾನಸಭಾ ಉಪ ಸಭಾಪತಿಯಾಗಿ ಅತ್ಯಂತ ಯಶಸ್ವಿಯಾಗಿ ಮತ್ತು ದಕ್ಷತೆಯಿಂದ ಸೇವೆ ಸಲ್ಲಿಸಿದ ಸುದೀರ್ಘ ರಾಜಕೀಯ ಅನುಭವ ಹೊಂದಿದ್ದಾರೆ. ಅವರ ಸುದೀರ್ಘ ಸೇವೆ ಮತ್ತು ಹಿರಿತನವನ್ನು ಪರಿಗಣಿಸಿ ಅವರಿಗೆ ಈ ಬಾರಿ ಉನ್ನತ ಸ್ಥಾನ ನೀಡಬೇಕು ಎಂದು ಆಗ್ರಹಿದ್ದಾರೆ.ಲಮಾಣಿ ಸಮಾಜದ ಹಿತರಕ್ಷಣೆ ಮತ್ತು ಅಭಿವೃದ್ಧಿಗಾಗಿ ರುದ್ರಪ್ಪ ಲಮಾಣಿ ಅವರಂತಹ ಹಿರಿಯ ಅನುಭವಿ ನಾಯಕರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು.?ಕಾಂಗ್ರೆಸ್ ಪಕ್ಷದ ಏಕೈಕ ಶಾಸಕ ?ಪ್ರಸ್ತುತ ಲಮಾಣಿ ಸಮುದಾಯದಿಂದ ಕಾಂಗ್ರೆಸ್ ಪಕ್ಷದ ಏಕೈಕ ಶಾಸಕರಾಗಿ ರುದ್ರಪ್ಪ ಲಮಾಣಿ ಅವರು ಆಯ್ಕೆಯಾಗಿದ್ದಾರೆ. ಇಡೀ ಸಮುದಾಯವನ್ನು ಪ್ರತಿನಿಧಿಸುವ ಏಕೈಕ ಧ್ವನಿಯಾಗಿರುವುದರಿಂದ, ಅವರಿಗೆ ಸೂಕ್ತ ಸ್ಥಾನಮಾನ ನೀಡುವ ಮೂಲಕ ಕಾಂಗ್ರೆಸ್ ಪಕ್ಷವು ಲಮಾಣಿ ಸಮಾಜಕ್ಕೆ ದೊಡ್ಡ ರಾಜಕೀಯ ಮನ್ನಣೆ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

## ಭಾತಂಬ್ರಾ: ಅಖಂಡ ಹರಿನಾಮ ಸಪ್ತಾಹ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲ್ಲೂಕಿನ ಭಾತಂಬ್ರಾ ಗ್ರಾಮದ ಮಾರುತಿ ದೇವಸ್ಥಾನದಲ್ಲಿ ಅಖಂಡ ಹರಿನಾಮ ಸಪ್ತಾಹ, ಗ್ರಂಥರಾಜ ಜ್ಞಾನೇಶ್ವರಿ ಪಾರಾಯಣ ಕಾರ್ಯಕ್ರಮನಡೆಯಿತು.ಕೀರ್ತನೆಕಾರ ಹರಿಭಕ್ತಪಾರಾಯಣ ಸಂದೀಪ ಮಹಾರಾಜ ತೆಲಗಾಂವಕರ್ ಅವರು, ಜಗದ್ಗುರು ತುಕಾರಾಮ ಮಹಾರಾಜರು ಸಾರಿದ ದಿವ್ಯ ಸಂದೇಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಬದುಕು ಸಾರ್ಥಕವಾಗುತ್ತದೆ ಎಂದು ಹೇಳಿದರು.ಭಕ್ತಿಯ ಮಾರ್ಗದಲ್ಲಿ ನಡೆಯುವುದರಿಂದ ಮನಸ್ಸಿಗೆ ಶಾಂತಿ ದೊರೆಯುವುದರ ಜೊತೆಗೆ ಸಮಾಜದಲ್ಲಿ ಸೌಹಾರ್ದತೆ ಹಾಗೂ ಮಾನವೀಯ ಮೌಲ್ಯಗಳು ಬೆಳೆಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಸಪ್ತಾಹ ಆಯೋಜನಾ ಸಮಿತಿಯ ಪದಾಧಿಕಾರಿಗಳು, ಮಾರುತಿ ದೇವಸ್ಥಾನದ ಸದಸ್ಯರು, ಗ್ರಾಮದ ಹಿರಿಯರು, ಮಹಿಳೆಯರು ಹಾಗೂ ಅಪಾರ ಸಂಖ್ಯೆಯ ಸದ್ಭಕ್ತರು ಭಾಗವಹಿಸಿ ಭಜನೆ, ಕೀರ್ತನೆ ಮತ್ತು ಪಾರಾಯಣದಲ್ಲಿ ತೊಡಗಿಸಿಕೊಂಡರು.

ಅಧ್ಯಕ್ಷ ವಿನೋದ ಕುಂಟಮಲಗೆ, ವಿಜಯ ಕುಲಕರ್ಣಿ, ಶಂಕರರಾವ ಅಮದಾಬಾದೆ, ದೌಲತರಾವ ಅಮದಾಬಾದೆ, ವಿಠಲ ಕುಂಟಮಲಗೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಿವಿಧ ವಸತಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.29:2026–27ನೇ ಸಾಲಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಲಬುರಗಿ ಜಿಲ್ಲೆಯ ಕೆಳಕಂಡ ವಸತಿ ವಿಜ್ಞಾನ ಕಾಲೇಜುಗಳಲ್ಲಿ ಕನ್ನಡ, ಇಂಗ್ಲೀಷ, ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ ಹಾಗೂ ಜೀವಶಾಸ್ತ್ರ ವಿಷಯಗಳ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಜೇವರ್ಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಕಾಲೇಜಿನಲ್ಲಿ ಕನ್ನಡ–01, ಇಂಗ್ಲೀಷ–01 ವಿಷಯದ ಉಪನ್ಯಾಸಕರ ಹುದ್ದೆಗಳಿಗೆ ಎಂ.ಎ. ಬಿ.ಇಡಿ. ವಿದ್ಯಾರ್ಹತೆ ಹಾಗೂ ಭೌತಶಾಸ್ತ್ರ–01, ರಸಾಯನಶಾಸ್ತ್ರ–01, ಗಣಿತ–01 ಮತ್ತು ಜೀವಶಾಸ್ತ್ರ–01 ಹುದ್ದೆಗಳಿಗೆ ಎಂ.ಎಸ್ಸಿ. ಬಿ.ಇಡಿ. ವಿದ್ಯಾರ್ಹತೆ ಹೊಂದಿರಬೇಕು. ಗುಂಡಗುರ್ತಿ ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಕಾಲೇಜಿನಲ್ಲಿ ಭೌತಶಾಸ್ತ್ರ–01, ರಸಾಯನಶಾಸ್ತ್ರ–01 ಹುದ್ದೆಗಳಿಗೆ ಎಂ.ಎಸ್ಸಿ. ಬಿ.ಇಡಿ. ವಿದ್ಯಾರ್ಹತೆ ಹೊಂದಿರಬೇಕು.

## ಬೀಜ, ಗೊಬ್ಬರ ಅಕ್ರಮ ಸಾಗಣೆಗೆ ಶಾಸಕ ಪ್ರಭು ಚವ್ಹಾಣ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಅಕ್ರಮ ಸಾಗಾಣಿಕೆ ತಡೆಯಬೇಕು ಮತ್ತು ವಿತರಣೆ ವೇಳೆ ಯಾವುದೇ ರೀತಿಯ ತಾರತಮ್ಯ ಆಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಕ್ಷೇತ್ರದ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಅಧಿಕಾರಿಗಳಿಗೆ ಕಡಕ್ ಸೂಚನೆ ನೀಡಿದ್ದಾರೆ.

ತಾಲೂಕಿನ ಕಮಲನಗರ, ಠಾಣಾಕುಶನೂರ ಮತ್ತು ಸಂತಪೂರನಲ್ಲಿ ಶುಕ್ರವಾರ ರಂದು ಹಮ್ಮಿಕೊಂಡಿದ್ದ 2026–27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರೈತರು ಆತಂಕ ಪಡುವ ಅಗತ್ಯವಿಲ್ಲ

"ಔರಾದ(ಬಿ) ಕ್ಷೇತ್ರಕ್ಕೆ ಅಗತ್ಯವಿರುವಷ್ಟು ಬಿತ್ತನೆ ಬೀಜ ಮತ್ತು ರಸಗೊಬ್ಬರವನ್ನು ತರಿಸಲಾಗಿದೆ. ವಿಶೇಷವಾಗಿ ಈ ಭಾಗದಲ್ಲಿ ಹೆಚ್ಚು ಬೆಳೆಯಲಾಗುವ ಸೋಯಾಬೀನ್ ಅನ್ನು ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನು ಮಾಡಿಕೊಳ್ಳಲಾಗಿದೆ. ಇನ್ನೂ ಹೆಚ್ಚಿನ ಅಗತ್ಯವಿದ್ದರೆ ಅಧಿಕಾರಿಗಳೊಂದಿಗೆ ಮಾತನಾಡಿ ತರಿಸಲು ವ್ಯವಸ್ಥೆ ಮಾಡಲಾಗುವುದು. ರೈತರು ಯಾವುದೇ ಆತಂಕಕ್ಕೆ ಒಳಗಾಗದೆ ನಿಗದಿತ ದಿನಾಂಕದಂದು ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಬೀಜ, ಗೊಬ್ಬರ ಪಡೆಯಬಹುದು ಎಂದು ಹೇಳಿದರು.

ಕಟ್ಟುನಿಟ್ಟಿನ ಎಚ್ಚರಿಕೆಗಳು ಮತ್ತು ಪ್ರಮುಖ ಅಂಶಗಳು:

ಗೊಂದಲ ನಿವಾರಣೆ: ಬೀಜ ವಿತರಿಸುವ ದಿನಾಂಕದ ಬಗ್ಗೆ ಮುಂಚಿತವಾಗಿಯೇ ಗ್ರಾಮಗಳಲ್ಲಿ ಡಂಗೂರ ಸಾರಿಸಿ ರೈತರಿಗೆ ಮಾಹಿತಿ ನೀಡಬೇಕು.

ಸೌಜನ್ಯದ ವರ್ತನೆ:

ಅಧಿಕಾರಿಗಳು ಮತ್ತು ಸಿಬ್ಬಂದಿ ರೈತರೊಂದಿಗೆ ಸೌಜನ್ಯದಿಂದ ನಡೆದುಕೊಳ್ಳಬೇಕು. ರೈತರೊಂದಿಗೆ ಉದ್ಧಟತನದಿಂದ ವರ್ತಿಸುವುದು, ಕೆಟ್ಟ ಪದ ಬಳಸುವುದು ಅಥವಾ ಹೆಚ್ಚುವರಿ ಹಣ ವಸೂಲಿ ಮಾಡುವುದು ಕಂಡುಬಂದರೆ ಯಾವುದೇ ಮುಲಾಜಿಲ್ಲದೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

ಗುಣಮಟ್ಟಕ್ಕೆ ಆದ್ಯತೆ:

ರೈತರಿಗೆ ಕಡ್ಡಾಯವಾಗಿ ಗುಣಮಟ್ಟದ ಬಿತ್ತನೆ ಬೀಜಗಳನ್ನೇ ಪೂರೈಸಬೇಕು. ಎಲ್ಲಾದರೂ ಕಳಪೆ ಮಟ್ಟದ ಬೀಜ ಕಂಡುಬಂದರೆ ತಕ್ಷಣವೇ ಅದನ್ನು ಹಿಂದಿರುಗಿಸಿ, ಸರಿಯಾದ ಬೀಜ ತರಿಸಿಕೊಡಬೇಕು.

ರೈತರಿಗೂ ಶಾಸಕರ ಮನವಿ:

ರೈತರು ಕೂಡ ನಿಗದಿತ ದಿನಾಂಕದಂದು ಮಾತ್ರ ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಗಳಿಗೆ ತೆರಳಬೇಕು. ನಿಗದಿತ ಮಿತಿಗಿಂತ ಹೆಚ್ಚು ರಸಗೊಬ್ಬರ ಕೇಳುವುದು ಅಥವಾ ಇತರರ ಪಹಣಿ (ಖಖಿಅ) ಬಳಸಿ ಹೆಚ್ಚುವರಿ ಬೀಜ ಪಡೆಯಲು ಯತ್ನಿಸದೆ ಅಧಿಕಾರಿಗಳಿಗೆ ಸಹಕಾರ ನೀಡಬೇಕು. ವಿತರಣೆಯಲ್ಲಿ ಎಲ್ಲಾದರೂ ಲೋಪದೋಷಗಳು ಕಂಡುಬಂದರೆ ತಕ್ಷಣವೇ ಸಂಬಂಧಪಟ್ಟ ಅಧಿಕಾರಿಗಳನ್ನು ಅಥವಾ ತಮ್ಮನ್ನು ಸಂಪರ್ಕಿಸಬಹುದು ಎಂದು ಶಾಸಕರು ತಿಳಿಸಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಧೂಳಪ್ಪ ಅವರು ಪ್ರಾಸ್ತವಿಕವಾಗಿ ಮಾತನಾಡಿ, ರೈತರು ಬಿತ್ತನೆ ಮಾಡಲು ಅವಸರ ಮಾಡಬಾರದು, 80ಮಿ.ಮಿ ಮಳೆ ಬಿದ್ದಾಗ ಮಾತ್ರ ಬಿತ್ತನೆ ಮಾಡಬೇಕು, ಮತ್ತು ಬಿತ್ತನೆ ಬೀಜದ ಚೀಲವನ್ನು ಎಳೆಯುವು, ಬಿಟ್ಟುವುದು ಮಾಡಿದ್ದರೆ ಬೀಜ ಗುಣ ಮಟ್ಟ ಕಡಿಮೆಯಾಗುತ್ತದೆ ಎಂದು ತಿಳಿಸಿದ್ದರು.

ಕಮಲನಗರ ರೈತ ಸಂಪರ್ಕ ಅಧಿಕಾರಿ ಶತ್ರುಘ್ನ ಅವರು ಮಾತನಾಡಿ, ಈ ವರ್ಷ ವಾಡಿಕೆ ಗಿಂತ ಹೆಚ್ಚು ಬೀಜ ತರಲಗಿದ್ದು, ತಾಲೂಕಿನ ಕಟ್ಟ ಕಡೆ ರೈತರಿಗೆ ಬೀಜ ತಲುಪಿಸುವ ಕಾರ್ಯ ಮಾಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಮುಖ ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ರಂಗರಾವ ಜಾಧವ, ಧನರಾಜ ವಡೆಯಾರ್, ರಾಮಶೆಟ್ಟಿ ಪನ್ನಾಳೆ, ಸಚಿನ ರಾಠೋಡ, ಶಿವರಾಜ ಅಲ್ಮಾಜೆ ಸೇರಿದಂತೆ ಕೃಷಿ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ನೂರಾರು ರೈತರು ಉಪಸ್ಥಿತರಿದ್ದರು.

## ಚಿಕ್ಕಬಳ್ಳಾಪುರದಲ್ಲಿ ಮೇ 31ಕ್ಕೆ ರಾಜ್ಯ ಮಟ್ಟದ ಮಕ್ಕಳ ಪ್ರತಿಭಾ ಪುರಸ್ಕಾರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ರಾಜ್ಯದ ಫಲಪುಷ್ಪಗಳ ಗಿರಿಧಾಮ ನಾಡು ಎಂದೇ ಖ್ಯಾತಿ ಪಡೆದಿರುವ ಚಿಕ್ಕಬಳ್ಳಾಪುರದ ಕನ್ನಡ ಭವನದಲ್ಲಿ ಮೇ.31 ರಂದು ಭಾನುವಾರ ರಾಜ್ಯ ಮಟ್ಟದ ಕೆಯುಡಬ್ಲ್ಯೂಜೆ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮ ಅರ್ಥಪೂರ್ಣವಾಗಿ ಆಯೋಜಿಸಲಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿದರು.

ಚಿಕ್ಕಬಳ್ಳಾಪುರ ನಗರದ ಪತ್ರಕರ್ತರ ಭವನದಲ್ಲಿ ಈ ಕುರಿತು ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಅತಿಥ್ಯವನ್ನು ಮೊದಲ ಬಾರಿಗೆ ಚಿಕ್ಕಬಳ್ಳಾಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ವಹಿಸಿಕೊಂಡಿದ್ದು ರಾಜ್ಯದ ಸುಮಾರು 200 ಕ್ಕೂ ಹೆಚ್ಚು ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುವುದೆಂದರು.

ಭಾರತ ರತ್ನ ಸರ್‌ಎಂವಿ, ಖ್ಯಾತ ವಿಜ್ಞಾನಿ ಸಿಎನ್‌ಆರ್ ರಾವ್ ರವರ ಹುಟ್ಟಿ ಬೆಳೆದ ಚಿಕ್ಕಬಳ್ಳಾಪುರ ಜಿಲ್ಲೆಯು ನಾಡಿಗೆ ಅನೇಕ ದಿಗ್ಗಜರನ್ನು ಕೊಡುಗೆಯಾಗಿ ನೀಡಿದ್ದು, ಅನೇಕ ಐತಿಹ್ಯಗಳನ್ನು ಜಿಲ್ಲೆಯು ಹೊಂದಿದೆ. ವಿಶೇಷವಾಗಿ ಫಲಪುಷ್ಪಗಳ ಗಿರಿಧಾಮ ನಾಡನಾಗಿ ಗಮನ ಸೆಳೆದಿದೆ. ಈ ಹಿನ್ನಲೆಯಲ್ಲಿ ಪ್ರತಿಭಾ ಪುರಸ್ಕಾರ ಪ್ರದಾನವನ್ನು ಈ ಬಾರಿಗೆ ಜಿಲ್ಲೆಯಲ್ಲಿ ಹಮ್ಮಿಕೊಂಡಿದ್ದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವೂ ಅರ್ಥಪೂರ್ಣವಾಗಿ ಕಾರ್ಯಕ್ರಮದ ಯಶಸ್ವಿಗೆ ಸಿದ್ದತೆ ಮಾಡಿಕೊಂಡಿದೆ ಎಂದರು.

ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ರಾಜ್ಯದ ಎಲ್ಲಾ ಜಿಲ್ಲೆಗಳ ಪತ್ರಕರ್ತರ ಮಕ್ಕಳಿಗೆ ರಾಜ್ಯ ಸಂಘದಿಂದ ಪ್ರತಿಭಾ ಪುರಸ್ಕಾರ ವಿತರಣೆ ಮಾಡಲಾಗುತ್ತಿದ್ದು, ಇದೇ ಮೊದಲ ಬಾರಿಗೆ 3000 ಸಾವಿರ ರೂ, ನಗದು, ಸ್ಮರಣಿಕೆ, ಅಭಿನಂದನಾ ಪತ್ರ ವಿತರಿಸಲಾಗುತ್ತಿದೆ ಎಂದರು.

ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಸೇರಿ ಹಲವು ಗಣ್ಯರು ಭಾಗಿ ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮಕ್ಕೆ ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ ರವರು ಭಾಗವಹಿಸಿ ದಿಕ್ಸೂಚಿ ಭಾಷಣ ಮಾಡಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲೆಯ ನಿಕಪೂಟ ಜಿಲ್ಲಾ ಉಸ್ತುವಾರಿಗಳಾದ ರಾಜ್ಯದ ಮಾಜಿ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ನೆರವೇರಿಸಲಿದ್ದಾರೆ. ಅಭಿನಂದನಾ ನುಡಿಯನ್ನು ಕ್ಷೇತ್ರದ ಸಂಸದರಾದ ಡಾ.ಕೆ.ಸುಧಾಕರ್ ಮಾಡಲಿದ್ದು, ಪ್ರತಿಭಾ ಪುರಸ್ಕಾರವನ್ನು ಸಿದ್ದರಾಮಯ್ಯ ಅವರಿಗೆ ಮಾಧ್ಯಮ ಸಲಹೆಗಾರರು ಆಗಿದ್ದ ಕೆ.ವಿ.ಪ್ರಭಾಕರ್ ನೆರವೇರಿಸಲಿದ್ದಾರೆ. ಜಿಲ್ಲೆಯ ಎಲ್ಲಾ ಶಾಸಕರಿಗೆ ಆಹ್ವಾನ ನೀಡಲಾಗಿದೆ ಎಂದು ಶಿವಾನಂದ ತಗಡೂರು ಹೇಳಿದರು.

ಸಂಘದ ಜಿಲ್ಲಾಧ್ಯಕ್ಷರಾದ ವಿ.ರವಿಕುಮಾರ್ ಮಾತನಾಡಿ, ಇಡೀ ರಾಜ್ಯಕ್ಕೆ ಮಾದರಿ ಆಗುವ ರೀತಿಯಲ್ಲಿ ಕೆಯುಡಬ್ಲ್ಯೂಜೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಜಿಲ್ಲಾ ಸಂಘ ಅತಿಥ್ಯ ವಹಿಸಿ ಹಲವು ಸಿದ್ದತೆಗಳನ್ನು ಮಾಡಿಕೊಂಡಿದ್ದು, ಕಾರ್ಯಕ್ರಮದಲ್ಲಿ ಮಾಧ್ಯಮ ಹಾಗೂ ಸ್ತ್ರೀಶಕ್ತಿ ಸಂಘಗಳು ತಯಾರಿಸಿ ಉತ್ಪನ್ನಗಳ ಮಾರಾಟ ಹಾಗೂ ವಸ್ತು ಪ್ರದರ್ಶನ ವ್ಯವಸ್ಥೆ ಮಾಡಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಗತಿ ನಾಗರಾಜಪ್ಪ, ರಾಜ್ಯ ಸಮಿತಿ ಸದಸ್ಯರಾದ ಎನ್.ಚಂದ್ರಶೇಖರ್ ಸೇರಿದಂತೆ ಮತ್ತಿತರರು ಇದ್ದರು

## ಬಳ್ಳಾರಿಯ ವಾಹನ ಸವಾರರಿಗೆ ಉಚಿತ ಹೆಲ್ಮೆಟ್ ವಿತರಣೆ
## ಸುರಕ್ಷಿತ ಪಯಣಕ್ಕೆ ಹೆಲ್ಮೆಟ್ ಕಡ್ಡಾಯ ಜಾಗೃತಿ ಮೂಡಿಸಿದ ಎಂಜಿಆರ್ ಟ್ರಸ್ಟ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ರಸ್ತೆ ಅಪಘಾತಗಳನ್ನು ತಡೆಗಟ್ಟುವ ಹಾಗೂ ವಾಹನ ಸವಾರರಲ್ಲಿ ಸುರಕ್ಷತಾ ಜಾಗೃತಿ ಮೂಡಿಸುವ ಉದ್ದೇಶದಿಂದ ಎಂಜಿಆರ್ ಟ್ರಸ್ಟ್ ವತಿಯಿಂದ ನಗರದ ರೇಡಿಯೋ ಪಾರ್ಕ್ ಸಮೀಪ ಶುಕ್ರವಾರ ಉಚಿತ ಹೆಲ್ಮೆಟ್ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಬಳ್ಳಾರಿ ಜಿಲ್ಲಾ ಪೊಲೀಸ್ ಇಲಾಖೆ ಜೂನ್ 1ರಿಂದ ಜಿಲ್ಲೆಯಾದ್ಯಂತ ಹೆಲ್ಮೆಟ್ ಕಡ್ಡಾಯಗೊಳಿಸಿರುವ ಹಿನ್ನೆಲೆಯಲ್ಲಿ, "ಸುರಕ್ಷಿತ ಪಯಣ – ಹೆಲ್ಮೆಟ್ ಕಡ್ಡಾಯ" ಎಂಬ ಘೋಷಣೆಯೊಂದಿಗೆ ವಾಹನ ಸವಾರರಲ್ಲಿ ಜಾಗೃತಿ ಮೂಡಿಸಲಾಯಿತು.

ಬಳ್ಳಾರಿ ಮಹಾನಗರ ಪಾಲಿಕೆಯ 25ನೇ ವಾರ್ಡ್ ಸದಸ್ಯ ಎಂ. ಗೋವಿಂದರಾಜುಲು ಅವರ ನೇತೃತ್ವದಲ್ಲಿ ಕೊಲ್ ಬಜಾರ್ ಪ್ರದೇಶದ ರೇಡಿಯೋ ಪಾರ್ಕ್ ಹತ್ತಿರ ಇರುವ ಅವರ ನಿವಾಸದ ಸಮೀಪ ಈ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮವನ್ನು ಬಿಜೆಪಿ ಹಿರಿಯ ನಾಯಕ ಹಾಗೂ ಮಾಜಿ ಸಚಿವ B. Sriramulu ಹಾಗೂ ಕಲ್ಯಾಣ ಸ್ವಾಮಿಜಿ ಅವರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮುಲು ಅವರು, "ದಂಡಕ್ಕೆ ಹೆದರಿ ಹೆಲ್ಮೆಟ್ ಧರಿಸುವುದಲ್ಲ, ಜೀವ ರಕ್ಷಣೆಗಾಗಿ ಪ್ರತಿಯೊಬ್ಬರೂ ಕಡ್ಡಾಯವಾಗಿ ಹೆಲ್ಮೆಟ್ ಬಳಸಬೇಕು. ನಿಮ್ಮ ಕುಟುಂಬ ನಿಮ್ಮ ಸುರಕ್ಷಿತ ವಾಪಸ್ಸಿಗಾಗಿ ಕಾಯುತ್ತಿದೆ" ಎಂದು ಹೇಳಿದರು. ರಸ್ತೆ ಸುರಕ್ಷತೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯದಲ್ಲಿ ಎಂ. ಗೋವಿಂದರಾಜುಲು ಅವರು ಕೈಗೊಂಡಿರುವ ಸೇವೆಯನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ವೇದಿಕೆಯಲ್ಲಿದ್ದ ಕಲ್ಯಾಣ ಸ್ವಾಮಿಜಿ ಅವರು ಮಾತನಾಡಿ, ಎಂ. ಗೋವಿಂದರಾಜುಲು ಅವರು ಹಲವು ವರ್ಷಗಳಿಂದ ಸಮಾಜಮುಖಿ ಹಾಗೂ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಾರ್ವಜನಿಕರ ಸೇವೆಯಲ್ಲಿ ತೊಡಗಿಸಿಕೊಂಡಿರುವುದನ್ನು ಸ್ಮರಿಸಿದರು. ವಿಶೇಷವಾಗಿ ರಸ್ತೆ ಸುರಕ್ಷತೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಉಚಿತ ಹೆಲ್ಮೆಟ್ ವಿತರಣೆ ನಡೆಸಿರುವುದು ಶ್ಲಾಘನೀಯ ಕಾರ್ಯವಾಗಿದ್ದು, ಇಂತಹ ಸೇವಾ ಚಟುವಟಿಕೆಗಳು ಸಮಾಜಕ್ಕೆ ಮಾದರಿಯಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸುಮಾರು 1000ಕ್ಕೂ ಹೆಚ್ಚು ಹೆಲ್ಮೆಟ್‌ಗಳನ್ನು ವಾಹನ ಸವಾರರಿಗೆ ವಿತರಣೆ ಮಾಡಲಾಯಿತು ಎಂದು ಆಯೋಜಕರು ತಿಳಿಸಿದರು.

ರಸ್ತೆ ಸುರಕ್ಷತೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಆಯೋಜಿಸಲಾದ ಈ ಕಾರ್ಯಕ್ರಮಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು.

ಹೆಲ್ಮೆಟ್ ಧರಿಸುವುದರ ಮಹತ್ವವನ್ನು ಮನಗಂಡು ಟ್ರಸ್ಟ್ ಕೈಗೊಂಡಿರುವ ಈ ಸಮಾಜಮುಖಿ ಕಾರ್ಯಕ್ಕೆ ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕಲ್ಯಾಣ ಸ್ವಾಮಿಜಿ, ಹೆಂಡ್ರಿ, ಡೆಸೋಜಾ, ಕಂಪ್ಲಿ ಮಾಜಿ ಶಾಸಕ ಸುರೇಶ್ ಬಾಬು, ವೀರೇಶ್ ಚೌಹಾನ್, ಡಾ. ರವಿಶಂಕರ್ ಸೇರಿದಂತೆ ವಿವಿಧ ಬಿಜೆಪಿ ಮುಖಂಡರು, ಸ್ಥಳೀಯ ನಿವಾಸಿಗಳು, ಯುವಕರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಮೇ 31ರಂದು ಬಳ್ಳಾರಿಯಲ್ಲಿ ಛಲವಾದಿ ನೌಕರರ ಕಲ್ಯಾಣ ಸಂಘ ಉದ್ಘಾಟನೆ
## ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರಿಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಛಲವಾದಿ ಸಮುದಾಯದ ಸರ್ಕಾರಿ ಹಾಗೂ ಅರೆಸರ್ಕಾರಿ ನೌಕರರ ಒಕ್ಕೂಟದಿಂದ ಸ್ಥಾಪನೆಯಾದ ಬಳ್ಳಾರಿ ಜಿಲ್ಲಾ ಛಲವಾದಿ ನೌಕರರ ಕಲ್ಯಾಣ ಸಂಘದ ಉದ್ಘಾಟನಾ ಸಮಾರಂಭ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಮೇ 31ರಂದು ಭಾನುವಾರ ಬೆಳಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಗೂಳಪ್ಪ ಬೆಳ್ಳೇಕಟ್ಟೆ ತಿಳಿಸಿದರು.ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಕಳೆದ ಹಲವು ತಿಂಗಳುಗಳಿಂದ ವಿವಿಧ ಕಾರಣಗಳಿಂದ ವಿಳಂಬವಾಗಿದ್ದ ಸಂಘದ ಉದ್ಘಾಟನಾ ಕಾರ್ಯಕ್ರಮವನ್ನು ಇದೀಗ ಅದ್ದೂರಿಯಾಗಿ ಆಯೋಜಿಸಲಾಗುತ್ತಿದೆ ಎಂದರು.ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಅತಿಹೆಚ್ಚು ಅಂಕ ಗಳಿಸಿರುವ ಛಲವಾದಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಇದೇ ಸಂದರ್ಭದಲ್ಲಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಮೈಸೂರು ಉರಿಲಿಂಗ ಪೆದ್ದಿ ಮಠದ ಪರಮಪೂಜ್ಯ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ, ಚಿತ್ರದುರ್ಗದ ಛಲವಾದಿ ಮಹಾಮಠದ ಪರಮಪೂಜ್ಯ ಶ್ರೀ ಬಸವನಾಗಿದೇವ ಸ್ವಾಮೀಜಿ ಹಾಗೂ ಭಾರತೀಯ ಬೌದ್ಧ ಮಹಾಸಭಾ ಬಳ್ಳಾ–ರಿಯ ಪೂಜ್ಯ ಶ್ರೀ ಕಮಲರತ್ನ ಭಂತೇಜಿ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಲಿದ್ದಾರೆ ಎಂದು ತಿಳಿಸಿದರು.ಕರ್ನಾಟಕ ಸರ್ಕಾರದ ಗೃಹ ಸಚಿವ ಡಾ.ಜಿ. ಪರಮೇಶ್ವರ, ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹಾದೇವಪ್ಪ, ಸಚಿವ ಪ್ರಿಯಾಂಕ್ ಖರ್ಗೆ, ವಿಜಯನಗರ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಬಿ.ಝಡ್. ಜಮೀರ್ ಅಹಮದ್ ಖಾನ್, ಕರ್ನಾಟಕ ರಾಜ್ಯ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ್ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ. ನರೇಂದ್ರಸ್ವಾಮಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ ಎಂದು ಹೇಳಿದರು.ಸಂಸದ ಈ. ತುಕಾರಾಂ, ಶಾಸಕರಾದ ಬಿ. ನಾಗೇಂದ್ರ, ನಾರಾ ಭರತ್ ರೆಡ್ಡಿ, ಜೆ.ಎನ್. ಗಣೇಶ್, ಬಿ.ಎಂ. ನಾಗರಾಜ್, ಅನ್ನಪೂರ್ಣ ತುಕಾರಾಂ ಹಾಗೂ ನಯನಾ ಮೋಟಮ್ಮ ಅವರು ಬುದ್ಧ, ಬಸವ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಲಿದ್ದಾರೆ ಎಂದರು.ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಕಾರ್ಯಕ್ರಮವನ್ನು ಕರ್ನಾಟಕ ಛಲವಾದಿ ಮಹಾಸಭಾ ರಾಜ್ಯಾಧ್ಯಕ್ಷ ಹೆಚ್. ಸಿದ್ದಯ್ಯ ಐಎಎಸ್ (ನಿ), ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಐಎಎಸ್, ರಾಜ್ಯಾಧ್ಯಕ್ಷೆ ವಾಣಿ ಕೆ. ಶಿವರಾಮು, ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷ ಡಾ. ಮೂರ್ತಿ ಎಲ್. ಸೇರಿದಂತೆ ವಿವಿಧ ಗಣ್ಯರು ನೆರವೇರಿಸಲಿದ್ದಾರೆ ಎಂದು ತಿಳಿಸಿದರು.ಇದೇ ವೇಳೆ ಸಮುದಾಯದ ನಿವೃತ್ತ ನೌಕರರಿಗೆ ಗೌರವ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು. ಡಾ. ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡ್ರಿಗಿ ನಾಗರಾಜ್, ಮಾಜಿ ಅಧ್ಯಕ್ಷ ಮಾನಯ್ಯ ಹಾಗೂ ಮಾಜಿ ರಾಜ್ಯಾಧ್ಯಕ್ಷ ಹೆಚ್.ಕೆ. ಬಸವರಾಜು ಅವರು ಗೌರವ ಪುರಸ್ಕಾರ ಪ್ರದಾನ ಮಾಡಲಿದ್ದಾರೆ ಎಂದು ಹೇಳಿದರು.ಕಾರ್ಯಕ್ರಮಕ್ಕೆ ಡಾ. ಸಿ.ಹೆಚ್. ಸೋಮನಾಥ್, ಡಾ. ಸಿ. ಭರತ್ ಹಾಗೂ ಹನುಮಂತಪ್ಪ ಅವರು ಗೌರವ ಉಪಸ್ಥಿತಿ ವಹಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗೂಳಪ್ಪ ಬೆಳ್ಳೇಕಟ್ಟೆ ವಹಿಸಲಿದ್ದಾರೆ ಎಂದರು.ಸುದ್ದಿಗೋಷ್ಠಿಯಲ್ಲಿ ಸಿ. ನರಸಪ್ಪ, ಹನುಮಪ್ಪ, ಸೋಮನಾಥ್, ಸಿ. ಮಂಜುನಾಥ್, ಜೆ.ಎಸ್. ಶ್ರೀನಿವಾಸುಲು, ಹನುಮೇಶ್ ಕಟ್ಟೆಮಾನಿ, ಶಂಕರ್ ಹಾಗೂ ವಿಲಾಸ್ ಮನಕರ್ ಉಪಸ್ಥಿತರಿದ್ದರು.

## 2.03 ಲಕ್ಷ ಮಕ್ಕಳಿಗೆ ಲಸಿಕೆಯ ಗುರಿ: ಜಿಲ್ಲಾಧಿಕಾರಿ

**ಬಾಗಲಕೋಟೆ:** ಪ್ರಸಕ್ತ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನವನ್ನು ಜೂನ 28 ರಿಂದ ಜುಲೈ 1 ರವರೆಗೆ ನಾಲ್ಕು ದಿನಗಳ ಕಾಲ ದೇಶಾದ್ಯಂತ ಹಮ್ಮಿಕೊಳ್ಳಲಾಗುತ್ತಿದ್ದು, ಬಾಗಲಕೋಟೆ ಜಿಲ್ಲೆಯಲ್ಲಿ ಐದು ವರ್ಷದೊಳಗಿನ ಒಟ್ಟು 203443 ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲಿ ಇತ್ತಿಚಿಗೆ ಜರುಗಿದ ರಾಷ್ಟ್ರಿಯ ಪಲ್ಸ್ ಪೊಲೀಯೋ ಲಸಿಕಾ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಾದ್ಯಂತ 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಲಸಿಕೆ ಹಾಕಲಾಗುತ್ತಿದ್ದು, ಇದಕ್ಕಾಗಿ 407777 ಮನೆಗಳನ್ನು ಗುರುತಿಸಲಾಗಿದೆ ಎಂದರು. ನಗರ ಪ್ರದೇಶದ 68969 ಹಾಗೂ ಗ್ರಾಮೀಣ ಪ್ರದೇಶದ 134474 ಮಕ್ಕಳಿಗೆ ಲಸಿಕೆ ನೀಡಲಾಗುತ್ತಿದೆ. 1282 ಪಲ್ಸ್ ಲಸಿಕಾ ಕೇಂದ್ರಗಳನ್ನು ತೆಗೆಯಲಾಗುವುದು, ಜಿಲ್ಲೆಯಲ್ಲಿ ಅಭಿಯಾನವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ 1690 ತಂಡಗಳನ್ನು ರಚಿಸಿ, 2665 ಲಸಿಕೆ ನೀಡುವ ಸಿಬ್ಬಂದಿ ಮತ್ತು 265 ಸುಪರ್ವೈಸರ್ ಗಳನ್ನು ನೇಮಿಸಲಾಗಿದೆ. ಅಲ್ಲದೇ 63 ಮೊಬೈಲ್ ತಂಡಗಳು, 45 ಟ್ರಾನ್ಸಿಸ್ಟ್ ತಂಡಗಳು ಕಾರ್ಯನಿರ್ವಹಿಸಲಿವೆ ಎಂದು ಹೇಳಿದರು.

ಜೂನ್ 28 ರಂದು ಬೂತ್ ಮಟ್ಟದಲ್ಲಿ ಹಾಗೂ ಜೂನ 29 ಮತ್ತು 30ರಂದು ಎರಡು ದಿನಗಳ ಕಾಲ ಗ್ರಾಮೀಣ ಪ್ರದೇಶಗಳಲ್ಲಿ, ಜೂನ್ 29 ರಿಂದ ಜುಲೈ 1ರವರೆಗೆ ಮೂರು ದಿನಗಳ ಕಾಲ ನಗರ ಪ್ರದೇಶಗಳಲ್ಲಿ ಆರೋಗ್ಯ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿ ಐದು ವರ್ಷದೊಳಗಿನ ಮಕ್ಕಳಿಗೆ ಪೊಲೀಯೋ ಹನಿ ಹಾಕಲಿದ್ದು, ಎಲ್ಲ ತಂದೆ ತಾಯಂದಿರು ಮತ್ತು ಪೋಷಕರು ತಮ್ಮ ಮಕ್ಕಳಿಗೆ ತಪ್ಪದೇ ಪೊಲೀಯೋ ಲಸಿಕೆ ಹಾಕಿಸುವ ಮೂಲಕ ಹಾಗೂ ವೈದ್ಯಾಧಿಕಾರಿಗಳು ಮತ್ತು ಆರೋಗ್ಯ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿ ಅಗತ್ಯ ಸಿದ್ದತೆಯೊಂದಿಗೆ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಂಜುನಾಥ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

## ನಾಗರಿಕ ಬಂದೂಕು ತರಬೇತಿ ಶಿಬಿರಕ್ಕೆ ನೋಂದಣಿ

**ಬಾಗಲಕೋಟೆ:** ಜಿಲ್ಲೆಯ ನಾಗರಿಕರಿಗೆ ಆತ್ಮ ರಕ್ಷಣೆ ಹಾಗೂ ಆರೋಗ್ಯಕರವಾದ ಸಮಾಜ ನಿರ್ಮಾಣದ ಸಲುವಾಗಿ ಬಾಗಲಕೋಟೆ ಜಿಲ್ಲಾ ಪೊಲೀಸ್ ಘಟಕದ ವತಿಯಿಂದ ನಾಗರಿಕ ಬಂದೂಕು ತರಬೇತಿ ಶಿಬಿರ ಹಮ್ಮಿಕೊಳ್ಳಲಾಗಿದೆ. ತರಬೇತಿ 7 ದಿನಗಳ ಕಾಲ ಪ್ರತಿದಿನ ಬೆಳಿಗ್ಗೆ 7 ರಿಂದ 9.30 ಗಂಟೆವರೆಗೆ ನಡೆಯಲಿದೆ. ತರಬೇತಿ ಮುಕ್ತಾಯದ ನಂತರ ಪೊಲೀಸ್ ಅಧೀಕ್ಷಕರು, ತರಬೇತಿ ಪತ್ರವನ್ನು ನೀಡಲಿದ್ದಾರೆ. ಆಸಕ್ತರು ಡಿಎಸ್‌ಪಿ, ಡಿಎಆರ್ ಪೊಲೀಸ್ ಹೆಡ್‌ಕ್ವಾಟರ್ಸ್, ಸೆಕ್ಟರ ನಂ.43ರ ದಕ್ಷಿಣ ಭಾಗ, ನವನಗರ, ಬಾಗಲಕೋಟೆ (ದೂಸಂ.08354-235083) ಇಲ್ಲಿ ಅರ್ಜಿ ನಮೂನೆಗಳನ್ನು ಜೂನ್ 1 ರಿಂದ 10 ವರೆಗೆ ಪಡೆದು-ಕೊಂಡು, ಭರ್ತಿ ಮಾಡಿ, ನಿಮ್ಮ ವಿಳಾಸದ ವ್ಯಾಪ್ತಿಯ ಪೊಲೀಸ್ ಠಾಣೆಯಿಂದ ಪರಿಶೀಲನೆ (ಪೊಲೀಸ್ ವೆರಿಫಿಕೇಶನ್) ಮಾಡಿಸಿ, ವಿಳಾಸದ ಗುರುತಿನ ಚೀಟಿ ಮತ್ತು ಇತ್ತೀಚಿನ 3 ಭಾವಚಿತ್ರಗಳೊಡನೆ ಜೂನ್ 15 ರೊಳಗಾಗಿ ಜಿಲ್ಲಾ ಶಸ್ತ್ರಾಗಾರ ವಿಭಾಗಕ್ಕೆ ಸಲ್ಲಿಸುವಂತೆ ಜಿಲ್ಲಾ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊನಂ.9480803906, 9480803937ಗೆ ಸಂಪರ್ಕಿಸಬಹುದಾಗಿದೆ.

## ಕ್ರೀಡಾ ವಸತಿ ನಿಲಯ: ಜೂ.1ರಂದು ಆಯ್ಕೆ ಪ್ರಕ್ರಿಯೆ

**ಬಾಗಲಕೋಟೆ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಪ್ರಸಕ್ತ ಸಾಲಿಗೆ ವಿವಿಧ ಕ್ರೀಡಾ ವಸತಿ ಶಾಲೆ, ನಿಲಯಗಳಿಗೆ 8ನೇ ತರಗತಿ ಹಾಗೂ ಪಿಯುಸಿ ಮಟ್ಟದ ಅರ್ಹ ಕ್ರೀಡಾಪಟುಗಳಿಗೆ ಪ್ರವೇಶ ನೀಡಲು ಅವಕಾಶ ವಂಚಿತ ಮತ್ತು ಉತ್ತಮ ಪ್ರದರ್ಶನ ನೀಡಲು ಸಾಧ್ಯವಾಗದ ಕ್ರೀಡಾಪಟುಗಳಿಗಾಗಿ ಜೂನ್ 1 ರಂದು ವಿಶೇಷ ಆಯ್ಕೆ ಪ್ರಕ್ರಿಯೆ ಹಮ್ಮಿಕೊಳ್ಳಲಾಗಿದೆ.

ಜೂನ್ 1ರಂದು ಬೆಳಿಗ್ಗೆ 9 ಗಂಟೆಗೆ ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ವಾಲಿಬಾಲ್, ಸೈಕ್ಲಿಂಗ್, ಕುಸ್ತಿ, ಜುಡೋ, ತುಮಕೂರು ಮಹಾತ್ಮಾ ಗಾಂಧಿ ಜಿಲ್ಲಾ ಕ್ರಿಡಾಂಗಣದಲ್ಲಿ ಅಥ್ಲೇಟಿಕ್ಸ್, ಕಬಡ್ಡಿ, ಜಿಮ್ನಾಸ್ಟಿಕ್ಸ್, ಪುಟ್ಬಾಲ್, ಬೆಂಗಳೂರು ನಗರದ ಕಂಠೀರವ ಕ್ರೀಡಾಂಗಣದಲ್ಲಿ ಬಾಸ್ಕೆಟ್‌ಬಾಲ್, ಬಾಕ್ಸಿಂಗ್, ಅರ್ಚರಿ, ಫೆನ್ಸಿಂಗ್ ಹಾಗೂ ಬೆಂಗಳೂರು ಅಕ್ಕಿತಿಮ್ಮನಹಳ್ಳಿ ಹಾಕಿ ಕ್ರಿಡಾಂಗಣದಲ್ಲಿ ಹಾಕಿ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆ ನಡೆಸಲಾಗುತ್ತಿದೆ.

ಆಯ್ಕೆ ಪ್ರಕ್ರಿಯೆಯಲ್ಲಿ ರಾಜ್ಯದ ಯಾವುದೇ ಕ್ರೀಡಾಪಟುಗಳು ಭಾಗವಹಿಸಲು ಮುಕ್ತ ಅವಕಾಶ ನೀಡಲಾಗಿದೆ. 8ನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, 8ನೇ ತರಗತಿ ಪ್ರವೇಶಕ್ಕೆ ಜೂನ್-2026ಕ್ಕೆ 14 ವರ್ಷ ಒಳಗಿರಬೇಕು. ಪ್ರಥಮ ಪಿಯುಸಿ ಪ್ರವೇಶ ಬಯಸುವ ಅಭ್ಯರ್ಥಿಗಳು ಜೂನ್-2026ಕ್ಕೆ 18 ವರ್ಷ ಯವಸ್ಸಿನ ಒಳಗೆ ಇರಬೇಕು. ಆಧಾರ ಕಾರ್ಡ, ವ್ಯಾಸಂಗ ಪ್ರಮಾಣ ಪತ್ರ ಹಾಗೂ ಜನನ ಪ್ರಮಾಣ ಪತ್ರ ಕಡ್ಡಾಯವಾಗಿ ತರಬೇಕು. ಹೆಚ್ಚಿನ ಮಾಹಿತಿಗಾಗಿ ದೂಸಂ.08354-235896, 9449959064, 8792507212, 9480210536ಗೆ ಸಂಪರ್ಕಿಸುವಂತೆ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ

**ಬಾಗಲಕೋಟೆ:** ನವನಗರದ ಸೆಕ್ಟರ ನಂ.57, ಪ್ಲಾಟ್ ನಂ.126ರ ನಿವಾಸಿ ನಿವೃತ್ತ ಆರೋಗ್ಯ ಇಲಾಖೆಯ ನೌಕರ ಸೇಬಣ್ಣ ಸಿರೆಪ್ಪಾ ಹನಮಂತಗೊಂಡ (76) ಅವರು ಕಾಣೆಯಾಗಿದ್ದು, ಈ ಕುರಿತು ನವನಗರದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಕಾಣೆಯಾದ ವ್ಯಕ್ತಿಯ ಚಹರೆ 5.3 ಪೂಟ್ ಎತ್ತರವಿದ್ದು, ಸದೃಡ ಮೈಕಟ್ಟು ಗೋದಿ ಮೈ ಬಣ್ಣ, ದುಂಡು ಮುಖ ಹೊಂದಿದ್ದಾರೆ. ಮೈಮೇಲೆ ನೀಲಿ ಬಣ್ಣದ ಪೂರ್ತಿ ತೋಳಿನ ಅಂಗಿ ಹಾಗೂ ಕಪ್ಪು ಬಣ್ಣದ ಪ್ಯಾಂಟ್ ಧರಿಸಿದ್ದಾರೆ. ಸದರಿ ಚಹರೆವುಳ್ಳ ವ್ಯಕ್ತಿ ಕಂಡುಬಂದಲ್ಲಿ ಎಸ್.ಪಿ ಕಚೇರಿ ದೂಸಂ.08354-235077, ಕಂಟ್ರೋಲ್ ರೂಮ್ ನಂ.08354-235079, 9480803900, ಬಾಗಲಕೋಟೆ ನವನಗರ ಪೊಲೀಸ್ ಠಾಣೆ ದೂಸಂ.08354-235323, ಸಿಪಿಐ 9480803930, ಪಿಎಸ್ಐ, ನವನಗರ 9480803964ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಪ್ರಕಟಣೆ ತಿಳಿಸಿದೆ.

# ಸಮಸ್ಯೆ ಪರಿಹಾರಕ್ಕೆ ರಾಜ್ಯ ರೈತ ಸಂಘಕ್ಕೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಜಿಲ್ಲೆಯ ರೈತರು ಎದುರಿಸುತ್ತಿರುವ ಜ್ವಲಂತ ಸಮಸ್ಯೆಗಳನ್ನು ತಕ್ಷಣ ಬಗೆಹರಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಅವರಿಗೆ ಬೀದರ ಜಿಲ್ಲಾ ಘಟಕದ ಪದಾಧಿಕಾರಿಗಳು ಮನವಿ ಸಲ್ಲಿಸಿದ್ದಾರೆ.

ಮನವಿಯಲ್ಲಿ ಬೀದರ ಜಿಲ್ಲೆಯು ಫಲವತ್ತಾದ ಭೂಮಿ ಹಾಗೂ ಕೃಷಿಗೆ ಪೂರಕವಾದ ವಾತಾವರಣ ಹೊಂದಿದ್ದು, ಸುಮಾರು 51 ವಿಧದ ಬೆಳೆಗಳನ್ನು ಬೆಳೆಯುವ ಸಾಮರ್ಥ್ಯ ಹೊಂದಿದೆ ಎಂದು ವಿವರಿಸಲಾಗಿದೆ. ಜಿಲ್ಲೆಯ ಏಕೈಕ ಕಾರಂಜಾ ಜಲಾಶಯದಿಂದ ಪಟ್ಟಣಗಳಿಗೆ ಕುಡಿಯುವ ನೀರಿನ ಸೌಲಭ್ಯ ದೊರೆಯುತ್ತಿದೆಯಾದರೂ ರೈತರಿಗೆ ನೀರಾವರಿ ಸೌಲಭ್ಯ ಸಿಗುತ್ತಿಲ್ಲ. ಇದರಿಂದ ರೈತರು ಸ್ವಂತ ಖರ್ಚಿನಲ್ಲಿ ಕೊಳವೆ ಬಾವಿ ಹಾಗೂ ತೆರೆದ ಬಾವಿ ತೋಡಿಸಿ ಕೃಷಿ ನಡೆಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಲಾಗಿದೆ.

ಕಳೆದ ನಾಲ್ಕೈದು ವರ್ಷಗಳಿಂದ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಸರಿಯಾದ ಬೆಳೆ ಬಂದಾಗಲೂ ಬೆಳೆಗಳಿಗೆ ಸೂಕ್ತ ಬೆಲೆ ಸಿಗದೇ ನಷ್ಟ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಜಿಲ್ಲೆಯಲ್ಲಿ ಕಬ್ಬು, ತೊಗರಿ, ಸೋಯಾಬಿನ್, ಉದ್ದು, ಹೆಸರು, ಕಡಲೆ, ಹತ್ತಿ ಸೇರಿದಂತೆ ವಿವಿಧ ವಾಣಿಜ್ಯ ಬೆಳೆಗಳನ್ನು ಬೆಳೆಯಲಾಗುತ್ತಿದ್ದು, ತೋಟಗಾರಿಕಾ ಕ್ಷೇತ್ರದಲ್ಲಿ ಮಾವು ಹಾಗೂ ಹಸಿ ಶುಂಠಿ ಪ್ರಮುಖ ಬೆಳೆಗಳಾಗಿವೆ ಎಂದು ತಿಳಿಸಲಾಗಿದೆ.

ರೈತ ಸಂಘವು ಸರ್ಕಾರದ ಮುಂದೆ ಹಲವು ಬೇಡಿಕೆಗಳನ್ನು ಇಟ್ಟಿದ್ದು, ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಶಾಸನಬದ್ಧಗೊಳಿಸುವುದು, ವರ್ಷಪೂರ್ತಿ ಖರೀದಿ ಕೇಂದ್ರಗಳನ್ನು ತೆರೆಯುವುದು, ಕಬ್ಬು ಸರಬರಾಜು ಮಾಡಿದ ರೈತರಿಗೆ 15 ದಿನಗಳೊಳಗೆ ಬಿಲ್ ಪಾವತಿಸುವುದು ಸೇರಿದಂತೆ ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟಿದೆ.

ಜಿಲ್ಲೆಯ ಜೀವನಾಡಿಯಾಗಿದ್ದ ಬೀದರ ಸಹಕಾರ ಸಕ್ಕರೆ ಕಾರ್ಖಾನೆ ಕಳೆದ ಮೂರು ವರ್ಷಗಳಿಂದ ಸ್ಥಗಿತಗೊಂಡಿರುವುದರಿಂದ ಅದನ್ನು ಪುನರ್ ಆರಂಭಿಸಲು ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಒತ್ತಾಯಿಸಲಾಗಿದೆ. ಜೊತೆಗೆ ಬೆಳೆ ವಿಮೆ ಹಣವನ್ನು ತಕ್ಷಣ ರೈತರ ಖಾತೆಗೆ ಜಮೆ ಮಾಡಿಸುವುದು, ಕಾಡುಪ್ರಾಣಿಗಳ ಹಾವಳಿಯಿಂದ ಬೆಳೆ ರಕ್ಷಿಸಲು ಸೋಲಾರ್ ಬೇಲಿ ವ್ಯವಸ್ಥೆ ಕಲ್ಪಿಸುವುದು ಹಾಗೂ ರೈತರ ಸಂಪೂರ್ಣ ಸಾಲ ಮನ್ನಾ ಮಾಡುವಂತೆ ಆಗ್ರಹಿಸಲಾಗಿದೆ.

ಬೀದರ ಜಿಲ್ಲೆಯ ಕಬ್ಬಿನ ಕಾರ್ಖಾನೆಗಳಲ್ಲಿ ಇಳುವರಿ ಕಡಿಮೆ ತೋರಿಸಲಾಗುತ್ತಿದ್ದು ರೈತರಿಗೆ ಅನ್ಯಾಯವಾಗುತ್ತಿದೆ. ಇದನ್ನು ತಡೆಯಲು ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಸುಮಾರು 30 ಲಕ್ಷ ಮೆಟ್ರಿಕ್ ಟನ್ ಕಬ್ಬು ಬೆಳೆಯುತ್ತಿದ್ದರೂ ನಿರೀಕ್ಷಿತ ಇಳುವರಿ ಸಿಗದ ಕಾರಣ ಕಬ್ಬು ಸಂಶೋಧನಾ ಕೇಂದ್ರ ಸ್ಥಾಪನೆಗೆ ಶಿಫಾರಸ್ಸು ಮಾಡಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಮನವಿಗೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಯಾನಂದ ಸ್ವಾಮಿ ಸಿರ್ಸಿ, ಜಿಲ್ಲಾ ಕಾರ್ಯಾಧ್ಯಕ್ಷ ಶ್ರೀಮಂತ ಬಿರಾದಾರ, ಜಿಲ್ಲಾಧ್ಯಕ್ಷ ಸಿದ್ರಾಮಪ್ಪ ಆಣದೂರೆ, ಜಿಲ್ಲಾ ಉಪಾಧ್ಯಕ್ಷ ಶಂಕರಪ್ಪ ಪಾರಾ, ರಾಜ್ಯ ಪ್ರತಿನಿಧಿ ಶೇಷರಾವ ಕಣಜಿ, ರಾಜ್ಯ ಉಪಾಧ್ಯಕ್ಷ ಚಂದ್ರಶೇಖರ ಜಮಖಂಡೆ, ಭಾಲ್ಕಿ ತಾಲೂಕು ಅಧ್ಯಕ್ಷ ಬಾಬುರಾವ ಜೋಳದಾಬಕಾ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಶೋಭಾವತಿ ಕಾರಭಾರಿ, ಜಿಲ್ಲಾ ಉಪಾಧ್ಯಕ್ಷ ಸಿದ್ದಣ್ಣಾ ಭೂಶೆಟ್ಟಿ, ಬೀದರ ಅಧ್ಯಕ್ಷ ನಾಗಯ್ಯ ಸ್ವಾಮಿ, ಕಮಲನಗರ ಅಧ್ಯಕ್ಷ ಪ್ರವೀಣ ಕುಲಕರ್ಣಿ, ಬಸವಕಲ್ಯಾಣ ಅಧ್ಯಕ್ಷ ಸುಭಾಷ್ ರಗಟೆ, ಮಹಿಳಾ ಘಟಕ ಔರಾದ ಅಧ್ಯಕ್ಷೆ ಭಾಗ್ಯಶ್ರೀ ದೇಶಮುಖ, ಔರಾದ ಅಧ್ಯಕ್ಷ ಪ್ರಕಾಶ ಬಾವಗೆ, ಹುಮನಾಬಾದ್ ಅಧ್ಯಕ್ಷ ಸತೀಶ ನನ್ನೂರೆ ಹಾಗೂ ಮಹಿಳಾ ಘಟಕ ಭಾಲ್ಕಿ ಅಧ್ಯಕ್ಷೆ ಮಹಾನಂದ ದೇಶಮುಖ ಸಹಿ ಹಾಕಿದ್ದಾರೆ.

# ಮಲ್ಲಮ್ಮಳ ಬದುಕೇ ಮನುಕುಲಕ್ಕೆ ಆದರ್ಶ: ಪ್ರದೀಪ ಗುರೂಜಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮನ ಬದುಕೇ ಮನುಕುಲಕ್ಕೆ ಆದರ್ಶಪ್ರಾಯವಾಗಿದ್ದು, ಅವಳ ಆದರ್ಶ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ ಹೇಳಿದರು.

ತಾಲ್ಲೂಕಿನ ಬೇವೂರ ಗ್ರಾಮದಲ್ಲಿ ರಡ್ಡಿ ಬಳಗದವರು ಗುರುವಾರ ಹಮ್ಮಿಕೊಂಡಿದ್ದ ಹೇಮರಡ್ಡಿ ಮಲ್ಲಮ್ಮನ 604 ನೇ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೇಮರಡ್ಡಿ ಮಲ್ಲಮ್ಮ ತನ್ನ ದೈವತ್ವ ಶಕ್ತಿಯಿಂದ ದೇವರನ್ನೇ ಸಾಕ್ಷಾತ್ಕರಿಸಿಕೊಂಡ ಮಹಾನ್ ಶರಣೆ ಎಂದರು.

ಅಚಲ ಭಕ್ತಿ, ಸಹನೆ, ತಾಳ್ಮೆಯ ಗುಣಗಳಿಂದ ಮಾದರಿಯ ಜೀವನ ಸಾಗಿಸಿದ ಮಲ್ಲಮ್ಮ ತನ್ನನ್ನು ದ್ವೇಷಿಸಿದವರಿಗೂ ಒಳಿತನ್ನು ಬಯಸಿದವಳು. ಅವಳ ಈ ಗುಣವೇ ಅವಳನ್ನು ಎತ್ತರಕ್ಕೆ ಬೆಳೆಸಿ ದೇವತೆಯ ಸ್ಥಾನ ಲಭಿಸುವಂತೆ ಮಾಡಿದೆ ಎಂದ ಪ್ರದೀಪ ಗುರೂಜಿ, ಹೇಮರಡ್ಡಿ ಮಲ್ಲಮ್ಮ ದೇವರನ್ನು ಕಾಣಲು ಎಲ್ಲಿಗೂ ಹೋಗಲಿಲ್ಲ. ಅವಳ ದೈವತ್ವ ಶಕ್ತಿಗೆ ದೇವರೇ ಅವಳನ್ನು ಹುಡುಕಿ ಬರುವಂತಾಗಿದ್ದು ದೊಡ್ಡ ಸಾಧನೆ ಎಂದು ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿದ ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ಮಾತನಾಡಿ, ಹೇಮರಡ್ಡಿ ಮಲ್ಲಮ್ಮನ ಆದರ್ಶತೆ, ಮಹಾಯೋಗಿ ವೇಮನರ ವಚನಗಳಲ್ಲಿನ ತತ್ವ ಚಿಂತನೆಯನ್ನು ಮಕ್ಕಳಿಗೆ ತಿಳಿಸುವ ಕೆಲಸವಾಗಬೇಕು. ಸಮಾಜ ಸಂಘಟನೆಯ ಸಂದರ್ಭದಲ್ಲಿ ವೈಯಕ್ತಿಕ ಹಿತಾಸಕ್ತಿ, ರಾಜಕೀಯ ಈರ್ಷೆಗಳನ್ನು ಬದಿಗಿಟ್ಟು ಮುನ್ನಡೆಯಬೇಕು ಅಂದಾಗ ಒಗ್ಗಟ್ಟಿನ ಸಮಾಜ ನಿರ್ಮಾಣ ಸಾಧ್ಯ ಎಂದರು.

ಸಾನಿಧ್ಯ ವಹಿಸಿದ್ದ ನಿಡಗುಂದಿಯ ರುದ್ರಮುನಿ ಸ್ವಾಮೀಜಿ ಮಾತನಾಡಿ, ಹೇಮರಡ್ಡಿ ಮಲ್ಲಮ್ಮ ಗೃಹಿಣಿಯಾಗಿದ್ದುಕೊಂಡು ದೈವತ್ವ ಸಾಧನೆ ಮಾಡಿ ಮನುಕುಲಕ್ಕೆ ಬೆಳಕಾಗಿದ್ದಾಳೆ. ಅವಳ ಆದರ್ಶತೆಯನ್ನು ಎಲ್ಲರೂ ಮೈಗೂಡಿಸಿಕೊಂಡು ಬಾಳಿದರೆ ನೆಮ್ಮದಿಯ ಜೀವನ ಪ್ರಾಪ್ತವಾಗುತ್ತದೆ ಎಂದು ಹೇಳಿದರು.

ಬೇವೂರಿನ ಗ್ಯಾನಪ್ಪಜ್ಜನವರು ಅಧ್ಯಕ್ಷತೆ ವಹಿಸಿದ್ದರು. ಸಿ.ಎನ್.ಬಾಳಕ್ಕನವರ ವೇದಿಕೆಯಲ್ಲಿದ್ದರು. ಕಾರ್ಯಕ್ರಮದಲ್ಲಿ ಸಾಧನೆ ತೋರಿದ ವಿದ್ಯಾರ್ಥಿಗಳು, ದಾನಿಗಳನ್ನು ಸತ್ಕರಿಸಲಾಯಿತು.

ಬಸವರಾಜ ಹೆರಕಲ್ ಸ್ವಾಗತಿಸಿದರು. ಎಂ.ಎಸ್. ಮೇಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅನ್ನಪೂರ್ಣ ಮಾಗನೂರ ವರದಿ ವಾಚಿಸಿದರು. ಮೇಘಾ ತುರಡಗಿ ನಿರೂಪಿಸಿದರು. ಸುರೇಶ ಆದಾಪೂರ ವಂದಿಸಿದರು.

**ಕಾರ್ಯಕ್ರಮಕ್ಕೂ ಮೊದಲು ಹೇಮರಡ್ಡಿ ಮಲ್ಲಮ್ಮ ಭಾವಚಿತ್ರದ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿಜೃಂಭಣೆಯಿಂದ ಜರುಗಿತು. ಕುಂಭ ಹೊತ್ತ ಹಾಗೂ ಕಳಸಾರತಿ ಹಿಡಿದು ಸಾಗಿದ ಮಹಿಳೆಯರು, ಡೊಳ್ಳು, ಭಜನೆ, ಹಲಗೆ ಮಜಲು, ಕರಡಿ ಮಜಲು, ಕುದುರೆ ಕುಣಿತ ಮೆರವಣಿಗೆಗೆ ಮೆರುಗು ತಂದವು. ನಂತರ ಶರಣಪ್ಪ ಮಾಗನೂರ ಅವರಿಂದ ಹೋಳಿಗೆಯ ಪ್ರಸಾದ ಸೇವೆ ಜರುಗಿತು.**

# ಮತ್ತೆ ಅಧಿಕಾರಕ್ಕೆ ಬರಬೇಕಾದರೆ ಅಲ್ಪಸಂಖ್ಯಾತರಿಗೆ ಡಿಸಿಎಂ ಸ್ಥಾನ ಅನಿವಾರ್ಯ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಕರ್ನಾಟಕದ ಮುಸ್ಲಿಂ ಸಮುದಾಯವು ದಶಕಗಳಿಂದಲೂ ರಾಜ್ಯದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಪ್ರಗತಿಗೆ ಮಹತ್ವದ ಕೊಡುಗೆ ನೀಡುತ್ತ ಬಂದಿದೆ. ಆದರೆ ಇಂದಿನ ರಾಜಕೀಯ ವ್ಯವಸ್ಥೆಯಲ್ಲಿ ಸಮುದಾಯಕ್ಕೆ ತಕ್ಕ ಮಟ್ಟಿನ ಪ್ರಾತಿನಿಧ್ಯ ಸಿಗುತ್ತಿಲ್ಲ ಎಂಬ ಅಸಮಾಧಾನ ಹೆಚ್ಚುತ್ತಿದೆ ಎಂದು ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ವಿಭಾಗದ ಜಿಲ್ಲಾ ಕಾರ್ಯದರ್ಶಿ ಮುಜಾಹಿದ್ ಮರ್ಚೆಡ್ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರವು ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದರೂ, ಅಲ್ಪಸಂಖ್ಯಾತ ಸಮುದಾಯಕ್ಕೆ ರಾಜಕೀಯವಾಗಿ ಗೌರವಯುತ ಸ್ಥಾನಮಾನ ನೀಡುವಲ್ಲಿ ಇನ್ನಷ್ಟು ಧೈರ್ಯಶಾಲಿ ನಿರ್ಧಾರಗಳ ಅಗತ್ಯವಿದೆ ಎಂದು ಮುಜಾಹಿದ್ ಮರ್ಚೆಡ್ ಅಭಿಪ್ರಾಯಪಟ್ಟಿದ್ದಾರೆ.

ರಾಜಕೀಯ ಬೆಳವಣಿಗೆಗಳ ಹಿನ್ನೆಲೆದಲ್ಲಿ, ಡಿ.ಕೆ.ಶಿವಕುಮಾರ ಅವರು ಮುಖ್ಯಮಂತ್ರಿಯಾಗಿ ಪದಗ್ರಹಣ ಮಾಡುವ ಸಂದರ್ಭ, ಖಾಲಿಯಾಗಲಿರುವ ಉಪ ಮುಖ್ಯಮಂತ್ರಿ ಸ್ಥಾನವನ್ನು ಅಲ್ಪಸಂಖ್ಯಾತರಿಗೆ ಸಾಮಾಜಿಕ ನ್ಯಾಯದಡಿ ನೀಡಬೇಕು ಎಂದು ಮುಜಾಹಿದ್ ಮರ್ಚೆಡ್ ಸ್ಪಷ್ಟವಾಗಿ ಒತ್ತಾಯಿಸಿದ್ದಾರೆ.

ಈ ಹಿನ್ನೆಲೆಯಲ್ಲಿ, ಹಿರಿಯ ನಾಯಕ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅಥವಾ ಯು.ಟಿ.ಖಾದರ್ ಇವರಲ್ಲಿ ಒಬ್ಬರನ್ನು ಉಪ ಮುಖ್ಯಮಂತ್ರಿಯನ್ನಾಗಿ ನೇಮಕ ಮಾಡುವುದು ಸಮಂಜಸ ಹಾಗೂ ನ್ಯಾಯಸಮ್ಮತ ಕ್ರಮವಾಗುತ್ತದೆ ಎಂದು ತಿಳಿಸಿದ್ದಾರೆ.

ಮುಸ್ಲಿಂ ಸಮುದಾಯವು ಕಾಂಗ್ರೆಸ್ ಪಕ್ಷದ ಬಲಿಷ್ಠ ಬೆಂಬಲಿಗವಾಗಿದ್ದು, ಚುನಾವಣಾ ಸಂದರ್ಭಗಳಲ್ಲಿ ತನ್ನ ಸಂಖ್ಯಾಬಲವನ್ನು ನಿರಂತರವಾಗಿ ಪ್ರದರ್ಶಿಸಿದೆ. ಈ ನಿಷ್ಠೆಯನ್ನು ಗೌರವಿಸುವ ನಿಟ್ಟಿನಲ್ಲಿ ಉಪ ಮುಖ್ಯಮಂತ್ರಿ ಸ್ಥಾನವನ್ನು ನೀಡುವುದು ರಾಜಕೀಯವಾಗಿ ಸಹ ಅಗತ್ಯವಾಗಿದೆ.

2028ರ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು, ಅಲ್ಪಸಂಖ್ಯಾತರಿಗೆ ಸೂಕ್ತ ಪ್ರಾತಿನಿಧ್ಯ ನೀಡದಿದ್ದರೆ ಅದರ ರಾಜಕೀಯ ಪರಿಣಾಮಗಳನ್ನು ಎದುರಿಸಬೇಕಾಗಬಹುದು ಎಂದು ಮುಜಾಹಿದ್ ಮರ್ಚೆಡ್ ಎಚ್ಚರಿಸಿದ್ದಾರೆ. ಸಮುದಾಯದ ವಿಶ್ವಾಸವನ್ನು ಗಟ್ಟಿಗೊಳಿಸಲು ಈ ನಿರ್ಧಾರ ಅತ್ಯಂತ ಮುಖ್ಯವಾಗಿದೆ.

ಇದಲ್ಲದೆ, ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ವಿಭಾಗವು ವಿವಿಧ ಮುಸ್ಲಿಂ ಸಂಘಟನೆಗಳು, ಧಾರ್ಮಿಕ ಮುಖಂಡರು ಹಾಗೂ ಯುವಕರೊಂದಿಗೆ ಚರ್ಚೆ ನಡೆಸಿದ್ದು, ಈ ಬೇಡಿಕೆಯನ್ನು ತೀವ್ರವಾಗಿ ಮುಂದುವರಿದಿದೆ.

ಸರ್ಕಾರವು ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸದಿದ್ದಲ್ಲಿ, ಮುಸ್ಲಿಂ ಸಂಘಟನೆಗಳು ಶಾಂತಿಯುತ ಪ್ರತಿಭಟನೆಗಳು, ಮೆರವಣಿಗೆಗಳು ಹಾಗೂ ಜನಜಾಗೃತಿ ಕಾರ್ಯಕ್ರಮಗಳನ್ನು ಮಾಡುತ್ತಿದೆ ಕಾರಣ ಅಲ್ಪ ಸಂಖ್ಯಾತರಿಗೆ ಸಾಮಾಜಿಕ ನ್ಯಾಯ ಕೊಡುವುದು ಕಾಂಗ್ರೆಸ್ ಜವಬ್ದಾರಿಯಾಗಿದೆ ಎಂದು ಮುಜಾಹಿದ್ ಮರ್ಚೆಡ್ ತಿಳಿಸಿದ್ದಾರೆ.

ಅಲ್ಪಸಂಖ್ಯಾತರಿಗೆ ಸಮಾನ ಅವಕಾಶ ಮತ್ತು ಗೌರವ ನೀಡುವ ಮೂಲಕ ಮಾತ್ರ ಕಾಂಗ್ರೆಸ್ ಪಕ್ಷ ತನ್ನ ಬದ್ಧತೆಯನ್ನು ನೈಜಗೊಳಿಸಿ, 2028ರಲ್ಲಿ ಮತ್ತೆ ಅಧಿಕಾರಕ್ಕೆ ಬರಲು ಸಾಧ್ಯವಾಗುತ್ತದೆ ಎಂದು ಮುಜಾಹಿದ್ ಮರ್ಚೆಡ್ ಪತ್ರಿಕಾ ಹೇಳಿಕೆ ಮೂಲಕ ಒತ್ತಾಯಿಸಿದ್ದಾರೆ ಮತ್ತು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಸ್ಥಾನವೂ ಸಹ ಸುಮಾರು 60 ವರ್ಷಗಳ ಅವಧಿಯಲ್ಲಿ ಮುಸ್ಲಿಂ ಸಮುದಾಯಕ್ಕೆ ನೀಡದೇಯೆ ಇರುವುದು ಮುಸ್ಲಿಂ ಸಮುದಾಯದಲ್ಲಿ ಅಸಮಧಾನ ಇದೇ ಈ ಸ್ಥಾನವನ್ನು ಸಹ ಈ ಬಾರಿ ಮುಸ್ಲಿಂ ಸಮುದಾಯಕ್ಕೆ ನೀಡಬೇಕೆಂದು ಈಗಾಗಲೆ ಸಮುದಾಯದಿಂದ ಬಹಳ ಸಾರಿ ಕೇಳಿಕೊಳ್ಳಲಾಗಿತ್ತು ಅಧ್ಯಕ್ಷ ಸ್ಥಾನವು ತೆರವಾದರೆ ಮುಸ್ಲಿಂ ಸಮುದಾಯಕ್ಕೆ ನೀಡಬೇಕೆಂದು ಮುಜಾಹಿದ್ ಮನವಿ ಮಾಡಿದ್ದಾರೆ.

# ಬಾರ್ ಮಾಲೀಕನ ವಿರುದ್ಧ ಕ್ರಮಕ್ಕೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ನಗರದ ಅಂಬೇಡ್ಕರ್ ಸರ್ಕಲ್ ಸಮೀಪದ ಎಸ್ಸಿ ಕಾಲೋನಿಯಲ್ಲಿ ವಸತಿ ಉದ್ದೇಶಕ್ಕೆ ಮೀಸಲಿಟ್ಟ ಜಾಗದಲ್ಲಿ ಸುಮಾರು 22 ವಷ9ಗಳ ಕಾಲ ಸಿಎಲ್ 07 ಪರವಾನಿಗೆಯನ್ನು ಪಡೆದುಕೊಂಡು ಅಜಯ್ ಟೂರಿಸ್ಟ್ ಹೋಮ್ ಮಾಲೀಕರು ಕೋಟ್ಯಾಂತರ ರೂಪಾಯಿ ಅಕ್ರಮ ಮಾಡಿದ್ದಾರೆ ಅದಕ್ಕೆ ಸೂಕ್ತ ರೀತಿಯಲ್ಲಿ ಕ್ರಮಕ್ಕೆ ಮುಂದಾಗಬೇಕು ಎಂದು ಮಾದಿಗ ಕ್ಷೇಮಾಭಿವೃದ್ಧಿ ಸಂಘಟನೆಯ ಜಿಲ್ಲಾಧ್ಯಕ್ಷ ಶಿವಪ್ಪ ಮಾದಿಗ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮಾದಿಗ ಕ್ಷೇಮಾಭಿವೃದ್ಧಿ ಸಂಘಟನೆಯ ವತಿಯಿಂದ ಪತ್ರಿಕಾ ಭವನದಲ್ಲಿ ಶುಕ್ರವಾರ ಹಮ್ಮಿಕೊಂಡ ಪತ್ರಿಕಾ ಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು.

ವಸತಿಗೊಸ್ಕರ ಮೀಸಲಿಟ್ಟ ಜಾಗದಲ್ಲಿ ಬಾರ್ ಆರಂಭ ಮಾಡಿ, ತೆರಿಗೆ ಭರಿಸುವಲ್ಲಿ ಸಾಕಷ್ಟು ಸರಕಾರಕ್ಕೆ ವಂಚನೆಯನ್ನು ಬಾರ್ ಮಾಲೀಕ ಮಾಡಿದ್ದಾರೆ. ಅಷ್ಟೇ ಅಲ್ಲದೆ 22 ವಷ9ಗಳ ಕಾಲ ಅಕ್ರಮದಿಂದ ಮದ್ಯ ಮಾರಾಟ ಮಾಡಿದ್ದಾರೆ. ಅದಕ್ಕೆ ಅಬಕಾರಿ ಇಲಾಖೆಯ ಅಧಿಕಾರಿಗಳು ಸಹ ಸಾಥ್ ನೀಡಿದ್ದಾರೆ ಎನ್ನುವುದು ಅನುಮಾನ ಹುಟ್ಟಿಕೊಳ್ಳುತ್ತಿದೆ. ಯಾಕೆ-ಂದರೆ ಅಬಕಾರಿ ಇಲಾಖೆಯ ನಿಯಮಗಳ ಪ್ರಕಾರ ಪರವಾನಿಗೆಯನ್ನು ಪ್ರತಿ ವಷ9 ಜೂನ್ ತಿಂಗಳಿನಲ್ಲಿ ನವೀಕರಣ ಮಾಡಿಕೊಳ್ಳಬೇಕು. ಆ ಸಮಯದಲ್ಲಿ ಕೂಡ ಪರವಾನಿಗೆಯ ದಾಖಲೆಗಳನ್ನು ಪರಿಶೀಲನೆ ಮಾಡಲಾಗುವುದು. ಆದರೆ ಅಜಯ್ ಟೂರಿಸ್ಟ್ ಹೋಮನ ಬಾರ್ ಮತ್ತು ರೆಸ್ಟೋರೆಂಟ್ ಮಾಲೀಕರು ವಸತಿ ಉದ್ದೇಶಕ್ಕೆ ಮೀಸಲಿಟ್ಟ ಜಾಗದಲ್ಲಿ ಬಾರ್ ನಡೆಸುತ್ತಿದ್ದರು. ಅಬಕಾರಿ ಇಲಾಖೆಯವರು ಪ್ರತಿ ವಷ9 ಪರವಾನಿಗೆಯನ್ನು ನವೀಕರಣ ಮಾಡಿಕೊಟ್ಟಿದ್ದಾರೆ. ಅಂದರೆ ಇದರಲ್ಲಿಯೇ ತಿಳಿಯುತ್ತದೆ. ಹಾಗಾಗಿ ಅಬಕಾರಿ ಇಲಾಖೆಯ ಅಧಿಕಾರಿಗಳು ಈ ಅಕ್ರಮವಾಗಿ ಶಾಮೀಲಾಗಿದ್ದಾರೆ. ಅಷ್ಟೆ ಅಲ್ಲದೆ ನಗರ ಯೋಜನಾ ಪ್ರಾಧಿಕಾರದಿಂದ ವಸತಿ ಉದ್ದೇಶಕ್ಕೆ ಪರವಾನಿಗೆ ಪಡೆದುಕೊಂಡು ಲಾಡ್ಜ್ ನಿರ್ಮಾ9ಣ ಮಾಡಿ, ಸಿಎಲ್ 07 ಪರವಾನಿಗೆ ಪಡೆದುಕೊಂಡು ಬಾರ್ ಮತ್ತು ರೆಸ್ಟೋರೆಂಟ್ ನಡೆಸಿದರು. ನಗರಸಭೆ ಪೌರಯುಕ್ತರು ಸಹ ಸುಮ್ಮನಾಗಿದ್ದಾರೆ. ಅಜಯ್ ಟೂರಿಸ್ಟ್ ಹೋಮ ಮಾಲೀಕರು ಸುಮಾರು 22 ವಷ9ಗಳ ಕಾಲ ಮದ್ಯ ಮಾರಾಟ ಮಾಡಿ, ಸರಕಾರಕ್ಕೆ ವಂಚನೆ ಮಾಡಿದ್ದಾರೆ. ದೂರಿನ ಮೇಲೆಗೆ ಜಿಲ್ಲಾಧಿಕಾರಿಗಳು ಕೇವರ ಲೈಸನ್ಸ್ ರದ್ದು ಮಾಡಿದ್ದಾರೆ. ಅಕ್ರಮ ಮಾಡಿದ ಬಾರ್ ಮಾಲೀಕನಿಗೆ, ಅಕ್ರಮದಲ್ಲಿ ಭಾಗಿಯಾಗಿದ್ದ ಅಬಕಾರಿ ಇಲಾಖೆಯ ಅಧಿಕಾರಗಳ ವಿರುದ್ಧ ಕ್ರಮಕ್ಕೆ ಮುಂದಾಗಿಲ್ಲ. ಕೂಡಲೇ ಜಿಲ್ಲಾಧಿಕಾರಿಗಳು ಅಕ್ರಮ ಮಾಡಿದ ಬಾರ್ ಮಾಲೀಕರ ವಿರುದ್ಧ ಕ್ರಮಕ್ಕೆ ಮುಂದಾಗಿ, 22 ವಷ9ಗಳ ಮದ್ಯ ಮಾರಾಟದಿಂದ ಮಾಡಿರುವ ಕೋಟ್ಯಾಂತರ ರೂಪಾಯಿಗಳನ್ನು ದಂಡದ ರೂಪದಲ್ಲಿ ಪಡೆದುಕೊಳ್ಳಬೇಕು ಎಂದು ಒತ್ತಾಯಿಸಿದರು. ಬಾರ್ ಲೈಸೆನ್ಸ್ ರದ್ದಾಗಿದ್ದರು ಬಾರ್ ಮಾಲೀಕರು ಕೋರ್ಟ್ ಮೂಲಕ ತಡೆಯಾಜ್ಞೆ ತರಲು ಹೊರಟಿದ್ದಾರೆ. ಎಸ್ಸಿ ಕಾಲೋನಿಯಲ್ಲಿ ಬಾರ್ ಆರಂಭ ಮಾಡಬಾರದು ಎನ್ನುವ ಕಾನೂನು ಇದ್ದರೂ ಬಾರ್ ಆರಂಭ ಮಾಡಿದ್ದಾರೆ. ಸದ್ಯ ಈಗ ಬಾರ್ ಲೈಸೆನ್ಸ್ ರದ್ದಾಗಿದೆ. ಅದನ್ನು ಕೋರ್ಟ್ ಮೂಲಕ ತಡೆಯಾಜ್ಞೆ ತದ್ರೂ ಸಹ ಅಬಕಾರಿ ಇಲಾಖೆಯವರು ಎಸ್ಸಿ ಕಾಲೋನಿಯಲ್ಲಿ ಬಾರ್ ನಡೆಸಲು ಅವಕಾಶ ನೀಡಬಾರದು. ಒಂದು ವೇಳೆ ಕೋರ್ಟ್ ತಡೆಯಾಜ್ಞೆ ನೀಡಿದರೆ ನಾನು ಕೋರ್ಟ್ ಮೂಲಕ ಹೋರಾಟ ಮಾಡಿ, ಎಸ್ಸಿ ಕಾಲೋನಿಯ ಜನರಿಗೆ ನ್ಯಾಯ ಕೊಡಿಸುವೆ ಎಂದು ಶಿವಪ್ಪ ಮಾದಿಗ ಹೇಳಿದರು. ಎಸ್ಸಿ ಕಾಲೋನಿಯ ನಿವಾಸಿಗಳಾದ ಪರಶುರಾಮ , ಸುರೇಶ್ ಮುಕ್ಕುಂದಿ, ಬಸವರಾಜ ಕಲ್ಗುಡಿ, ಪರಶುರಾಮ, ಮುಂಜುನಾಥ್, ಪ್ರದೀಪ್ ಹಾಗೂ ಇತರರಿದ್ದರು.

## ಮೆಟ್ರಿಕ್ ನಂತರ ಕೋರ್ಸ್‌ಗೆ ಪ್ರವೇಶ

**ಬಾಗಲಕೋಟೆ:** ಪ್ರಸಕ್ತ ಸಾಲಿಗೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪಿಯುಸಿ ಸಮಾನಾಂತರ ಡಿಪ್ಲೋಮಾ, ಐಟಿಐ ಕೋರ್ಸಿನ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ವೆಬ್‌ಸೈಟ್ http://shp.karnataka.gov.in/bcwd ಮೂಲಕ ಜೂನ್ 15 ರೊಳಗಾಗಿ ಸಲ್ಲಿಸಬೇಕು. ಪೋಷಕರ ವಾರ್ಷಿಕ ವರಮಾನ ಪ್ರವರ್ಗ–1, ಎಸ್.ಸಿ ಮತ್ತು ಎಸ್‌ಟಿ ಅಭ್ಯರ್ಥಿಗಳಿಗೆ 2.50 ಲಕ್ಷ ರೂ, ಪ್ರವರ್ಗ–2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ 1 ಲಕ್ಷ ರೂ. ಮೀರಿರಬಾರದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂ.8050770004ಗೆ ಸಂಪರ್ಕಿಸಬಹುದಾಗಿದೆ.

## ಉಪ್ಪಾರ ಸಮಾಜದ ಶಾಸಕರಿಗೆ ಸಚಿವ ಸ್ಥಾನ ನೀಡಲು ಆಗ್ರಹ



**ವಿಜಯಪುರ:** ಚಾಮರಾಜನಗರ ಕ್ಷೇತ್ರದ ಶಾಸಕರಾದ ಅ. ಪುಟ್ಟರಂಗಶೆಟ್ಟಿ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕೆಂದು ವಿಜಯಪುರ ಜಿಲ್ಲಾ ಉಪ್ಪಾರ ಸಮಾಜದ ಜಿಲ್ಲಾಧ್ಯಕ್ಷ ಜಕ್ಕಪ್ಪ ಯಡವೆ ಸರ್ಕಾರವನ್ನು ಒತ್ತಾಯಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಸಕ ಪುಟ್ಟರಂಗಶೆಟ್ಟಿ ಅವರು ಹಲವು ವರ್ಷಗಳಿಂದ ಪಕ್ಷ ಸಂಘಟನೆ ಹಾಗೂ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದು, ಜನಪರ ಕೆಲಸಗಳ ಮೂಲಕ ಜನರ ವಿಶ್ವಾಸ ಗಳಿಸಿದ್ದಾರೆ. ಹಿಂದುಳಿದ ವರ್ಗಗಳ ಪರವಾಗಿ ಧ್ವನಿಯಾಗಿರುವ ಅವರಿಗೆ ಸಚಿವ ಸ್ಥಾನ ನೀಡುವುದರಿಂದ ಉಪ್ಪಾರ ಸಮಾಜಕ್ಕೆ ನ್ಯಾಯ ಸಿಗಲಿದೆ ಎಂದು ಹೇಳಿದರು. ರಾಜ್ಯದಲ್ಲಿ ಉಪ್ಪಾರ ಸಮಾಜಕ್ಕೆ ಸಮರ್ಪಕ ರಾಜಕೀಯ ಪ್ರತಿನಿಧಿತ್ವ ಸಿಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಹಾಗೂ ಪಕ್ಷದ ಹಿರಿಯ ನಾಯಕರು ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಿ ಸಮಾಜದ ಆಶಯವನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಆರ್‌ವಿ ದೇಶಪಾಂಡೆಗೆ ಡಿಸಿಎಂ ಸ್ಥಾನ ನೀಡಲು ಮನವಿ



**ದಾಂಡೇಲಿ:** ನಮ್ಮ ದಾಂಡೇಲಿಯ ಹಾಗೂ ಉತ್ತರ ಕನ್ನಡ ಜಿಲ್ಲೆಯ ಶಿಲ್ಪಿಗಳು ಹಾಗೂ ಯಾವತ್ತೂ ಬಡವರ ಬಗ್ಗೆ ವಿಚಾರ ಮಾಡುವಂತಹ ಈ ರಾಜ್ಯದ ಧೀಮಂತ ನಾಯಕರದಂತ 40 ವರ್ಷದ ಸತತವಾಗಿ ಗೆಲುವನ್ನು ಸಾಧಿಸುತ ಬರುತ್ತಿರುವಂತಹ ಸೋಲಿಲ್ಲದ ಸರದಾರವೆಂದು ಬಿರುದನ್ನು ಪಡೆದಂ ತಹ.ಹಾಗೂ ವಿಧಾನ ಸಭೆಯಲ್ಲಿ ಹಿರಿಯ ರಾಜಕಾರಣಿ ಯಾಗಿ ರುವಂತಹ ನಮ್ಮ ಆರ್‌ವಿ ದೇಶಪಾಂಡೆಜಿ ಮುಂದಿನ ಸಂಪುಟದಲ್ಲಿ ಉಪ ಮುಖ್ಯಮಂತ್ರಿಯ ಸ್ಥಾನವನ್ನು ನೀಡಬೇಕೆಂದು ಹಳಿಯಾಳ ವಿಧಾನಸಭಾ ಕ್ಷೇತ್ರದ ಯೂಥ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ ಹಾಗೂ ಸಮಸ್ತ ಈ ಕಾಂಗ್ರೆಸ್ ಹಾಗೂ ಬ್ಲಾಕ್ ಕಾಂಗ್ರೆಸ್ ವತಿಯಿಂದ ಆಗ್ರಹಿಸುತ್ತೇವೆ. ಯುವ ಕಾಂಗ್ರೆಸ್ ಹಳಿಯಾಳ ದಾಂಡೇಲಿ ಜೋಯಿಡಾ ವಿಧಾನಸಭಾ ಕ್ಷೇತ್ರ ಪ್ರಧಾನ ಕಾರ್ಯದರ್ಶಿ ಪ್ರವೀಣ್ ಕೊಠಾರಿ ಕಾಂಗ್ರೆಸ್ ಮುಖಂಡರು ಮಹಮ್ಮದ ರಫೀಕ್ ನದಾಫ್ ಅನೀಸ್ ಸನದಿ ಮುಂತಾದವರು ಉಪಸ್ಥಿತರಿದ್ದರು.

## ಇಬ್ಬರು ನಾಯಕರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಲು ಕಾಂಗ್ರೆಸ್ ಹೈಕಮಾಂಡಿಗೆ ಒತ್ತಾಯ



**ಹಳಿಯಾಳ:** ದಲಿತ ಸಮುದಾಯದ ಹಿರಿಯ ಅನುಭವಿ ರಾಜಕಾರಣಿ ಹಾಗೂ 7 ಬಾರಿ ಸಂಸದರಾಗಿ ಕೇಂದ್ರ ಸಚಿವರಾಗಿ ರಾಜ್ಯ ಸರ್ಕಾರದ ಕ್ಯಾಬಿನೆಟ್ ದರ್ಜೆಯ ಸಚಿವರಾಗಿ ಕಾರ್ಯನಿರ್ವಹಿಸುತ್ತಿರುವ ಕೆ ಎಚ್ ಮುನಿಯಪ್ಪ ಅವರಿಗೆ ಈ ಬಾರಿ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಹೈಕಮಾಂಡಿಗೆ ಪತ್ರಿಕಾ ಮಾಧ್ಯಮದ ಮೂಲಕ ತಿಳಿಸಿದರು.

ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ವಿಧಾನಸಭಾ ಕ್ಷೇತ್ರದ ಒಂಬತ್ತು ಬಾರಿ ಶಾಸಕರಾಗಿ ಕಾಂಗ್ರೆಸ್ ಪಕ್ಷದ ಅನುಭವಿ ರಾಜಕಾರಣಿ ಹಲವು ಬಾರೆ ಪಕ್ಷದ ಸಂಘಟನೆಯಲ್ಲಿ ಮುಂಚೂಣಿಯಲ್ಲಿದ್ದು ಬೇರೆ ಬೇರೆ ಖಾತೆಗಳನ್ನು ನಿಭಾಯಿಸಿ ಅತ್ಯಂತ ಹಿರಿಯ ಶಾಸಕರಾಗಿರುವ ಮಾನ್ಯ ಆರ್ ವಿ ದೇಶಪಾಂಡೆ ಅವರಿಗೂ ಕೂಡ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಇಂದು ಹಳಿಯಾಳದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾದಾರ ಮಹಾಸಭಾ ವತಿಯಿಂದ ಕಾಂಗ್ರೆಸ್ ಪಕ್ಷದ ಹೈಕಮಾಂಡಿಗೆ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಮಹಾ ಸಭಾ ಅಧ್ಯಕ್ಷರಾದ ರಾಜು ಮೇತ್ರಿ ಹಾಗೂ ಜಿಲ್ಲಾ ಮತ್ತು ತಾಲೂಕ ಪದಾಧಿಕಾರಿಗಳಾದ ಎಚ್‌ಪಿ ಪರಶುರಾಮ, ಪಿಶಪ್ಪಾ ಮೇತ್ರಿ, ಹಣಮಂತ ಮೇತ್ರಿ, ನಾಗಪ್ಪ ಮೇತ್ರಿ ಮಾದೇವ ಮೇತ್ರಿ, ಮೈಲಾರ ಮೇತ್ರಿ ಉಪಸ್ಥಿತರಿದ್ದರು.

# ರಾಜಿನಾಮೆ ಒಳಜಗಳದ ಪರಿಣಾಮ: ಟೀಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮುಖ್ಯಮಂತ್ರಿ ಸ್ಥಾನದಿಂದ ಸಿದ್ದರಾಮಯ್ಯ ಅವರನ್ನು ಕೆಳಗಿಳಿಸಿರುವುದು ಕಾಂಗ್ರೆಸ್ ಪಕ್ಷದ ಒಳಜಗಳ ಮತ್ತು ಅಧಿಕಾರದ ರಾಜಕೀಯದ ಪರಿಣಾಮವಾಗಿದೆ ಎಂದು ಬಿಜೆಪಿ ಹಿರಿಯ ನಾಯಕ ಹಾಗೂ ಮಾಜಿ ಸಚಿವ ಃ. ಖಡು–ಡಿಚಿಟಣಟಣ ಆರೋಪಿಸಿದರು.




ನಗರದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ರಾಜ್ಯದ ಹಿರಿಯ ಹಾಗೂ ಪ್ರಭಾವಿ ನಾಯಕರಾಗಿದ್ದು, 2023ರಲ್ಲಿ ಎರಡನೇ ಬಾರಿಗೆ ಮುಖ್ಯಮಂತ್ರಿಯಾದ ಬಳಿಕವೂ ಅವರಿಗೆ ಸಂಪೂರ್ಣ ಅವಧಿ ಆಡಳಿತ ನಡೆಸಲು ಅವಕಾಶ ನೀಡಲಿಲ್ಲ ಎಂದು ದೂರಿದರು.

"ಸಿಎಂ ಕುರ್ಚಿ ವಿಚಾರವಾಗಿ ಆರಂಭದಿಂದಲೇ ಕಾಂಗ್ರೆಸ್‌ನಲ್ಲಿ ಜಟಾಪಟಿ ನಡೆಯುತ್ತಿತ್ತು. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ನಂತರ ಅವರ ಮುಖದ ಭಾವನೆ ನೋಡಿದಾಗ ನನಗೆ ತುಂಬಾ ನೋವಾಯಿತು. ಕಾಂಗ್ರೆಸ್ ಪಕ್ಷ ಇಂದು ಅವರನ್ನು ನಡೆಸಿಕೊಂಡಿರುವ ರೀತಿ ದುಃಖಕರವಾಗಿದೆ" ಎಂದು ಹೇಳಿದರು.

ಒಂದು ಕಡೆ ಡಿ.ಕೆ. ಶಿವಕುಮಾರ್ ಹಾಗೂ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಹಲವು ನಾಯಕರು ಅಧಿಕಾರದ ಲಾಬಿಯಲ್ಲಿ ತೊಡಗಿದ್ದರು. ಕೊನೆಗೆ ಸಿದ್ದರಾಮಯ್ಯ ಅವರಿಗೆ ಒತ್ತಡ ತಂದು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಲಾಗಿದೆ ಎಂದು ಆರೋಪಿಸಿದರು.

"ರಾಹುಲ್ ಗಾಂಧಿ ಅವರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಓಬಿಸಿ ಸಮುದಾಯಕ್ಕೆ ಅವಕಾಶ ನೀಡುವ ವಿಚಾರವಾಗಿ ಮಾತನಾಡುತ್ತಾರೆ. ಆದರೆ ತಮ್ಮದೇ ಪಕ್ಷದ ಹಿರಿಯ ಅಹಿಂದ ನಾಯಕ ಸಿದ್ದರಾಮಯ್ಯ ಅವರನ್ನು ಏಕೆ ಕೆಳಗಿಳಿಸಿದರು?" ಎಂದು ಪ್ರಶ್ನಿಸಿದರು.

ಸಿದ್ದರಾಮಯ್ಯ ಅವರ ರಾಜೀನಾಮೆಯಿಂದ ಅಹಿಂದ ವರ್ಗ ಹಾಗೂ ಕುರುಬ ಸಮುದಾಯದ ಜನರಿಗೆ ನೋವಾಗಿದೆ. ಇದರ ಪರಿಣಾಮ 2028ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ–ಕ್ಕೆ ಎದುರಾಗಲಿದ್ದು, ರಾಜ್ಯದಲ್ಲಿ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದು ಶ್ರೀರಾಮುಲು ಭವಿಷ್ಯ ನುಡಿದರು.

ಇದೇ ವೇಳೆ ಮಾಜಿ ಶಾಸಕ ಸುರೇಶ್ ಬಾಬು ಮಾತನಾಡಿ, "ಬಳ್ಳಾರಿ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದ ಅನೇಕ ಶಾಸಕರು ಗೆದ್ದಿರುವುದು ಸಿದ್ದರಾಮಯ್ಯ ಅವರ ನಾಯಕತ್ವದಿಂದ. ಅವರ ಭಾವಚಿತ್ರ ಇಟ್ಟುಕೊಂಡೇ ಅನೇಕರು ಗೆದ್ದಿದ್ದಾರೆ. ಆದರೆ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿದ ಕೂಡಲೇ ಕೆಲವರು ತಮ್ಮ ನಿಲುವು ಬದಲಿಸಿಕೊಂಡಿದ್ದಾರೆ" ಎಂದು ಅಸಮಾಧಾನ ವ್ಯಕ್ತಪಡಿಸಿದರು.

"ಇದು ಸಿದ್ದರಾಮಯ್ಯ ಅವರಿಗೆ ಬಳ್ಳಾರಿ ಜಿಲ್ಲೆಯ ಕಾಂಗ್ರೆಸ್ ಜನಪ್ರತಿನಿಧಿಗಳ ನಿಷ್ಠೆ ಇಲ್ಲ ಎಂಬುದನ್ನು ತೋರಿಸುತ್ತದೆ. ಕೆಲ ನಾಯಕರು ತಮ್ಮ ರಾಜಕೀಯ ಲಾಭಕ್ಕಾಗಿ ಗೆದ್ದ ಎತ್ತಿನ ಬಾಲ ಹಿಡಿಯುವ ರಾಜಕಾರಣ ಮಾಡುತ್ತಿದ್ದಾರೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಪಕ್ಷ ನೀಡುವ ಜವಾಬ್ದಾರಿ ನಿಭಾಯಿಸಲು ಸಿದ್ಧ: ಈಶ್ವರ ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ತಾವು ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿದ್ದು, ಪಕ್ಷ ನೀಡುವ ಯಾವುದೇ ಜವಾಬ್ದಾರಿ ನಿಭಾಯಿಸಲು ಸಿದ್ಧ ಎಂದು ಮಾಜಿ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾವು ಈ ಹಿಂದೆ ಪೌರಾಡಳಿತ ಸಚಿವನಾಗಿ ಹಲವು ಸುಧಾರಣೆ ತಂದಿದ್ದು, ಸಮ್ಮಿಶ್ರ ಸರ್ಕಾರದ ಸಮಯದಲ್ಲಿ ಮತ್ತು ಬಿಜೆಪಿ ಆಡಳಿತ ಇದ್ದಾಗ 5 ವರ್ಷಗಳ ಕಾಲ ಕೆಪಿಸಿಸಿ ಕಾರ್ಯಾಧ್ಯಕ್ಷನಾಗಿ ಪಕ್ಷ ಸಂಘಟನೆಗಾಗಿ ಶ್ರಮಿಸಿದ್ದೇನೆ. ವರಿಷ್ಠರು ಕೈಗೊಳ್ಳುವ ನಿರ್ಧಾರಕ್ಕೆ ತಾವು ಬದ್ಧ ಎಂದರು.

ಎಲ್ಲರೂ ದೆಹಲಿಗೆ ಹೋಗಿದ್ದಾರೆ ನೀವು ಇಲ್ಲೇ ಇದ್ದೀರಲ್ಲ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ನಾಳೆ ಸಂಜೆ ಶಾಸಕಾಂಗ ಪಕ್ಷದ ಸಭೆ ಇದ್ದು, ಬೆಂಗಳೂರಿನಲ್ಲಿರುವಂತೆ ವರಿಷ್ಠರು ತಿಳಿಸಿದ್ದಾರೆ ಹೀಗಾಗಿ ತಾವು ಇಲ್ಲೇ ಇದ್ದು, ನಾಳೆ ಸಭೆಯ ಬಳಿಕ ಪಕ್ಷದ ವರಿಷ್ಠರನ್ನು ಭೇಟಿ ಮಾಡುವುದಾಗಿ ತಿಳಿಸಿದರು. ಪಕ್ಷನಿಷ್ಠರು ಮತ್ತು ದಕ್ಷತೆಯಿಂದ ಕೆಲಸ ಮಾಡಿದವರನ್ನು ಕಾಂಗ್ರೆಸ್ ಪಕ್ಷ ಸದಾ ಗುರುತಿಸಿ, ಸ್ಥಾನಮಾನ ನೀಡಿದೆ. ನಾನು ಪ್ರಸ್ತುತ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷನೂ ಆಗಿದ್ದು, ತಮ್ಮ ಸಮುದಾಯಕ್ಕೆ ಸೂಕ್ತ ಸ್ಥಾನ ಮಾನ ದೊರಕಬೇಕು. ಹೆಚ್ಚಿನ ಶಾಸಕರಿಗೆ ಸಂಪುಟದಲ್ಲಿ ಪ್ರಾತಿನಿಧ್ಯ ಸಿಗಬೇಕು ಎಂಬುದು ತಮ್ಮ ಆಶಯ ಎಂದರು.



ಕೆಪಿಸಿಸಿ ಅಧ್ಯಕ್ಷ ಸ್ಥಾನ ನಿಮಗೆ ದೊರಕಬಹುದೇ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು ಪಕ್ಷ ಯಾವುದೇ ಜವಾಬ್ದಾರಿ ನೀಡಿದರೂ ಕಾಯ, ವಾಚ, ಮನಸಾ ಹಾಗೂ ಶ್ರದ್ಧೆಯಿಂದ ಕೆಲಸ ಮಾಡುತ್ತೇನೆ ಎಂದು ಹೇಳಿದರು.

ನಿಮ್ಮ ಹೆಸರು ಉಪ ಮುಖ್ಯಮಂತ್ರಿ ಹುದ್ದೆಗೂ ಕೇಳಿ ಬರುತ್ತಿದೆ. ನೀವು ವರಿಷ್ಠರ ಮುಂದೆ ಈ ಬೇಡಿಕೆ ಇಟ್ಟಿದ್ದೀರಾ ಎಂಬ ವರದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಈಶ್ವರ ಖಂಡ್ರೆ, ವರಿಷ್ಠರು ಡಿಸಿಎಂ ಹುದ್ದೆ ಬಗ್ಗೆ ನಿರ್ಧರಿಸಿದ್ದಾರೋ ಇಲ್ಲವೋ ತಿಳಿದಿಲ್ಲ. ಆದರೆ ತಾವು ಕಳೆದ 3 ವರ್ಷಗಳ ಕಾಲ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವನಾಗಿ ಉತ್ತಮ ಕಾರ್ಯ ಮಾಡಿದ್ದೇನೆ, ಇಲಾಖೆಗೆ ಕಾಯಕಲ್ಪ ನೀಡಿದ್ದೇನೆ ಮತ್ತು ಈ ಹಿಂದೆ ಆಗದ ಹಲವು ಸುಧಾರಣೆ ತಂದ ತೃಪ್ತಿ ನನಗಿದೆ ಎಂದರು.

**ಸಂಘಟಿತ ಪ್ರಯತ್ನದಿಂದ ಪಕ್ಷಕ್ಕೆ ಬಲ:** ಸಿದ್ದರಾಮಯ್ಯ ಅವರ ರಾಜೀನಾಮೆ ಪಡೆದದ್ದು ಅನ್ಯಾಯವಲ್ಲವೇ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಾವು ಸ್ವಇಚ್ಛೆಯಿಂದ ರಾಜೀನಾಮೆ ನೀಡಿರುವುದಾಗಿ ಹೇಳಿದ್ದಾರೆ. ಜೊತೆಗೆ ರಾಜ್ಯ ರಾಜಕಾರಣದಲ್ಲೇ ಇದ್ದು ಪಕ್ಷ ಬೆಳೆಸುವುದಾಗಿ ತಿಳಿಸಿದ್ದಾರೆ. ಕಳೆದ 3 ವರ್ಷಗಳಲ್ಲಿ ಅವರು ಪಂಚ ಗ್ಯಾರಂಟಿಗಳನ್ನು ಜಾರಿ ಮಾಡಿ ಉತ್ತಮವಾಗಿ ಸರ್ಕಾರ ಕೊಟ್ಟಿದ್ದಾರೆ. ಅವರ ಹೆಗಲಿಗೆ ಹೆಗಲು ಕೊಟ್ಟು ಡಿ.ಕೆ. ಶಿವಕುಮಾರ್ ಅವರು ಉಪ ಮುಖ್ಯಮಂತ್ರಿಗಳಾಗಿ ಉತ್ತಮ ಕಾರ್ಯ ಮಾಡಿದ್ದಾರೆ. ಉಪ ಚುನಾವಣೆಗಳಲ್ಲಿ ಪಕ್ಷ ಜಯಭೇರಿ ಬಾರಿಸಿದೆ. ತಾವೂ ಕೂಡ ಉಪ ಚುನಾವಣೆಗಳಲ್ಲಿ ಪಕ್ಷದ ಪರ ಪ್ರಚಾರ ಮಾಡಿದ್ದೇನೆ ಎಂದ ಅವರು ಕಳೆದ ಸಚಿವ ಸಂಪುಟದಲ್ಲಿದ್ದ ಎಲ್ಲ ಸಚಿವರೂ ತಮ್ಮ ಜವಾಬ್ದಾರಿ ನಿಭಾಯಿಸಿದ್ದಾರೆ. ಎಲ್ಲರ ಸಂಘಟಿತ ಪ್ರಯತ್ನದಿಂದ ಪಕ್ಷಕ್ಕೆ ಹೆಚ್ಚಿನ ಬಲ ಬರಲಿದೆ ಎಂದರು.

ತಾವು ಅರಣ್ಯ ಮತ್ತು ಪರಿಸರ ಸಚಿವರಾಗಿ ಮಾಡಿರುವ ಸಾಧನೆಗಳ ಬಗ್ಗೆ ಹೇಳಿದ ಅವರು, 153 ಎಕರೆ ಪ್ರದೇಶದಲ್ಲಿ ಬೃಹತ್ ಉದ್ಯಾನವನ್ನು ವಿಶ್ವಗುರು ಬಸವಣ್ಣನವರ ಹೆಸರಲ್ಲಿ ಬೆಂಗಳೂರಿನಲ್ಲಿ ಅಭಿವೃದ್ಧಿ ಪಡಿಸಲು ಕ್ರಮ ವಹಿಸಲಾಗಿದೆ. 12 ಸಾವಿರ ಎಕರೆಗೂ ಹೆಚ್ಚು ಅರಣ್ಯ ಭೂಮಿ ಒತ್ತುವರಿ ತೆರವು ಮಾಡಲಾಗಿದೆ. ಸುಮಾರು 15 ಸಾವಿರ ಎಕರೆ ಪ್ರದೇಶವನ್ನು ಹೊಸದಾಗಿ ಅರಣ್ಯ ಎಂದು ಘೋಷಿಸಲಾಗಿದೆ. ಮಾನವ–ವನ್ಯಜೀವಿ ಸಂಘರ್ಷ ತಡೆಯಲು ಕಮಾಂಡ್ ಸೆಂಟರ್ ಸೇರಿದಂತೆ ಹಲವು ಆಧುನಿಕ ತಂತ್ರಜ್ಞಾನ ಆಧಾರಿತ ಕ್ರಮ ವಹಿಸಲಾಗಿದೆ. ಚಾರಣ, ಮೃಗಾಲಯಗಳಿಗೆ ಸಂಬಂಧಿಸಿದಂತೆ ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಪ್ರಮಾಣಿತ ಕಾರ್ಯಾಚರಣೆ ಮಾನದಂಡ ರೂಪಿಸಲಾಗಿದೆ ಈ ಎಲ್ಲದರ ಬಗ್ಗೆ ತೃಪ್ತಿ ಇದೆ ಎಂದರು.

# ಮಳೆಗಾಲದಲ್ಲಿ ಪ್ರಾಣಹಾನಿ ತಡೆಗೆ ಮುನ್ನೆಚ್ಚರಿಕೆ ವಹಿಸಲು ಶಾಸಕರ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮಳೆಗಾಲದ ವೇಳೆಯಲ್ಲಿ ಜನ–ಜಾನುವಾರುಗಳ ಪ್ರಾಣ ಹಾನಿ ತಡೆಗೆ ಹಾಗೂ ಹಾನಿಗೆ ತಕ್ಕಂತೆ ಪರಿಹಾರ ಒದಗಿಸುವುದಕ್ಕೆ ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ವಹಿಸಬೇಕು ಎಂದು ಶಾಸಕರಾದ ಗಾಲಿ ಜನಾರ್ಧನ ರೆಡ್ಡಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೊಪ್ಪಳ ಜಿಲ್ಲಾ ಪಂಚಾಯತ್ ಕಚೇರಿಯ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಮೇ 29ರಂದು ಇರಕಲಗಡ ಹೋಬಳಿಗೆ ಸಂಬಂಧಿಸಿದಂತೆ ತ್ರೈಮಾಸಿಕ ಕೆಡಿಪಿ ಸಭೆ ನಡೆಸಿ ಅವರು ಮಾತನಾಡಿದರು.

ಮಳೆಗಾಲದ ಸಂದರ್ಭದಲ್ಲಿ ಅಧಿಕಾರಿಗಳು ಜಾಗ್ರತೆಯಿಂದ ಕಾರ್ಯ ನಿರ್ವಹಿಸಬೇಕು. ಯಾವುದೆ ಕಡೆಗಳಲ್ಲಿ ಹಾನಿ ಸಂಭವಿಸಿದಾಗ ಸ್ಥಳಕ್ಕೆ ಕೂಡಲೇ ಭೇಟಿ ನೀಡಿ ಪರಿಶೀಲಿಸಬೇಕು. ಜೀವ ಹಾನಿ ಹಾಗೂ ಆಸ್ತಿಪಾಸ್ತಿ ಹಾನಿಗೆ ಪರಿಹಾರ ಕಾರ್ಯವನ್ನು ತ್ವರಿತಗೊಳಿಸಬೇಕು. ಸಾರ್ವಜನಿಕರ ದೂರವಾಣಿ ಕರೆಗಳನ್ನು ಸ್ವೀಕರಿಸಿ ಸ್ಪಂದನೆ ನೀಡಬೇಕು ಎಂದು ಶಾಸಕರು ಕಂದಾಯ, ಜೆಸ್ಕಾಂ, ಪಶುಪಾಲನೆ, ಕೃಷಿ, ತೋಗಾರಿಕಾರಿಕೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಿನ್ನಾಳ ಗ್ರಾಮ ಸೇರಿದಂತೆ ಆರು ಕಡೆಗಳಲ್ಲಿನ ಸಾರ್ವಜನಿಕ ಶೌಚಾಲಯಗಳಿಗೆ ವಿದ್ಯುತ್ ಸಂಪರ್ಕವಿಲ್ಲದ ವಿಷಯ ಸಭೆಯಲ್ಲಿ ಚರ್ಚೆಗೆ ಬಂದಿತು.



ಹಿಂದುಳಿದ ಕಿನ್ನಾಳ ಪ್ರದೇಶದಲ್ಲಿನ ಸಾರ್ವಜನಿಕ ಶೌಚಾಲಯಕ್ಕೆ ವಿದ್ಯುತ್ ಸೌಕರ್ಯ ಕೊಡಲು ವಿಳಂಬ ವಹಿಸಿದ ಕೊಪ್ಪಳ ಜೆಸ್ಕಾಂ ಅಧಿಕಾರಿಗೆ ಶಾಸಕರು ತರಾಟೆ ತೆಗೆದುಕೊಂಡರು. ನಾಲ್ಕಾರು ಬಾರಿ ಗಂಗಾವತಿಗೆ ಅಲೆದು ಕಿನ್ನಾಳ ಗ್ರಾಮದ ಶೌಚಾಲಯಕ್ಕೆ ವಿದ್ಯುತ್ ಸೌಕರ್ಯ ಕಲ್ಪಿಸಿ ಎಂದು ಮನವಿ ಹಿಡಿದು ಬಂದ ಕಿನ್ನಾಳ ಗ್ರಾಮದ ಗ್ರಾಪಂ ಸದಸ್ಯೆ ಕಮಲಮ್ಮ ಅವರಲ್ಲಿನ ಮಾನವೀಯತೆ, ಕಾಳಜಿ ಭಾವನೆಯನ್ನು ಅಧಿಕಾರಿಗಳು ಸಹ ರೂಢಿಸಿಕೊಳ್ಳಬೇಕು ಎಂದು ಶಾಸಕರು ಎಲ್ಲ ಅಧಿಕಾರಿಗಳಿಗೆ ಸಲಹೆ ಮಾಡಿದರು.

ಕಿನ್ನಾಳ ಸೇರಿದಂತೆ 6 ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಭೆ ಕರೆದು ವಿದ್ಯುತ್ ಸಂಪರ್ಕ ಸೇರಿದಂತೆ ನಾನಾ ಕಾರ್ಯಗಳ ಬಗ್ಗೆ ಶಿಸ್ತುಬದ್ಧ ಕೆಲಸ ನಿರ್ವಹಿಸಲು ಸೂಚನೆ ನೀಡಿರಿ ಎಂದು ಶಾಸಕರು, ಕೊಪ್ಪಳ ತಾಲೂಕು ಪಂಚಾಯತ್ ಇಓ ಅವರಿಗೆ ನಿರ್ದೇಶನ ನೀಡಿದರು.

ಕಳೆದ ಕೆಡಿಪಿ ಸಭೆಯಲ್ಲಿ ನೀಡಿದ ಸೂಚನೆಯನ್ವಯ ಗಂಗಾವತಿ ಬಿಇಓ ಕಚೇರಿ ಚುರುಕಾಗಿ ಕಾರ್ಯ ನಿರ್ವಹಿಸಿ, ಎಲ್ಲ ಶಾಲೆಗಳ ಮುಖ್ಯಾಧ್ಯಾಪಕರ ಸಭೆ ನಡೆಸಿ ಸೂಚನೆ ನೀಡಿದ ಪರಿಣಾಮ ಗಂಗಾವತಿ ತಾಲೂಕಿನಲ್ಲಿ ಕಳೆದ ವರ್ಷ ಶೇ.65ರಷ್ಟಿದ್ದ ಎಸ್ಸೆಸ್ಸೆಲ್ಸಿ ಫಲಿತಾಂಶವು ಈ ಬಾರಿ 93.28ರಷ್ಟು ಪ್ರಗತಿಯಾಗಿದೆ. ಕಳೆದ ಸಭೆಯಲ್ಲಿ ನೀಡಿದ ಸೂಚನೆಯಂತೆ ಗಂಗಾವತಿ ತಾಲೂಕು ವ್ಯಾಪ್ತಿಯಲ್ಲಿ ಶಾಲಾ ಕೊಠಡಿಗಳ ದುರಸ್ತಿ ಸೇರಿದಂತೆ ನಾನಾ ಕಾರ್ಯಗಳಿಗೆ ಅಂದಾಜು 22 ಕೋಟಿ ರೂ.ಗಳ ಅಂದಾಜು ಪತ್ರಿಕೆ ಸಿದ್ದಪಡಿಸಿ ಸಲ್ಲಿಸಲಾಗಿದೆ ಎಂದು ಗಂಗಾವತಿ ಬಿಇಓ ಅವರು ಸಭೆಗೆ ಮಾಹಿತಿ ನೀಡಿದರು. ಶಾಲಾ ಕೊಠಡಿಗಳ ನಿರ್ಮಾಣ ಸೇರಿದಂತೆ ನಾನಾ ಕಾರ್ಯಕ್ಕೆ ಗಂಗಾವತಿ ಕ್ಷೇತ್ರಕ್ಕೆ 80 ಕೋಟಿ ಅನುದಾನ ನಿಗದಿಯಾದ ಪೈಕಿ 40 ಕೋಟಿ ಅನುದಾನದಲ್ಲಿ ಈಗ ಕೆಲಸ ಆರಂಭಿಸಲಾಗುವುದು ಎಂದು ಶಾಸಕರು ತಿಳಿಸಿದರು.

# ಸೂಫಿಗಳಿಗಿಂತ ಮುಂಚೆ ಶಿವಶರಣರಿಂದ ಸಾಂಕೇತಿಕ ಭಾಷೆ



**ಧರ್ಮ–ಮರ್ಮ**

• ಡಾ.ಎಂ.ಮಹ್ಮದ್ ಬಾಷ ಗೂಳ್ಯಂ
ಪ್ರಧಾನ ಸಂಪಾದಕ, ಬೆಂಗಳೂರು

**ಕಳೆದ ಸಂಚಿಕೆಯಿಂದ...**


ಹನ್ನೊಂದನೇ ಶತಮಾನದ ಕೊನೆಯಲ್ಲಿ ಬಗ್‌ದಾದ್‌ನ ಗಝಾಲಿಯು ಸೂಫಿ ಧರ್ಮವನ್ನು ಚೆನ್ನಾಗಿ ಅರ್ಥ ಮಾಡಿಕೊಂಡು ಅದನ್ನು ವೈಜ್ಞಾನೀಕರಣಗೊಳಿಸಿದ ಮೊದಲನೇ ವ್ಯಕ್ತಿ ಎಂಬ ಪ್ರತೀತಿ ಇದೆ. ಈತನ ಪ್ರಭಾವದಿಂದ ಸೂಫಿ ತತ್ತ್ವಗಳಿಗೆ ಇಸ್ಲಾಂ ಧರ್ಮದಲ್ಲಿ ಹೆಚ್ಚಿನ ಮನ್ನಣೆ ಇದೆ. 11ನೇ ಶತಮಾನದ ಮಧ್ಯದಲ್ಲಿ ತೂಸಿ ಎಂಬ ಸ್ಥಳದಲ್ಲಿ ಜನಿಸಿದ್ದ ಈತ ಬಾಲ್ಯದಲ್ಲಿಯೇ ತಂದೆಯನ್ನು ಕಳೆದುಕೊಂಡು ಸೂಫಿ ಗೆಳೆಯರ ಬಳಗದಲ್ಲಿ ಬೆಳೆದು ಬಂದು ಸೂಫಿ ಪರಂಪರೆಯಲ್ಲಿ ಅದ್ವಿತೀಯನಾಗಿರುವನು.

ಸ್ಪೇನಿನ ಮೊದಲನೆಯ ಸೂಫಿ ಶೇಖ್ ಮೊಯಿನೋದ್ದಿನ್ ಮಹ್ಮದ ಇಚ್ಛೆ ಅಲಿ (ಕ್ರಿ.ಶ. 1168–1240) ಈತನನ್ನು ಸಾಮಾನ್ಯವಾಗಿ ಇಚ್ಛೆ ಅಲ್–ಅರಬಿ ಎಂದೇ ಕರೆ–ಯುತ್ತಾರೆ. ಆಷಬುಲ್ (ಅಕ್ಷರ) ಈತನ ಬಿರುದಾಗಿ–ತ್ತು. ಪೂರ್ತಿ ಏಷಿಯಾ ಖಂಡ ಸುತ್ತಾಡಿಕೊಂಡು ಬಂದು ಡಮಾಸ್ಕಸ್‌ನಲ್ಲಿ ಮರಣ ಹೊಂದಿದ.

ಬಹುತೇಕ ಸೂಫಿಗಳು ಈತನ ಬರಹ, ತತ್ತ್ವಗಳಿಂದ ಪ್ರಭಾವಿತರಾಗಿದ್ದಾರೆ ಎನ್ನುವ ಮಾತಿದೆ. ಈತನ ಸಾಹಿತ್ಯವು ಪರ್ಷಿಯಾ, ಅರೇಬಿಯಾ ಸೂಫಿಗಳಿಂದಲೂ ಗೌರವಕ್ಕೆ ಪಾತ್ರವಾಗಿದೆ. ಜಲಾಲುದ್ದೀನ್ ರೂಮಿಯು ಈತನಿಂದ ಪ್ರಭಾವಿತರಾದವರಲ್ಲಿ ಒಬ್ಬ. ಇರಾಖಿ, ಜಾಮಿ, ಶಾಬಿಸ್ತ್ರಿ, ಖಷಾನಿ ಇವರೆಲ್ಲರೂ ಶೇಖ್ ಇಚ್ಛೆ ಅಲಿ, ಈತನ ಶಿಷ್ಯಂದಿರ ಸಾಹಿತ್ಯದಿಂದ ಪ್ರಭಾವಿತರಾಗಿದ್ದರು.

ರೂಮಿಯು ಧಾರ್ಮಿಕ, ಆಧ್ಯಾತ್ಮಿಕ ವಿಷಯಗಳನ್ನೊಳಗೊಂಡಂತೆ ಮೂರು ಗದ್ಯ ಗ್ರಂಥಗಳನ್ನೂ, ಕಾವ್ಯದ ಬೃಹತ್‌ಸಂಕಲನ ಗ್ರಂಥವನ್ನು ರಚಿಸಿದ್ದಾನೆ. ಇದರಲ್ಲಿ 40,000 ಚೌಪದಿಗಳಿವೆ (ಮಸ್ನವಿ, ರೂಮಿ) ಎಂಬ ಕಾವ್ಯ ಸಂಕಲನದಲ್ಲಿ 26,000 ದ್ವಿಪದಗಳಿವೆ. ಇದರ ಆರು ಸಂಪುಟಗಳಿವೆ. ಹಸ್ತೆ ಖಿರಾನದರ್ ಝಖಾನೆ ಪಹಲ್ವಿ, (ಪರ್ಷಿಯನ್ ಭಾಷೆಯಲ್ಲಿ ಖಿರಾನ) ಸರಳವಾದ ಭಾಷೆಯಲ್ಲಿ ರಚಿಸಲಾಗಿದೆಯಾದರೂ ಸತ್ವಯುತವಾಗಿದೆ.

ಸೂಫಿ ಉಮರ್‌ಖಯಾಮನು ಜಗದ್ವಿಖ್ಯಾತ ಕವಿಗಳಲ್ಲಿ ಒಬ್ಬ. ಡಿ.ವಿ. ಗುಂಡಪ್ಪನವರ 'ಉಮರನ ವಸುಗೆ' ಮುಖಾಂತರ ಈತ ಕನ್ನಡಿಗರಿಗೂ ಪರಿಚಿತ. ಖುರಾಸನ್ನಿನ ವಿದ್ಯಾ ಕೇಂದ್ರವೆಂದೇ ಹೆಸರಾದ ನಿಶಾಪುರದಲ್ಲಿ ಉಮರ್ ಖಯಾಮನು ವಾಸವಾಗಿದ್ದ. ಈತ ಗಣಿತಜ್ಞನು, ಖಗೋಳಶಾಸ್ತ್ರಜ್ಞ, ವೈದ್ಯನಾಗಿದ್ದ, ಕವಿ, ಸೂಫಿ ತತ್ವಜ್ಞಾನಿ, ಅನುಭವಿ



ಏನೆಲ್ಲ ಬಲ್ಲವನಾಗಿದ್ದ..!

ಸೂಫಿಗಳು ಹೆಚ್ಚಾಗಿ ತಮ್ಮ ಕಾವ್ಯಗಳಲಿ ಸಾಂಕೇತಿಕ ಭಾಷೆಯನ್ನು ಬಳಸುತ್ತಾರೆ. ಉಮರ ಖಯಾಮನ ಕಾವ್ಯಗಳಲ್ಲಿ ಇದು ಹೆಚ್ಚಾಗಿ ಕಂಡುಬರುತ್ತದೆ. ಸುರೆಯು ಧರ್ಮಕ್ಕಾಗಿ, ಅಮಲು ಭಕ್ತಿಗಾಗಿ, ಸುರೆಕುಡಿಸುವ ಸಖಿ ಜಗತ್‌ಕರ್ತನಿಗಾಗಿ ಮತ್ತು ಮಧು ಶಾಲೆಯು ಈ ಜಗತ್ತಿಗಾಗಿ ಎಂಬ ಸಂಕೇತಗಳಾಗಿ ಬಳಸಿಕೊಳ್ಳುತ್ತಾನೆ.

ಶಿವಶರಣರು ಸೂಫಿಗಳಿಗಿಂತಲೂ ಮುಂಚೆಯೇ ಸಾಕೇಂತಿಕ ಭಾಷೆಯನ್ನು ಉಪಯೋಗಿಸಿಕೊಂಡು ಅಸಂಖ್ಯಾತ ವಚನಕಾರರು ವಚನಗಳನ್ನು ರಚಿಸಿದ್ದಾರೆ. ಇಂಥ ವಚನಗಳನ್ನು ಬೆಡಗಿನ ವಚನಗಳೆಂದು ಹೆಸರಿಸಲಾಗಿದೆ. ವಿಶ್ವದ ಇತರೆ ಭಾಷೆಗಳಲ್ಲೂ ಬೆಡಗಿನ ಸಾಹಿತ್ಯವಿದೆ. ಭಾರತದ ಇತರ ಭಾಷೆಗಳಲ್ಲೂ ಈ ಸಾಂಕೇತಿಕ ಬರವಣಿಗೆ ಆದರಣೀಯ. ತೆ–ೞರಿಕೆಗೆ ಕಾಣುವ ಅರ್ಥ ಒಂದಾದರೆ ಅಲ್ಲಿ ಬಳಸಿದ ಶಬ್ದಗಳ ಅರ್ಥವನ್ನು ಮಥಿಸಿದಾಗ ಉಂಟಾಗುವ ನಿಜವಾದ ಅರ್ಥ ಪರಮಾನಂದವನ್ನು ನೀಡುತ್ತದೆ. 13ನೇ ಶತಮಾನದ ಕೊನೆಯಲ್ಲಿ ಸೂಫಿ ಧರ್ಮಕ್ಕೆ ಪ್ರವರ್ಧಮಾನ ಸ್ಥಿತಿಯೊದಗಿ ಬಂದಿದ್ದು, ತಸವ್ವುಫ್ ಸೂಫಿ ಸಿದ್ಧಾಂತಗಳ ಆತ್ಮವಾಗಿದೆ. ಈ ಕಾಲದಿಂದಲೇ ಸೂಫಿ ಸಿದ್ಧಾಂತಗಳು ಸಾಹಿತ್ಯರೂಪು ಪಡೆದಿದ್ದವು. ಗಜಲು, ಮಸ್ನವಿ, ರುಬಾಯಾತ್–ದುವಾ (ಪ್ರಾರ್ಥನೆಗಳಂಥ ವಿವಿಧ ಪ್ರಕಾರದ ಸಾಹಿತ್ಯ ರಚನೆ).

ಮುಂದುವರೆಯುವುದು...

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)